


# ಬೆಳಗಾವಿ ವರದಿ

ಪ್ರಧಾನ ಸಂಪಾದಕರು: ಸತೀಶ್.ಬಿ.ಜಿ

BELAGAVI VARADI KANNADA DAILY

ಕನ್ನಡ ದಿನಪತ್ರಿಕೆ 24

Read,Share and Follow - www.belagavivaradi.com

Vol-04 | Issue: 274 | ₹ ಬೆಲೆ: 4 | Tuesday, 26, December,2023 | newsbelagavi@gmail.com | 9900332089 | Regn,No:G-2/PMG/KA/NK/BM/139/2021-23


## ಪ್ರಧಾನಿ ವಿರುದ್ಧ ಮಾನಹಾನಿಕರ' ಟೀಕೆ

### ಕಾಂಗ್ರೆಸ್ ಸಂಸದನ ವಿರುದ್ಧ ಪ್ರಕರಣ



ಅಹ್ಮದಾಬಾದ್: ಪ್ರಧಾನಿ ಮೋದಿ ವಿರುದ್ಧ ಮಾನಹಾನಿಕರ ಟೀಕೆಗಳನ್ನು ಮಾಡಿದ್ದಕ್ಕಾಗಿ ಕಾಂಗ್ರೆಸ್ ನ ಸಂಸದ ವಿರ್ಜಿ ತುಮ್ಮರ್ ವಿರುದ್ಧ ಪ್ರಕರಣ ದಾಖಲಾಗಿದೆ.

ಗುಜರಾತ್ ನ ಅಮ್ರೇಲಿ ಜಿಲ್ಲೆಯಲ್ಲಿ ಸೋಮವಾರ ನಡೆದ ಕಾರ್ಯಕ್ರಮವೊಂದರಲ್ಲಿ ಸಂಸದ ಮಾನಹಾನಿಕರ ಟೀಕೆ ಮಾಡಿದ್ದಾರೆ. ಆದರೆ, ಯಾರನ್ನೂ ನೋಯಿಸುವುದು ನನ್ನ ಉದ್ದೇಶವಲ್ಲ, ಸಾರ್ವಜನಿಕರಿಗಾಗಿ ಧ್ವನಿ ಎತ್ತುವುದಾಗಿದೆ ಎಂದು ಎಂದು ತುಮ್ಮರ್ ಹೇಳಿದ್ದಾರೆ.

ದೂರಿನ ಆಧಾರದ ಮೇಲೆ, ಅಮ್ರೇಲಿ ನಗರ ಪೊಲೀಸರು ತುಮ್ಮರ್ ವಿರುದ್ಧ ಕ್ರಿಮಿನಲ್ ಮಾನನಷ್ಟ ಮತ್ತು ಉದ್ದೇಶಪೂರ್ವಕ ಅವಮಾನಕ್ಕೆ ಸಂಬಂಧಿಸಿದಂತೆ ಭಾರತೀಯ ದಂಡ ಸಂಹಿತೆಯ (ಐಪಿಸಿ) 499, 500 ಮತ್ತು 504 ರ ಅಡಿಯಲ್ಲಿ ಪ್ರಕರಣ ದಾಖಲಿಸಿದ್ದಾರೆ ಎಂದು ಉಪ ಪೊಲೀಸ್ ವರಿಷ್ಠಾಧಿಕಾರಿ ಜೆ ಪಿ ಭಂಡಾರಿ ತಿಳಿಸಿದ್ದಾರೆ.

ಡಿ.22 ರ ಕಾರ್ಯಕ್ರಮದಲ್ಲಿ ಮಾತನಾಡಿದ್ದ ಕಾಂಗ್ರೆಸ್ ಸಂಸದ, ಮೋದಿ ಅವರನ್ನು ದಲಾಲ್ (ಮಧ್ಯವರ್ತಿ) ಎಂದು ಹೇಳಿದ್ದರು. ಈ ಹೇಳಿಕೆ ವಿರುದ್ಧ ಬಿಜೆಪಿಯ ಅಮ್ರೇಲಿ ಜಿಲ್ಲೆಯ ಪ್ರಧಾನ ಕಾರ್ಯದರ್ಶಿ ಮೆಹುಲ್ ಧೋರಾಜಿಯಾ ದೂರು ನೀಡಿದ್ದರು.

## ನಾಮಫಲಕಗಳಲ್ಲಿ ಕನ್ನಡ ಕಡ್ಡಾಯ: ಸಿಎಂ ಸಿದ್ದರಾಮಯ್ಯ

### ಅನ್ನ ಕೊಡುವ ನೆಲದ ನಿಯಮ ಪಾಲಿಸಿ

ಬೆಂಗಳೂರು: ಬೆಂಗಳೂರಿನ ವಾಣಿಜ್ಯ ಮಳಿಗೆಗಳ ನಾಮಫಲಕದಲ್ಲಿ ಶೇ 60 ಕನ್ನಡ ಅಕ್ಷರಗಳ ಬಳಕೆ ಕಡ್ಡಾಯಗೊಳಿಸಲಾಗಿದೆ. ಇದಕ್ಕೆ ಫೆಬ್ರುವರಿ 28 ಕಡೆಯ ದಿನವಾಗಿದ್ದು, ಕನ್ನಡವನ್ನು ಉಳಿಸಿ, ಕನ್ನಡತನವನ್ನು ಬೆಳೆಸುವ ಸಲುವಾಗಿ ಈ ನಿಯಮ ತರಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ಈ ಬಗ್ಗೆ ಫೇಸ್‌ಬುಕ್‌ನಲ್ಲಿ ಪೋಸ್ಟ್ ಮಾಡಿ ಮನವಿ ಮಾಡಿಕೊಂಡಿರುವ ಅವರು, ಕರ್ನಾಟಕದಲ್ಲಿ ಹುಟ್ಟಿ ಬೆಳೆದವರು, ಹೊರರಾಜ್ಯದಿಂದ ಇಲ್ಲಿಗೆ ಬಂದು ಬದುಕು ಕಟ್ಟಿಕೊಂಡವರನ್ನು ನಾವು



"ಕನ್ನಡಿಗ"ರೇ ಎಂದು ಭಾವಿಸಿದ್ದೇವೆ. ಕನ್ನಡ ನೆಲದಲ್ಲಿ ಕನ್ನಡಕ್ಕೇ ಮೊದಲ ಪ್ರಾಶಸ್ತ್ಯ, ಅನ್ನ ಕೊಡುವ ಈ ನೆಲದ ನಿಯಮ ಪಾಲನೆ ಮಾಡಬೇಕಿರುವುದು ಪ್ರತಿಯೊಬ್ಬರ ಕರ್ತವ್ಯ ಕೂಡ. ಕನ್ನಡವನ್ನು ಉಳಿಸಿ, ಕನ್ನಡತನವನ್ನು ಬೆಳೆಸುವ ಸಲುವಾಗಿ ಬೆಂಗಳೂರಿನ ವಾಣಿಜ್ಯ ಮಳಿಗೆಗಳ ನಾಮಫಲಕದಲ್ಲಿ ಶೇ.60 ಕನ್ನಡ ಅಕ್ಷರಗಳ ಬಳಕೆ ಕಡ್ಡಾಯಗೊಳಿಸಲಾಗಿದೆ. ಇದಕ್ಕೆ ಫೆಬ್ರವರಿ 28 ಕಡೆಯ ದಿನವಾಗಿದ್ದು, ನಿಯಮ ಪಾಲನೆ ಮಾಡಿ "ಹೆಮ್ಮೆಯ ಕನ್ನಡಿಗ"ರಾಗಿ ಎಂದು ಸಂದೇಶ ರವಾನಿಸಿದ್ದಾರೆ.

ವಾಣಿಜ್ಯ ಮಳಿಗೆಗಳ ನಾಮಫಲಕಗಳಲ್ಲಿ ಕಡ್ಡಾಯವಾಗಿ ಕನ್ನಡ ಬಳಸುವಂತೆ ಕ್ರಮ ಕೈಗೊಳ್ಳಬೇಕು ಎಂದು ಕರ್ನಾಟಕ ರಕ್ಷಣಾ ವೇದಿಕೆ ಸದಸ್ಯರು ಈ ಹಿಂದೆ ಮನವಿ ಮಾಡಿದ್ದರು.

## ಮಹಿಳೆ ಜತೆ ಅಸಭ್ಯ ವರ್ತನೆ

### ಸಂಕೇಶ್ವರ ಠಾಣೆ ಪಿಎಸ್‌ಐ ಸಸ್ಪೆಂಡ್



ಬೆಳಗಾವಿ: ದೂರು ನೀಡಲು ಬಂದ ಮಹಿಳೆಯೊಂದಿಗೆ ಅಸಭ್ಯವಾಗಿ ವರ್ತಿಸಿದ್ದ ಪ್ರಕರಣಕ್ಕೆ ಸಂಬಂಧಿಸಿದಂತೆ ಬೆಳಗಾವಿ ಜಿಲ್ಲೆಯ ಸಂಕೇಶ್ವರ ಠಾಣೆಯ ಪಿಎಸ್‌ಐ ಓರ್ವರನ್ನು ಅಮಾನತುಮಾಡಲಾಗಿದೆ.

ಸಂಕೇಶ್ವರ ಪೊಲೀಸ್ ಠಾಣೆಯ ಪಿಎಸ್‌ಐ ನರಸಿಂಹರಾಜು ಜೆ.ಡಿ ಅಮಾನತುಗೊಂಡವರು. ಕರ್ತವ್ಯ ಲೋಪ, ಅಶಿಸ್ತು, ದುರ್ನಡತೆ ಹಿನ್ನೆಲೆಯಲ್ಲಿ ಬೆಳಗಾವಿ ಎಸ್ ಪಿ, ನರಸಿಂಹರಾಜು ಅವರನ್ನು ಕರ್ತವ್ಯದಿಂದ ಅಮಾನತುಗೊಳಿಸಿ ಆದೇಶ ಹೊರಡಿಸಿದ್ದಾರೆ.

ಕೆಲ ದಿನಗಳ ಹಿಂದೆ ಮಹಿಳೆಯೊಬ್ಬರು ಸಂಕೇಶ್ವರ ಪೊಲೀಸ್ ಠಾಣೆಯಲ್ಲಿ ಪತಿ ವಿರುದ್ಧ ದೂರು ನೀಡಲು ಬಂದಿದ್ದರು. ಈ ವೇಳೆ ಈ ವೇಳೆ ಪಿಎಸ್‌ಐ ನರಸಿಂಹರಾಜು ಮಹಿಳೆಯೊಂದಿಗೆ ಅನುಚಿತವಾಗಿ ವರ್ತಿಸಿದ್ದಲ್ಲದೇ, ಆಕೆಯ ಮೊಬೈಲ್ ನಂಬರ್ ಪಡೆದು ಕಿರುಕುಳ ನೀಡುತ್ತಿದ್ದ. ಇದರಿಂದ ನೊಂದ ಮಹಿಳೆ ಎಸ್ ಪಿ ಅವರಿಗೆ ದೂರು ನೀಡಿದ್ದರು. ಇದೀಗ ಪಿಎಸ್ ಐ ನರಸಿಂಹ ರಾಜು ಅವರನ್ನು ಸಸ್ಪೆಂಡ್ ಮಾಡಲಾಗಿದೆ.

## ಬಿ.ಎಸ್. ಯಡಿಯೂರಪ್ಪ ಶಕುನಿ ಇದ್ದ ಹಾಗೆ: ಯತ್ನಾಳ್



ವಿಜಯಪುರ: ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಶಕುನಿ ಇದ್ದ ಹಾಗೆ ಎಂದು ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಕಿಡಿಕಾರಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಯತ್ನಾಳ್ ವಿರುದ್ಧ ದೂರು ನೀಡಲ್ಲ ಎಂದಿದ್ದ ಮಾಜಿ ಸಿಎಂ ಯಡಿಯೂರಪ್ಪ ಹೇಳಿಕೆಗೆ ತಿರುಗೇಟು ನೀಡಿದರು.

ಬಿಎಸ್ ಯಡಿಯೂರಪ್ಪ ನನ್ನ ವಿರುದ್ಧ ದೂರು ನೀಡಿದ್ದಾರೆ. ನನ್ನ ವಿರುದ್ಧ ದೂರು ನೀಡಿದರೂ ಅವರದ್ದು ಏನೂ ನಡೆಯುತ್ತಿಲ್ಲ. ಮರ್ಯಾದೆ ಹೋಗಬಾರದು ಎಂದು ದೂರು ನೀಡಿಲ್ಲ ಅಂತಿದ್ದಾರೆ ಎಂದರು.

ಯಡಿಯೂರಪ್ಪ ಭಾನುವಾರ ಹೇಳಿಕೆ ನೀಡಿದ್ದಾರೆ. ಈಗಾಗಲೇ ದೂರು ಕೊಟ್ಟಿದ್ದಾರೆ. ಕಂಪ್ಲೆಂಟ್ ಕೊಟ್ಟಿದ್ದಾರೆ. ಆದರೆ ಏನೂ ನಡೆಯುತ್ತಿಲ್ಲ. ಯತ್ನಾಳ್‌ಗೆ ನೋಟಿಸ್ ಕೊಡಲಿಲ್ಲ. ಮರ್ಯಾದೆ ಹೋಗಬಾರದು ಎಂದು ಈ ಹೇಳಿಕೆ ಕೊಡುತ್ತಿದ್ದಾರೆ. ಈ ವಿಚಾರದಲ್ಲಿ ಯಡಿಯೂರಪ್ಪ ಶಕುನಿ ಥರ ಆಡುತ್ತಿದ್ದಾರೆ ಎಂದು ದೂರಿದರು.

ಯಡಿಯೂರಪ್ಪ ಏನು ಹೇಳುತ್ತಾರೆ ಅದರ ಉಲ್ಟಾ ನಡೆದಿರುತ್ತದೆ. ಈ ಹಿಂದೆ ಶೋಭಾ ಕರಂದ್ಲಾಜೆ ಬಿಜೆಪಿ ರಾಜ್ಯಾಧ್ಯಕ್ಷೆಯಾಗಲಿ ಎಂದಿದ್ದರು. ವಿರೋಧ ಪಕ್ಷದ ನಾಯಕ ಆಗಲಿ ಎಂದಿದ್ದ ವಿಜಯೇಂದ್ರ ಹೈಕಮಾಂಡ್ ಬಳಿ ಪ್ಯಾಕ್ ಮಾಡಿಕೊಂಡು ಬಂದಿದ್ದ. ಅದಕ್ಕೆ ಆಗ ಯತ್ನಾಳ್ ವಿರೋಧ ಪಕ್ಷದ ನಾಯಕರಾಗಲು ತಕರಾರು ಇಲ್ಲ ಎಂದು ಹೇಳಿಕೆ ಕೊಟ್ಟಿದ್ದರು ಎಂದು ವಾಗ್ದಾಳಿ ನಡೆಸಿದರು.

## 'ಇಂಡಿಯಾ' ಮೈತ್ರಿಕೂಟದ ಸಭೆ ಕುರಿತು ಅತೃಪ್ತಿ ಹೊಂದಿಲ್ಲ: ನಿತೀಶ್ ಕುಮಾರ್



ಪಟ್ನಾ: 'ಪಕ್ಷಗಳನ್ನು ಒಗ್ಗೂಡಿಸುವ ಮೂಲಕ ಲೋಕಸಭಾ ಚುನಾವಣೆ ಎದುರಿಸುವುದು ನನ್ನ ಗುರಿಯಾಗಿದೆ. ಈ ದಿಕ್ಕಿನಲ್ಲಿಯೇ ನಾನು ಕೆಲಸ ಮಾಡುತ್ತಿದ್ದೇನೆ. ಈ ಮೊದಲೇ ಹೇಳಿದ ಹಾಗೆ ನನಗೆ ಯಾವುದೇ ಆಸೆಯಿಲ್ಲ' ಎಂದು ಬಿಹಾರ ಮುಖ್ಯಮಂತ್ರಿ ನಿತೀಶ್ ಕುಮಾರ್ ಹೇಳಿದರು.

ಮಾಜಿ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ಅವರ 99ನೇ ಜನ್ಮ ದಿನೋತ್ಸವದ ಅಂಗವಾಗಿ ಏರ್ಪಡಿಸಲಾಗಿದ್ದ ಕಾರ್ಯಕ್ರಮದಲ್ಲಿ ನಿತೀಶ್ ಕುಮಾರ್ ಭಾಗವಹಿಸಿದ್ದರು.

ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 'ಇತ್ತೀಚೆಗೆ ದೆಹಲಿಯಲ್ಲಿ ನಡೆದ ಇಂಡಿಯಾ ಮೈತ್ರಿಕೂಟದ ಸಭೆ ಬಗ್ಗೆ ನಾನು ಅತೃಪ್ತಿ ಹೊಂದಿದ್ದೇನೆ ಎಂಬುವುದು ಸುಳ್ಳು. ಸೀಟು ಹಂಚಿಕೆಯನ್ನು ಶೀಘ್ರದಲ್ಲೇ ಪೂರ್ಣಗೊಳಿಸುವ ಬಗ್ಗೆ ವಿಶ್ವಾಸ ಹೊಂದಿದ್ದೇನೆ' ಎಂದರು.

ಜೆಡಿಯು ನಲ್ಲಿ ಅಸಮಾಧಾನದ ಹೊಗೆಯಾಡುತ್ತಿದೆ ಎಂಬ ವದಂತಿಯ ಬಗ್ಗೆ ಪ್ರತಿಕ್ರಿಯೆ ನೀಡಿದ ಅವರು, 'ನಮ್ಮ ಪಕ್ಷದಲ್ಲಿ ಎಲ್ಲರೂ ಒಗ್ಗಟ್ಟಿನಿಂದ ಇದ್ದೇವೆ. ಬಿಜೆಪಿ ನಾಯಕರು ಏನು ಹೇಳುತ್ತಾರೆ ಎಂಬುವುದರ ಬಗ್ಗೆ ನನಗೆ ಆಸಕ್ತಿಯಿಲ್ಲ. ಅವರು ಏನು ಹೇಳಿದರೂ ಅದಕ್ಕೆ ಬೆಲೆ ಕೊಡುವುದಿಲ್ಲ. ರಾಜ್ಯದ ಸರ್ವಾಂಗೀಣ ಅಭಿವೃದ್ಧಿಯ ಬಗ್ಗೆ ಮಾತ್ರ ನಮಗೆ ಕಾಳಜಿಯಿದೆ' ಎಂದರು ಹೇಳಿದರು.

'ಯುವಕರಿಗೆ 10 ಲಕ್ಷ ಸರ್ಕಾರಿ ಉದ್ಯೋಗ ನೀಡುವುದಾಗಿ ಘೋಷಿಸಿದ್ದೇವೆ. ಶೀಘ್ರದಲ್ಲೇ ಈ ಗುರಿಯನ್ನು ಸಾಧಿಸುತ್ತೇವೆ. ಈಗಾಗಲೇ ಸುಮಾರು 5 ಲಕ್ಷ ಸರ್ಕಾರಿ ಉದ್ಯೋಗಗಳನ್ನು ಮಹಾಘಟಬಂಧನ್ ಸರ್ಕಾರ ಒದಗಿಸಿದೆ' ಎಂದು ಹೇಳಿದರು.

## ಕೋವಿಡ್ ರೂಪಾಂತರಿ ಜೆಎನ್.1:

## ನಂ.1 ಸ್ಥಾನದಲ್ಲಿ ಗೋವಾ



ನವದೆಹಲಿ: ಮಹಾಮಾರಿ ಕೊರೋನಾ ವೈರಸ್ನ ರೂಪಾಂತರಿ JN.1 ಮೊದಲ ಪ್ರಕರಣ ಕೇರಳದಲ್ಲಿ ಪತ್ತೆಯಾದ ನಂತರ ದೇಶಾದ್ಯಂತ ಆತಂಕ ಹೆಚ್ಚಾಗತೊಡಗಿದ್ದು, ಕೋವಿಡ್ ಸೋಂಕಿತರ ಜೊತೆ ಜೊತೆಗೆ ರೂಪಾಂತರಿ JN.1 ಪ್ರಕರಣಗಳ ಸಂಖ್ಯೆ 63ಕ್ಕೆ ಏರಿದೆ.

ದೇಶದ ಒಟ್ಟು 6 ರಾಜ್ಯಗಳಲ್ಲಿ (ಗೋವಾ, ಮಹಾರಾಷ್ಟ್ರ, ಕರ್ನಾಟಕ, ಕೇರಳ, ತಮಿಳುನಾಡು, ತೆಲಂಗಾಣ) ರೂಪಾಂತರಿ ವೈರಸ್ JN.1 ಪತ್ತೆಯಾಗಿದ್ದು, ಈ ಪೈಕಿ ಗೋವಾದಲ್ಲಿಯೇ ಅತೀ ಹೆಚ್ಚು ಪ್ರಕರಣಗಳು ಪತ್ತೆಯಾಗಿವೆ.

ಜೆಎನ್.1 ವೈರಸ್ ಗೋವಾದಲ್ಲಿ ಇದುವರೆಗೆ 34 ಪ್ರಕರಣಗಳ ಪತ್ತೆಯಾಗಿದ್ದರೆ, ಮಹಾರಾಷ್ಟ್ರ 9, ಕರ್ನಾಟಕ 8, ಕೇರಳ 6, ತಮಿಳುನಾಡು 4 ಮತ್ತು ತೆಲಂಗಾಣದಲ್ಲಿ 2 ಕೇಸ್ ಗಳು ಪತ್ತೆಯಾಗಿವೆ.

ಆದಾಗ್ಯೂ, ಇಲ್ಲಿಯವರೆಗೆ ಯಾವುದೇ ಪ್ರಕರಣಗಳಲ್ಲೂ ಕ್ಲಸ್ಟರ್ ಮಾದರಿ ವರದಿಯಾಗಿಲ್ಲ. ಸೋಂಕಿತರೆಲ್ಲರಲ್ಲೂ ಸೌಮ್ಯ ಲಕ್ಷಣಗಳು ಪತ್ತೆಯಾಗಿವೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

ಏತನ್ಮಧ್ಯೆ, ದೇಶದಲ್ಲಿ **COVID-19** ನ ಒಟ್ಟು ಸಕ್ರಿಯ ಪ್ರಕರಣಗಳ ಸಂಖ್ಯೆ 4,054ಕ್ಕೆ ತಲುಪಿದ್ದು, ಕೇರಳದಿಂದ ಅತಿ ಹೆಚ್ಚು ಪ್ರಕರಣಗಳು ವರದಿಯಾಗಿವೆ ಎಂದು ಆರೋಗ್ಯ ಸಚಿವಾಲಯದ ಅಂಕಿಅಂಶಗಳು ಮಾಹಿತಿ ನೀಡಿವೆ.

# ಸಂಸದರ ಅಮಾನತನ್ನು ಆಡಳಿತ ಪಕ್ಷ ಅಸ್ತ್ರವಾಗಿಸಿಕೊಂಡಿದೆ

### ಸಂಸದರ ಅಮಾನತನ್ನು ಆಡಳಿತ ಪಕ್ಷ ಅಸ್ತ್ರವಾಗಿಸಿಕೊಂಡಿದೆ: ಸಭಾಪತಿಗೆ ಪತ್ರದ ಮೂಲಕ ಉತ್ತರಿಸಿದ ಮಲ್ಲಿಕಾರ್ಜುನ ಖರ್ಗೆ

ನವದೆಹಲಿ: ಆಡಳಿತಾರೂಢ ಪಕ್ಷ ಪ್ರಜಾಪ್ರಭುತ್ವವನ್ನು ನಾಶಪಡಿಸಲು, ಸಂಸತ್ತಿನ ನಿಯಮಗಳನ್ನು ಹಾಳುಮಾಡಲು ಸಂಸದರ ಅಮಾನತನ್ನು ಅಸ್ತ್ರವಾಗಿಸಿಕೊಂಡಿದೆ ಎಂದು ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ ಅವರು ಸೋಮವಾರ ಹೇಳಿದ್ದಾರೆ.

ಸಂಸದರ ಅಮಾನತು ವಿಚಾರ ಕುರಿತು ಚರ್ಚೆ ನಡೆಸಲು ಖರ್ಗೆಯವರನ್ನು ಉಪರಾಷ್ಟ್ರಪತಿ ಮತ್ತು ರಾಜ್ಯಸಭಾ ಸಭಾಪತಿ ಜಗದೀಪ್ ಧನಕರ್ ಅವರು ತಮ್ಮ ನಿವಾಸಕ್ಕೆ ಆಹ್ವಾನಿಸಿದ್ದರು. ಆದರೆ, ಮಲ್ಲಿಕಾರ್ಜುನ ಖರ್ಗೆಯವರು ಅವರ ನಿವಾಸಕ್ಕೆ ಹೋಗಿಲ್ಲ. ಬದಲಿಗೆ ಪತ್ರ ಬರೆದು ಉತ್ತರಿಸಿದ್ದಾರೆ. ಅಲ್ಲದೆ, ಭೇಟಿಯಾಗದಿರಲು ಕಾರಣವನ್ನೂ ಪತ್ರದಲ್ಲಿ ತಿಳಿಸಿದ್ದು, ದೆಹಲಿಗೆ ಮರಳಿದ ಕೂಡಲೇ ಭೇಟಿ ಮಾಡುವುದಾಗಿ ತಿಳಿಸಿದ್ದಾರೆ.

ಪತ್ರದಲ್ಲಿ ಆಡಳಿತಾರೂಢ ಪಕ್ಷದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಲೋಕಸಭೆ ಮತ್ತು ರಾಜ್ಯಸಭೆಯ ಸಂಸದರ ಸಾಮೂಹಿಕ ಅಮಾನತು ಸರ್ಕಾರದಿಂದ ಪೂರ್ವನಿರ್ಧರಿತ ಮತ್ತು ಪೂರ್ವ ಯೋಜಿತವಾಗಿದೆ ಎಂದು ತೋರುತ್ತದೆ ಎಂದು ಆರೋಪಿಸಿದ್ದಾರೆ.

ಸಂಸದರನ್ನು ಅಮಾನತು ಮಾಡುವ ಮೂಲಕ 146 ಸಂಸದರ ಧ್ವನಿಯನ್ನು ಸರಕಾರ ಪರಿಣಾಮಕಾರಿಯಾಗಿ ಅಡಗಿಸುತ್ತಿದೆ. ಡಿಸೆಂಬರ್ 14 ರಂದು ನಡೆದ ಭದ್ರತಾ ಲೋಪ ಘಟನೆ ಬಗ್ಗೆ ಸಂಸತರ ಅಮಾನತುಗೊಳಿಸುವುದಕ್ಕೂ ಮುನ್ನ ಕೇಂದ್ರ ಗೃಹ ಸಚಿವ ಅಮಿತ್ ಶಾ



ಅವರಿಂದ ಪ್ರತಿಕ್ರಿಯೆ ಕೇಳಲಾಗಿತ್ತು. ಆದರೆ, ಸದನದಲ್ಲಿ ಸಚಿವರು ಹೇಳಿಕೆಯನ್ನು ನೀಡಲಿಲ್ಲ. ಸದನದಲ್ಲಿ ಹೇಳಿಕೆ ನೀಡದೆ ಮಾಧ್ಯಮಗಳಲ್ಲಿ ಹೇಳಿಕೆ ನೀಡಿದ್ದರು. ಈ ಮೂಲಕ ಪ್ರಜಾಪ್ರಭುತ್ವ ಮಂದಿರವನ್ನು ಅಪಹಾಸ್ಯ ಮಾಡಿರುವುದು ವಿಷಾದನೀಯವಾದದ್ದು.

ಗೃಹ ಸಚಿವರು ರಾಜ್ಯಸಭೆಗೆ ಹಾಜರಾಗುವುದಕ್ಕೂ ಮುನ್ನು ಹೆಚ್ಚಿನ ಸಂಖ್ಯೆಯ ವಿರೋಧ ಪಕ್ಷದ ಸಂಸದರನ್ನು ಅಮಾನತುಗೊಳಿಸಲಾಗುವುದು ಎಂದು ಕೇಂದ್ರ ಸಚಿವರೊಬ್ಬರು ವಿರೋಧ ಪಕ್ಷದ ನಾಯಕರಿಗೆ ತಿಳಿಸಿದ್ದರು. ಇಂತಹ ಬೆದರಿಕೆಗಳ ಬಗ್ಗೆ ಸಭಾಧ್ಯಕ್ಷಕರು ಪರಿಶೀಲಿಸಬೇಕೆಂದು ನಾವು ಬಯಸುತ್ತೇವೆ.

ಗಡಿಯಲ್ಲಿ ಚೀನಾ ಅತಿಕ್ರಮಣ, ಮಣಿಪುರದಲ್ಲಿ ಅಶಾಂತಿ ಸೇರಿದಂತೆ ಹಲವು ಗಂಭೀರ ವಿಚಾರಗಳ ಕುರಿತ ಚರ್ಚೆಯಲ್ಲಿ ಸರ್ಕಾರ ತಪ್ಪಿಸಿಕೊಂಡಿದೆ. ಇದನ್ನು ಸಭಾಧ್ಯಕ್ಷರು ಗಮನಿಸಬೇಕು. ಸಭಾಧ್ಯಕ್ಷರು ಸದನದ ಕಾವಲುಗಾರರಾಗಿದ್ದು, ಸದನದ ಘನತೆ ಕಾಪಾಡಬೇಕು, ಸಂಸದೀಯ ಸವಲತ್ತುಗಳನ್ನು ಕಾಪಾಡಬೇಕು. ಸಂಸತ್ತಿನಲ್ಲಿ ಕಲಾಪ, ಚರ್ಚೆ ಮತ್ತು ಉತ್ತರದ ಮೂಲಕ ಸರ್ಕಾರವನ್ನು ಹೊಣೆಗಾರರನ್ನಾಗಿ ಮಾಡುವ ಹಕ್ಕು ಜನರಿಗಿದೆ.

ಹೀಗಾಗಿ ಅದನ್ನು ರಕ್ಷಿಸುವಲ್ಲಿ ನಾವು ಮುಂಚೂಣಿಯಲ್ಲಿರಬೇಕು. ಆದರೆ, ಚರ್ಚೆಯಿಲ್ಲದೆ ಮಸೂದೆಗಳನ್ನು ಅಂಗೀಕರಿಸಿದ್ದಕ್ಕಾಗಿ ಮತ್ತು ಸರ್ಕಾರದಿಂದ ಉತ್ತರದಾಯಿತ್ವವನ್ನು ಕೇಳದಿದ್ದಕ್ಕಾಗಿ ಸಭಾಧ್ಯಕ್ಷ ಮೇಲೆ ಅಸಮಾಧಾನವಿದೆ. ಸದನದಲ್ಲಿ ಕಲಾಪ ಮುಂದುವರೆಯಬೇಕೆಂಬ ಸಭಾಧ್ಯಕ್ಷ ಮಾತನ್ನು ನಾನು ಒಪ್ಪುತ್ತೇನೆ. ಆದರೆ, ಸದನದಲ್ಲಿ ಚರ್ಚೆ ನಡೆಸಲು ಸರ್ಕಾರ ಉತ್ಸುಕವಾಗಿರದಿದ್ದರೆ, ಚರ್ಚೆಗಳಿಗೆ ಉತ್ತರ ಸಿಗುವುದಿಲ್ಲ ಎಂದು ಹೇಳಿದ್ದಾರೆ.



## 'ಅಜಾತಶತ್ರು' ವಾಜಪೇಯಿ ಜನ್ಮದಿನ

### 'ಸದೈವ್ ಅಟಲ್' ಸ್ಮಾರಕಕ್ಕೆ ರಾಷ್ಟ್ರಪತಿ, ಪ್ರಧಾನಿ ಮೋದಿ ಸೇರಿ ಗಣ್ಯರಿಂದ ಪುಷ್ಪ ನಮನ

ನವದೆಹಲಿ: ರಾಷ್ಟ್ರ ಕಂಡ ಅಪರೂಪದ ರಾಜಕಾರಣಿ, ಅಜಾತಶತ್ರು ಪ್ರಧಾನಿ ಎಂದೇ ಖ್ಯಾತರಾಗಿದ್ದ ದಿವಂಗತ ಅಟಲ್ ಬಿಹಾರಿ ಅವರ 99ನೇ ಜನ್ಮದಿನ ಅಂಗವಾಗಿ, ರಾಷ್ಟ್ರಪತಿ ದ್ರೌಪದಿ ಮುರ್ಮು, ಪ್ರಧಾನಮಂತ್ರಿ ನರೇಂದ್ರ ಮೋದಿ ಸೇರಿದಂತೆ ಹಲವು ಗಣ್ಯರು ಮಾಜಿ ಪ್ರಧಾನಿ ಸ್ಮಾರಕಕ್ಕೆ ಪುಷ್ಪ ನಮನ ಸಲ್ಲಿಸಿದರು.

ಉಪ ರಾಷ್ಟ್ರಪತಿ ಜಗದೀಪ್ ಧನ್ಕರ್, ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್, ಅನುರಾಗ್ ಠಾಕೂರ್, ಅಶ್ವಿನಿ ವೈಷ್ಣವ್, ಜಿತೇಂದ್ರ ಸಿಂಗ್ ತೋಮರ್ ಸೇರಿದಂತೆ ಹಲವು ಗಣ್ಯರು ಅಟಲ್ ಸ್ಮಾರಕಕ್ಕೆ ತಮ್ಮ ಗೌರವವನ್ನು ಸಲ್ಲಿಸಿದರು.

ಇದಕ್ಕೂ ಮೊದಲು ಟ್ವೀಟ್ ಮೂಲಕ ಅಟಲ್ ಬಿಹಾರಿ ವಾಜಪೇಯಿ ಜನ್ಮದಿನದ ಶುಭಾಶಯ ತಿಳಿಸಿದ ಪ್ರಧಾನಿ ಮೋದಿ, ದೇಶದ ಎಲ್ಲಾ ಜನತೆಯ ಪರವಾಗಿ, ಮಾಜಿ ಪ್ರಧಾನಿ ಗೌರವಾನ್ವಿತ ಅಟಲ್ ಬಿಹಾರಿ ವಾಜಪೇಯಿ ಅವರ ಜನ್ಮದಿನದಂದು ಗೌರವವನ್ನು ಸಲ್ಲಿಸುತ್ತಿದ್ದೇನೆ. ವಾಜಪೇಯಿಯವರು ತಮ್ಮ ಜೀವನದುದ್ದಕ್ಕೂ ರಾಷ್ಟ್ರ ನಿರ್ಮಾಣದ ವೇಗವನ್ನು ಹೆಚ್ಚಿಸುವಲ್ಲಿ ನಿರತರಾಗಿದ್ದರು. ಭಾರತಮಾತೆ ಕುರಿತು ಅವರಲ್ಲಿದ್ದ ಸಮರ್ಪಣೆ ಮತ್ತು ಸೇವೆಯು ಸ್ಫೂರ್ತಿಕರವಾಗಿದೆ ಎಂದು ಹೇಳಿದ್ದಾರೆ.

## ಹೆರಾಯಿನ್ ಕಳ್ಳಸಾಗಣೆ ಯತ್ನ ವಿಫಲಗೊಳಿಸಿದ ಬಿಎಸ್‌ಎಫ್; ಮೂವರು ಯುವಕರ ಬಂಧನ



ಅಮೃತಸರ: ಗಡಿ ಭದ್ರತಾ ಪಡೆ ಪಂಜಾಬ್‌ನ ಅಮೃತಸರದಲ್ಲಿ ಹೆರಾಯಿನ್ ಕಳ್ಳಸಾಗಣೆಯೊಂದಿಗೆ ತಪ್ಪಿಸಿಕೊಳ್ಳಲು ಪ್ರಯತ್ನಿಸುತ್ತಿದ್ದ ಮೂವರು ಯುವಕರನ್ನು ಬಂಧಿಸಿದೆ. ಕಳ್ಳಸಾಗಣೆದಾರರಿಂದ ಒಟ್ಟು 525 ಗ್ರಾಂ ಹೆರಾಯಿನ್ ವಶಪಡಿಸಿಕೊಂಡಿರುವುದಾಗಿ ಬಿಎಸ್‌ಎಫ್ ತಿಳಿಸಿದೆ. ಭಾನುವಾರ ಅಮೃತಸರ ಜಿಲ್ಲೆಯ ಧಾನೋ ಕಲಾನ್ ಗ್ರಾಮದ ಬಳಿ ಕಳ್ಳಸಾಗಣೆ ಚಟುವಟಿಕೆಗಳ ಬಗ್ಗೆ ಬಿಎಸ್ ಎಫ್ ನ ವಿಶೇಷ ಮಾಹಿತಿ ಆಧಾರದ ಮೇಲೆ, ವಿಶೇಷ ಕಾರ್ಯಾಚರಣೆಯನ್ನು ಯೋಜಿಸಲಾಗಿತ್ತು. 12–15 ರ ಸುಮಾರಿನಲ್ಲಿ ಹೊಲದಲ್ಲಿ ಇಬ್ಬರು ಶಂಕಿತ ಕಳ್ಳಸಾಗಣೆದಾರರ ಚಲನವಲನವನ್ನು ಡ್ರೋನ್ ನಲ್ಲಿ ಗಮನಿಸಲಾಯಿತು. ತಕ್ಷಣವೇ ಇಬ್ಬರೂ ಕಳ್ಳಸಾಗಣೆದಾರರನ್ನು ಬಂಧಿಸಲಾಯಿತು. ಅವರು ಹೆರಾಯಿನ್ ರವಾನೆಯೊಂದಿಗೆ ತಪ್ಪಿಸಿಕೊಳ್ಳಲು ಪ್ರಯತ್ನಿಸುತ್ತಿದ್ದರು ಎಂದು ಬಿಎಸ್‌ಎಫ್ ಬಿಡುಗಡೆ ಮಾಡಿರುವ ಹೇಳಿಕೆಯಲ್ಲಿ ತಿಳಿಸಿದೆ. "

## ಉತ್ತರ ಪ್ರದೇಶ: ಮಸೀದಿ ಗೋಡೆ ಮೇಲೆ 'ಜೈ ಶ್ರೀರಾಮ್' ಬರಹ; ಕ್ರಮಕ್ಕೆ ಆಗ್ರಹ

ಅಲಿಗಢ: ಉತ್ತರ ಪ್ರದೇಶದ ಅಲಿಗಢದಲ್ಲಿರುವ ಮಸೀದಿಯೊಂದರ ಗೋಡೆಗಳ ಮೇಲೆ 'ಜೈ ಶ್ರೀರಾಮ್' ಎಂಬ ಘೋಷಣೆಗಳನ್ನು ಬರೆಯಲಾಗಿದ್ದು ಘಟನೆಯ ವಿಡಿಯೋ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದೆ.

ಉತ್ತರ ಪ್ರದೇಶದ ಅಲಿಗಢ್‌ನ ದೆಹಲಿ ಗೇಟ್ ಮಸೀದಿಯೊಂದರ 'ಜೈ ಶ್ರೀರಾಮ್' ಎನ್ನುವ ಬರಹವನ್ನು ಬರೆಯಲಾಗಿದೆ. ಆ ಬಳಿಕ ಗೋಡೆಯನ್ನು ಧ್ವಂಸ



ಮಾಡಲಾಗಿದೆ. ಈ ಘಟನೆಯ ವಿಡಿಯೋ ಕ್ಯಾಮೆರಾದಲ್ಲಿ ಸೆರೆಯಾಗಿದೆ.

ಘಟನೆ ನಂತರ ಸಮಾಜವಾದಿ ಪಕ್ಷದ (ಎಸ್‌ಪಿ) ನಿಯೋಗವು ಪೊಲೀಸರನ್ನು ಭೇಟಿ ಮಾಡಿ, ಕ್ರಮ ಕೈಗೊಳ್ಳುವಂತೆ ಆಗ್ರಹಿಸಿದ್ದಾರೆ.

ಈ ಬಗ್ಗೆ ಔಪಚಾರಿಕ ದೂರು ದಾಖಲಿಸಲಾಗಿದೆ. ಶೀಘ್ರದಲ್ಲಿ ಈ ಕೃತ್ಯದಲ್ಲಿ ಭಾಗಿಯಾದವರ ವಿರುದ್ಧ ಸೂಕ್ತ ಕ್ರಮಕೈಗೊಳ್ಳಲಾಗುವುದು ಎಂದು ಪೊಲೀಸ್ ವರಿಷ್ಠಾಧಿಕಾರಿ ಮೃಗಾಂಕ್ ಶೇಖರ್ ಪಾಠಕ್ ತಿಳಿಸಿದ್ದಾರೆ.

ನಿಯೋಗದಲ್ಲಿದ್ದ ಸಮಾಜವಾದಿ ಪಕ್ಷದ ಮುಖಂಡ ಮನೋಜ್ ಯಾದವ್ ಅವರು ಮಾತನಾಡಿ, ಕೆಲವು ಸಮಾಜ ವಿರೋಧಿಗಳು ಇಂತಹ ಚಟುವಟಿಕೆಗಳಲ್ಲಿ ತೊಡಗುವ ಮೂಲಕ ನಗರದ ವಾತಾವರಣವನ್ನು ಹಾಳು ಮಾಡಿದ್ದಾರೆ. ಕೂಡಲೇ ಕಿಡಿಗೇಡಿಗಳ ವಿರುದ್ಧ ಕ್ರಮ ಕೈಗೊಳ್ಳದಿದ್ದರೆ ಪ್ರತಿಭಟನೆ ನಡೆಸಲಾಗುವುದು ಎಂದು ಎಚ್ಚರಿಸಿದ್ದಾರೆ.


## ರೈತ ವಿರೋಧಿ ಕಾನೂನುಗಳ ವಿರುದ್ಧ ಫೆಬ್ರುವರಿ 26ರಂದು ರಾಷ್ಟ್ರವ್ಯಾಪಿ 'ದೆಹಲಿ ಚಲೋ' ಪ್ರತಿಭಟನೆ

ಬೆಂಗಳೂರು: ಸಂಯುಕ್ತ ಕಿಸಾನ್ ಮೋರ್ಚಾವು ಕೇಂದ್ರ ಸರ್ಕಾರದ 'ರೈತ ವಿರೋಧಿ' ಕಾನೂನುಗಳು ಮತ್ತು ಇತರ ಸಮಸ್ಯೆಗಳ ವಿರುದ್ಧ ಧ್ವನಿ ಎತ್ತಲು ಫೆಬ್ರುವರಿ 26ರಂದು ರಾಷ್ಟ್ರವ್ಯಾಪಿ 'ದೆಹಲಿ ಚಲೋ' ಪ್ರತಿಭಟನೆಗೆ ಕರೆ ನೀಡಿದೆ. ದೇಶದಾದ್ಯಂತ ಐದು ಲಕ್ಷಕ್ಕೂ ಹೆಚ್ಚು ರೈತರು ರಾಷ್ಟ್ರ ರಾಜಧಾನಿಯಲ್ಲಿ ಸೇರುವ ನಿರೀಕ್ಷೆಯಿದೆ.

ಭಾನುವಾರ ಬೆಂಗಳೂರಿನಲ್ಲಿ ಎಂಟು ರಾಜ್ಯಗಳ ರೈತ ಮುಖಂಡರು ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಪ್ರತಿಭಟನಾ ಕರೆಯನ್ನು ಘೋಷಿಸಿದರು.

'ನಾವು ಕಳೆದ 15 ದಿನಗಳಲ್ಲಿ ವಿವಿಧ ಪ್ರದೇಶಗಳಲ್ಲಿ ಮಹಾಪಂಚಾಯತ್‌ಗಳನ್ನು ನಡೆಸುತ್ತಿದ್ದೇವೆ ಮತ್ತು ಮುಂಬರುವ ದಿನಗಳಲ್ಲಿ ಇಂತಹ ಹೆಚ್ಚಿನ ಚರ್ಚೆಗಳನ್ನು ಯೋಜಿಸಿದ್ದೇವೆ' ಎಂದು ಪಂಜಾಬ್‌ನ ರೈತ ಮುಖಂಡ ಜಗಜೀತ್ ಸಿಂಗ್ ದಲ್ಲೆವಾಲ್ ಹೇಳಿದರು.

C2+50% ಸೂತ್ರದ ಆಧಾರದ ಮೇಲೆ ಖಾತರಿಪಡಿಸಿದ ಕನಿಷ್ಠ ಬೆಂಬಲ ಬೆಲೆ (ಎಂಎಸ್‌ಪಿ) ನೀಡುವುದು ಸೇರಿದಂತೆ



ಏಳು ಬೇಡಿಕೆಗಳನ್ನು ರೈತ ಮುಖಂಡರು ಮುಂದಿಟ್ಟರು. ಇದರಲ್ಲಿ ಬಂಡವಾಳದ ವೆಚ್ಚ ಮತ್ತು ರೈತರಿಗೆ ಸಾಲದ ಜೊತೆಗೆ ಶೇ 50 ರಷ್ಟು ಆದಾಯವನ್ನು ಒದಗಿಸಲು ಭೂಮಿಯ ಮೇಲಿನ ಬಾಡಿಗೆಯನ್ನು ಒಳಗೊಂಡಿರುತ್ತದೆ. ಎಲ್ಲಾ ರೈತರಿಗೆ ಪರಿಹಾರ, ರಾಜ್ಯ ಸರ್ಕಾರದ ಭೂ ಸ್ವಾಧೀನ ಕಾನೂನುಗಳನ್ನು ಹಿಂಪಡೆಯುವುದು ಮತ್ತು ಕೃಷಿ ಉತ್ಪನ್ನಗಳ ಮೇಲಿನ ಆಮದು ಸುಂಕಗಳ ಹೆಚ್ಚಳ ಸೇರಿದೆ.

'ನಾವು ವಿವಿಧ ಭಾಷೆಗಳನ್ನು ಅರ್ಥಮಾಡಿಕೊಳ್ಳುತ್ತೇವೆ. ಆದರೆ ಖಾಸಗೀಕರಣದ ಕಡೆಗೆ ಸರ್ಕಾರದ ಪಕ್ಷಪಾತವನ್ನು ನಾವು ಒಟ್ಟಿಗೆ ಅರ್ಥಮಾಡಿಕೊಳ್ಳುತ್ತೇವೆ.

ನಮ್ಮ ಧ್ವನಿಯು ಪ್ರಧಾನಿ ನರೇಂದ್ರ ಮೋದಿ ಅವರಿಗೆ ಕೇಳಿಸುವಂತೆ ಮಾಡಲು ಸಾಕಷ್ಟು ಜೋರಾಗಿ ಪ್ರತಿಧ್ವನಿಸುವಂತೆ ಮಾಡಬೇಕು.

ನಾವು ಏಳು ಪ್ರಮುಖ ಬೇಡಿಕೆಗಳ ಮೇಲೆ ಗಮನ ಕೇಂದ್ರೀಕರಿಸುವ ದೆಹಲಿ ಚಲೋ ಕಾರ್ಯಕ್ರಮದ ಭಾಗವಾಗಿ ಪ್ರತಿಭಟನೆಯನ್ನು ನಡೆಸಲು ಸಜ್ಜಾಗಿದ್ದೇವೆ' ಎಂದು ಒಡಿಶಾದ ರೈತ ನಾಯಕ ಸಚಿನ್ ಮೊಹಾಪಾತ್ರ ಹೇಳಿದರು.

ಸಭೆಯಲ್ಲಿ, ನಾಯಕರು ಪ್ರಜಾಸತ್ತಾತ್ಮಕ ಮತ್ತು ಜಾತ್ಯತೀತ ಮೌಲ್ಯಗಳನ್ನು ರಕ್ಷಿಸಲು ಒತ್ತು ನೀಡಿದರು. ಸಂಸತ್ತಿನಲ್ಲಿ ವಿರೋಧ ಪಕ್ಷದ ಸದಸ್ಯರ ಅಮಾನತು ಮತ್ತು ಕುಸ್ತಿಪಟುಗಳ ವಿಚಾರವಾಗಿ ಸರ್ಕಾರದ ವರ್ತನೆಯ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದರು. ಈ ಕೃತ್ಯಗಳು ದೇಶದ ಪ್ರಜಾಸತ್ತಾತ್ಮಕ ಮೌಲ್ಯಗಳಿಗೆ ಹಾನಿಕಾರಕ ಚಿಹ್ನೆಗಳು ಎಂದು ನಾಯಕರು ಬಣ್ಣಿಸಿದ್ದಾರೆ.

## ಹಿಂದಿನ ಸರ್ಕಾರಗಳ ಎಲ್ಲಾ ಯೋಜನೆಗಳೂ ಮುಂದುವರೆಯಲಿವೆ: ರಾಜಸ್ಥಾನ ಸಿಎಂ



ಜೈಪುರ: ರಾಜಸ್ಥಾನದಲ್ಲಿ ಹಿಂದಿನ ಸರ್ಕಾರಗಳ ಎಲ್ಲಾ ಯೋಜನೆಗಳೂ ಮುಂದುವರೆಯಲಿವೆ ಎಂದು ರಾಜಸ್ಥಾನ ಸಿಎಂ ಭಜನ್ ಲಾಲ್ ಶರ್ಮಾ ಹೇಳಿದ್ದಾರೆ.

ಹಿಂದಿನ ಕಾಂಗ್ರೆಸ್ ಸರ್ಕಾರ ಜಾರಿಗೆ ತಂದಿರುವ ಯಾವುದೇ ಜನಕಲ್ಯಾಣ ಯೋಜನೆಗಳನ್ನೂ ರದ್ದುಗೊಳಿಸಲಾಗುವುದಿಲ್ಲ ಎಂದು ಭಜನ್ ಲಾಲ್ ಶರ್ಮ ತಿಳಿಸಿದ್ದಾರೆ.

ಬಿಜೆಪಿ ಅಟಲ್ ಬಿಹಾರಿ ವಾಜಪೇಯಿ ಅವರ ಜನ್ಮದಿನದ ಅಂಗವಾಗಿ ಆಯೋಜಿಸಿದ್ದ ಉತ್ತಮ ಆಡಳಿತ ದಿನ ಕಾರ್ಯಕ್ರಮದಲ್ಲಿ ಸಿಎಂ ಮಾತನಾಡುತ್ತಿದ್ದರು.

ಸಾರ್ವಜನಿಕ ಕಲ್ಯಾಣ ಉದ್ದೇಶಗಳಿಗಾಗಿ ಹಿಂದಿನ ಕಾಂಗ್ರೆಸ್ ಸರ್ಕಾರ ಜಾರಿಗೆ ತಂದಿದ್ದ ಕಾರ್ಯಕ್ರಮಗಳನ್ನು ಬಿಜೆಪಿಯ ಹೊಸ ಸರ್ಕಾರ ರದ್ದುಗೊಳಿಸಲಾಗುತ್ತದೆ ಎಂದು ಕಾಂಗ್ರೆಸ್ ಆರೋಪಿಸಿತ್ತು, ಆದರೆ ಈ ಬಗ್ಗೆ ಸ್ಪಷ್ಟನೆ ನೀಡಿರುವ ಸಿಎಂ ಎಲ್ಲಾ ಯೋಜನೆಗಳೂ ಮುಂದುವರೆಯಲಿವೆ ಎಂದು ತಿಳಿಸಿದ್ದಾರೆ.

ಸರ್ಕಾರಿ ಆಸ್ಪತ್ರೆಗಳಲ್ಲಿ ಉಚಿತ ಔಷಧಿಗಳ ಲಭ್ಯತೆಯನ್ನು ಮುಂದುವರಿಸಲಾಗುವುದು ಮತ್ತು ಅಗತ್ಯ ಔಷಧಿಗಳ ಸಂಖ್ಯೆಯನ್ನು ಹೆಚ್ಚಿಸಲಾಗುವುದು ಎಂದು ಮುಖ್ಯಮಂತ್ರಿ ಹೇಳಿದರು.

ಮಾಜಿ ಪ್ರಧಾನಿ ವಾಜಪೇಯಿ ಅವರು ಬಡವರ ಕಲ್ಯಾಣಕ್ಕಾಗಿ ಯೋಜನೆಗಳನ್ನು ಮಾಡಿದರು ಮತ್ತು ಪ್ರಧಾನಿ ನರೇಂದ್ರ ಮೋದಿ ಅದನ್ನು ಮತ್ತಷ್ಟು ಮುಂದಕ್ಕೆ ಕೊಂಡೊಯ್ದರು ಎಂದು ಶರ್ಮಾ ಹೇಳಿದ್ದಾರೆ.

ಉಪಮುಖ್ಯಮಂತ್ರಿ ದಿಯಾ ಕುಮಾರಿ ಮತ್ತು ಪಕ್ಷದ ಇತರ ನಾಯಕರು ವಾಜಪೇಯಿ ಅವರ ಜನ್ಮದಿನದಂದು ಅವರಿಗೆ ಶ್ರದ್ಧಾಂಜಲಿ ಸಲ್ಲಿಸಿದರು. ಸರ್ಕಾರಿ ಸ್ವಾಮ್ಯದ ಸವಾಯಿ ಮಾನ್ ಸಿಂಗ್ ಆಸ್ಪತ್ರೆಗೆ ಸಿಎಂ ದಿಢೀರ್ ಭೇಟಿ ನೀಡಿ, ಸೌಲಭ್ಯದ ಸ್ಥಿತಿಯನ್ನು ಸುಧಾರಿಸಲು ಅಧಿಕಾರಿಗಳಿಗೆ ಸೂಚನೆ ನೀಡಿದರು.

# ಲೋಕಸಭೆ ಚುನಾವಣೆ 2024

# ಮೋದಿ v/s ಖರ್ಗೆ ಮಲ್ಲ ಯುದ್ಧಕ್ಕೆ ಅಖಾಡ



ನರೇಂದ್ರ ಮೋದಿ ಅಥವಾ ಮಲ್ಲಿಕಾರ್ಜುನ ಖರ್ಗೆ. ಈ ಇಬ್ಬರಲ್ಲಿ ಮುಂದಿನ ಪ್ರಧಾನಿ ಗದ್ದುಗೆ ಏರುವವರು ಯಾರು? ಲೋಕಸಭೆಗೆ ಚುನಾವಣೆ ಸಮೀಪಿಸುತ್ತಿರುವ ಸಂದರ್ಭದಲ್ಲಿ ಇದೀಗ ರಾಷ್ಟ್ರದಾದ್ಯಂತ ಹೊಸದೊಂದು ಚರ್ಚೆಗೆ ಚಾಲನೆ ಸಿಕ್ಕಿದೆ.


ಇತ್ತೀಚೆಗೆ ನಡೆದ ಕಾಂಗ್ರೆಸ್ ಹಾಗೂ ಮಿತ್ರ ಪಕ್ಷಗಳ ಮೈತ್ರಿಕೂಟದಲ್ಲಿ ಎಐಸಿಸಿ ಅಧ್ಯಕ್ಷರೂ ಆದ ಕರ್ನಾಟಕದ ಮುತ್ಸದ್ದಿ ನಾಯಕ ಮಲ್ಲಿಕಾರ್ಜುನ ಖರ್ಗೆಯವರನ್ನು ಮುಂದಿನ ಪ್ರಧಾನಿ ಅಭ್ಯರ್ಥಿ ಸ್ಥಾನಕ್ಕೆ ಪಶ್ಚಿಮ ಬಂಗಾಳದ ಮುಖ್ಯಮಂತ್ರಿ ಹಾಗೂ ತೃಣಮೂಲ ಕಾಂಗ್ರೆಸ್ ಪಕ್ಷದ ನಾಯಕಿ ಮಮತಾ ಬ್ಯಾನರ್ಜಿ ಹಾಗೂ ಆಮ್ ಆದ್ಮಿ ಪಕ್ಷದ ನಾಯಕ, ದಿಲ್ಲಿ ಮುಖ್ಯಮಂತ್ರಿ ಅರವಿಂದ ಕೇಜ್ರಿವಾಲ್ ಈ ಪ್ರಸ್ತಾಪದ ಮೂಲಕ ರಾಷ್ಟ್ರ ರಾಜಕಾರಣದಲ್ಲಿ ಹೊಸ ಚರ್ಚೆಗೆ ಕಾರಣರಾಗಿದ್ದಾರೆ.

ಖರ್ಗೆಯವರ ಹೆಸರಿಗೆ ಮೈತ್ರಿಕೂಟದ ಅಂಗ ಪಕ್ಷ ಸಂಯುಕ್ತ ಜನತಾದಳ ಸಹಮತ ವ್ಯಕ್ತಪಡಿಸಿಲ್ಲ. ರಾಷ್ಟ್ರ ರಾಜಕಾರಣದ ಪರಿಸ್ತಿತಿಯ ಸೂಕ್ಷ್ಮತೆಗಳನ್ನು ಅರಿತಿರುವ ಖರ್ಗೆಯವರು ಮೊದಲು ಚುನಾವಣೆಯಲ್ಲಿ ಸರ್ಕಾರ ರಚನೆಗೆ ಅಗತ್ಯ ಸಂಖ್ಯೆಯ ಸ್ಥಾನಗಳನ್ನು ಗೆಲ್ಲೋಣ, ಪ್ರಧಾನಿ ಯಾರಾಗಬೇಕು ಎಂಬುದನ್ನು ಚುನಾವಣೆಯ ನಂತರ ನಿರ್ಧರಿಸೋಣ ಎಂದು ಪ್ರತಿಕ್ರಿಯಿಸುವ ಮೂಲಕ ಸಮತೋಲನ ಕಾಯ್ದುಕೊಳ್ಳುವ ಪ್ರಯತ್ನ ಮಾಡಿದ್ದಾರೆ. ಇದು ಅವರ ಅನುಭವ ಮತ್ತು ದೂರದೃಷ್ಟಿಗೆ ಮತ್ತೊಂದು ಸಾಕ್ಷಿ. ಐದು ದಶಕಗಳ ರಾಜಕಾರಣದ ಹಾದಿಯಲ್ಲಿ ಎಲ್ಲ ಅರ್ಹತೆಗಳಿದ್ದರೂ ರಾಜ್ಯದ ಮುಖ್ಯಮಂತ್ರಿ ಆಗುವ ಅವಕಾಶದಿಂದ ವಂಚಿಸಲ್ಪಟ್ಟ ಖರ್ಗೆಯವರು ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಪ್ರಧಾನಿ ಮೋದಿ ಅಲೆ ವಿರುದ್ಧ ಸೆಣಸಿ ಮೈತ್ರಿಕೂಟವನ್ನು ಅಧಿಕಾರಕ್ಕೆ ತರಬೇಕಿದೆ. ಮತ್ತೊಂದು ಕಡೆ ಪ್ರಧಾನಿ ಪಟ್ಟ ಇಂದಿರಾ ಕುಟುಂಬದ ಜಹಗಿರಿ ಎಂಬಂತೆ ವರ್ತಿಸುತ್ತಿರುವ ಕಾಂಗ್ರೆಸ್ ನಲ್ಲಿರುವ ಇತರ ನಾಯಕರನ್ನೂ ಸಂಬಾಳಿಸಬೇಕಿದೆ. ಈ ಹಿನ್ನಲೆಯಲ್ಲಿ ಕಾಂಗ್ರೆಸ್ ರಾಷ್ಟ್ರೀಯ ಸಮಿತಿ ಅಧ್ಯಕ್ಷರಾಗಿ ಅತ್ಯಂತ ಎಚ್ಚರಿಕೆಯ ಹೆಜ್ಜೆ ಇಡಬೇಕಿದೆಎಂಬ ಸತ್ಯವನ್ನು ಅರಿತಿರುವ ಅವರು ರಾಷ್ಟ್ರ ರಾಜಕಾರಣದ ವಾಸ್ತವವನ್ನೇ ಮಾತನಾಡಿದ್ದಾರೆ. ಹಾಗಾಗೆ ಇದು ಮುತ್ಸದ್ದಿತನದ ನಿಲುವಲ್ಲದೇ ಬೇರೆ ಏನೂ ಅಲ್ಲ.

ಲೋಕಸಭೆ ಚುನಾವಣೆಯನ್ನು ದೃಷ್ಟಿಯಲ್ಲಿಟ್ಟಿಕೊಂಡಿರುವ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಇನ್ನೊಂದು ಸುತ್ತಿನ ಭಾರತ್ ಜೋಡೊ ಪಾದಯಾತ್ರೆಗೆ ಸಜ್ಜಾಗುತ್ತಿದ್ದಾರೆ. ಇಷ್ಟರಲ್ಲೇ ಅದರ ದಿನಾಂಕವೂ ಪ್ರಕಟವಾಗಲಿದೆ. ಮತ್ತೊಂದು ಕಡೆ ಉತ್ತರದ ರಾಜ್ಯಗಳ ವಿಧಾನಸಭಾ ಚುನಾವಣೆಗಳಲ್ಲಿನ ಸೋಲನ್ನು ಕಾಂಗ್ರೆಸ್ ಅರಗಿಸಿಕೊಂಡು ಲೋಕಸಭಾ ಚುನಾವಣೆಗೆ ಅಯಾ ರಾಜ್ಯ ಘಟಕಗಳನ್ನು ಹುರಿಗೊಳಿಸಬೇಕಿದೆ. ಇಂತಹ ಪರಿಸ್ಥಿತಿಯಲ್ಲಿ ಚುನಾವಣೆಗೆ ಮೊದಲೇ ಪ್ರಧಾನಿ ಪಟ್ಟದ ಕುರಿತು ಚರ್ಚೆ ಆರಂಭವಾದರೆ ಅದು ಮುಂದಿನ ದಿನಗಳಲ್ಲಿ ವಿವಾದಕ್ಕೆ ಕಾರಣವಾಗಿ ಮೈತ್ರಿಕೂಟದ ಅಸ್ತಿತ್ವಕ್ಕೇ ಧಕ್ಕೆ ತರಬಹುದು ಎಂಬ ದೂರ ದೃಷ್ಟಿಯಿಂದಲೇ ಪ್ರಧಾನಿ ಯಾರಾಗಬೇಕು ಎಂಬ ಚರ್ಚೆ ಈಗ ಬೇಡ ಎಂದು ಅವರು ಸ್ಪಷ್ಟವಾಗಿ ತಳ್ಳಿಹಾಕಿದ್ದಾರೆ.

ರಾಷ್ಟ್ರ ರಾಜಕಾರಣದ ಈಗಿನ ಸ್ಥಿತಿ ನೋಡಿದರೆ ಪ್ರಧಾನಿ ಮೋದಿಯವರ ಜನಪ್ರಿಯತೆಯ ನಡುವೆಯೂ ದಕ್ಷಿಣದ ರಾಜ್ಯಗಳಲ್ಲಿ ಕಾಂಗ್ರೆಸ್ ಪ್ರಾಬಲ್ಯ ಸಾಧಿಸುವಲ್ಲಿ ಯಶಸ್ವಿಯಾಗಿದೆ ಎಂಬುದಕ್ಕೆ ಇತ್ತೀಚೆಗೆ ನೆರೆಯ ತೆಲಂಗಾಣ ರಾಜ್ಯದಲ್ಲೂ ಅದು ಗೆದ್ದು ಅಧಿಕಾರ ಹಿಡಿದಿರುವುದಕ್ಕೆ ಸಾಕ್ಷಿ. ಇದಕ್ಕೆ ಮುನ್ನ ಕರ್ನಾಟಕದಲ್ಲಿ ನಡೆದ ಚುನಾವಣೆಯಲ್ಲೂ ಮೋದಿ ಹಾಗೂ ಅಮಿತ್ ಶಾ ಜೋಡಿಯ ಜನಪ್ರಿಯತೆ ಅಥವಾ ರಾಜಕೀಯ ತಂತ್ರಗಳು ಫಲ ನೀಡದೇ ಕಾಂಗ್ರೆಸ್ ನಿಚ್ಚಳ ಬಹುಮತ ಗಳಿಸಿ ಅಧಿಕಾರ ಹಿಡಿದಿರುವುದು ಈಗ ಇತಿಹಾಸ. ಕರ್ನಾಟದಲ್ಲಿ ತನ್ನ ಸೋಲಿನ ಆಘಾತದಿಂದ ಹೊರ ಬರಲು ಬಿಜೆಪಿ ಇದೀಗ ಮಾಜಿ ಪ್ರಧಾನಿ ದೇವೇಗೌಡರ ನಾಯಕತ್ವದ ಜಾತ್ಯತೀತ ಜನತಾದಳದ ನೆರವನ್ನು ಆಶ್ರಯಿಸುವ ದಯನೀಯ ಸ್ಥಿತಿಗೆ ಬಂದು ಮುಟ್ಟಿದೆ. ಹಾಗೆ ನೋಡಿದರೆ ಜೆಡಿಎಸ್ ಜತೆಗಿನ ಲೋಕಸಭಾ ಚುನಾವಣೆಯ ಪ್ರಸ್ತಾವಿತ ಮೈತ್ರಿ ಸ್ಥಳೀಯವಾಗಿ ಬಿಜೆಪಿಯ ಪ್ರಮುಖ ನಾಯಕರಿಗೇ ಇಷ್ಟವಿಲ್ಲ. ಆದರೂ ದಿಲ್ಲಿ ಧಣಿಗಳ ಸೂಚನೆಗೆ ಮಣಿದು ಅನಿವಾರ್ಯವಾಗಿ ಒಪ್ಪಿಕೊಂಡಿದ್ದಾರೆ. ಹಾಗೆಂದ ಮಾತ್ರಕ್ಕೆ ಲೋಕಸಭಾ ಚುನಾವಣೆಯಲ್ಲಿ ಈ ಮೈತ್ರಿ ನಿರೀಕ್ಷಿಸಿದ ಫಲಿತಾಂಶ ನೀಡುತ್ತದೆ ಎಂಬ ಖಚಿತತೆಯೇನೂ ಇಲ್ಲ.

ರಾಜ್ಯದ ಮಟ್ಟಿಗೆ ಕಾಂಗ್ರೆಸ್ ಪಕ್ಷದ ಸರ್ಕಾರ ಜಾರಿಗೊಳಿಸಿರುವ ಗ್ಯಾರಂಟಿ ಯೋಜನೆಗಳು ಒಂದಷ್ಟರ ಮಟ್ಟಿಗೆ ಜನಪ್ರಿಯತೆ ತಂದುಕೊಟ್ಟಿದೆ. ಇದಲ್ಲದೇ ಬಿಜೆಪಿಯಲ್ಲಿ ಬಿ.ವೈ. ವಿಜಯೇಂದ್ರ ರಾಜ್ಯಘಟಕದ ಅಧ್ಯಕ್ಷ ಹಾಗೂ ಆರ್. ಅಶೋಕ್ ವಿಧಾನಸಭೆಯ ಪ್ರತಿಪಕ್ಷದ ನಾಯಕರಾದ ನಂತರವೂ ಆಂತರಿಕ ಬಿಕ್ಕಟ್ಟು, ಭಿನ್ನಮತ ಬಗೆಹರಿದಿಲ್ಲ. ಬದಲಾಗಿ ಬೀದಿಗೆ ಬಂದಿದೆ. ಈ ಪರಿಸ್ಥಿತಿಯಲ್ಲಿ ಸಹಜವಾಗೇ ಕಾಂಗ್ರೆಸ್ ಗೆ ಅನುಕೂಲಕರ ವಾತಾವರಣ ನಿರ್ಮಾಣವಾಗಿದೆ ಎಂಬುದೇನೋ ನಿಜ. ಆದರೆ ರಾಷ್ಟ್ರ ರಾಜಕಾರಣವನ್ನು ದೃಷ್ಟಿಯಲ್ಲಿಟ್ಟುಕೊಂಡು ನೋಡಿದರೆ ಮೋದಿ ಜನಪ್ರಿಯತೆ ಕಡಿಮೆ ಏನೂ ಆಗಿಲ್ಲ. ಅಯೋಧ್ಯೆಯಲ್ಲಿ ರಾಮ ಮಂದಿರ ನಿರ್ಮಾಣದ ಯೋಜನೆ ಸಾಕಾರಗೊಂಡಿರುವುದು, ಜಮ್ಮು–ಕಾಶ್ಮೀರ ವಿಶೇಷ ಸ್ಥಾನಮಾನ ವಿವಾದಕ್ಕೆ ಕಾರಣವಾಗಿದ್ದ ಸಂವಿಧಾನದ 370 ನೇ ವಿಧಿಯನ್ನು ರದ್ದುಗೊಳಿಸಿದ ಕೇಂದ್ರ ಸರ್ಕಾರದ ನಿರ್ಧಾರವನ್ನು ಸುಪ್ರೀಂ ಕೋರ್ಟ್ ಎತ್ತಿ ಹಿಡಿದಿರುವುದು ಇವೇ ಮೊದಲಾದ ಅಂಶಗಳನ್ನು ಮುಂದಿಟ್ಟುಕೊಂಡು ಭಾವನಾತ್ಮಕವಾಗಿ ಜನರನ್ನು ತನ್ನ ಕಡೆಗೆ ಸೆಳೆದುಕೊಳ್ಳುವ ಪ್ರಯತ್ನಗಳನ್ನು ಬಿಜೆಪಿ ವ್ಯವಸ್ಥಿತವಾಗಿ ಮುಂದುವರಿಸಲಿದೆ. ಚುನಾವಣೆಯಲ್ಲಿ ಇದು ಆ ಪಕ್ಷಕ್ಕೆ ಹೆಚ್ಚಿನ ಸಂಖ್ಯೆಯ ಸಂಸದರನ್ನು ಗೆಲ್ಲಿಸಿಕೊಳ್ಳುವಲ್ಲಿ ನೆರವಾದರೂ ಆಶ್ಚರ್ಯ ಏನಿಲ್ಲ.



–ಯಗಟಿ ಮೋಹನ್

ಇಂಡಿಯಾ ಮೈತ್ರಿಕೂಟದ ಸಭೆಯಲ್ಲಿ ಭಾಗವಹಿಸಿದ್ದ ಎಡ ಪಕ್ಷಗಳು ಲೋಕಸಭೆ ಚುನಾವಣೆ ಗೆ ಸ್ಪರ್ಧಿಸಬಾರದೆಂಬ ಬೇಡಿಕೆಯನ್ನು ರಾಹುಲ್ ಗಾಂಧಿಯವರ ಮುಂದಿಟ್ಟಿವೆ. ಆದರೆ ಹಾಗಾಗುವ ಸಾಧ್ಯತೆ ಕಡಿಮೆ. ಕರ್ನಾಟಕದಿಂದ ಲೋಕಸಭೆಗೆ ರಾಹುಲ್ ಗಾಂಧಿಯವರನ್ನು ಕಣಕ್ಕಿಳಿಸುವ ಪ್ರಯತ್ನಗಳು ನಡೆದಿವೆ. ಒಂದು ವರದಿ ಪ್ರಕಾರ ಅವರು ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದಿಂದ ಸ್ಪರ್ಧಿಸುವ ಸಾಧ್ಯತೆಗಳು ಇವೆ. ಈಗ ಈ ಕ್ಷೇತ್ರವನ್ನು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸೋದರ ಡಿ.ಕೆ. ಸುರೇಶ್ ಪ್ರತಿನಿಧಿಸುತ್ತಿದ್ದಾರೆ. ಅವರು ಮುಂದಿನ ಚುನಾವಣೆಯಲ್ಲಿ ಬೆಂಗಳೂರು ಉತ್ತರ ಲೋಕಸಭಾ ಕ್ಷೇತ್ರದಿಂದ ಕಣಕ್ಕಿಳಿಯುವ ಸಾಧ್ಯತೆಗಳೂ ಇವೆ. ಕರ್ನಾಟಕದ ಮಟ್ಟಿಗೆ ಖರ್ಗೆಯವರು ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಕೆಪಿಸಿಸಿ ಅಧ್ಯಕ್ಷರೂ ಆಗಿರುವ ಡಿ.ಕೆ.ಶಿವಕುಮಾರ್ ಎಂಬ ಎರಡು ಅಧಿಕಾರ ಕೇಂದ್ರಗಳ ನಡುವೆ ಅಭ್ಯರ್ಥಿಗಳ ಆಯ್ಕೆಯಲ್ಲಿ ಸಹಮತ ಮೂಡಿಸಬೇಕಿದೆ. ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದಂದಿನಿಂದ ಈ ಇಬ್ಬರು ನಾಯಕರ ನಡುವೆ ವಿವಿಧ ವಿಚಾರಗಳಿಗೆ ಸಂಬಂಧಿಸಿದಂತೆ ಮುಸುಕಿನ ಗುದ್ದಾಟ ನಡೆದೇ ಇದೆ. ಈ ವಿಚಾರ ಖರ್ಗೆಯವರಿಗೂ ಗೊತ್ತು. ಅಭ್ಯರ್ಥಿಗಳ ಆಯ್ಕೆಯಲ್ಲಿ ತುಸು ಏರುಪೇರಾದರೂ ಅದು ಚುನಾವಣಾ ಫಲಿತಾಂಶದ ಮೇಲೆ ಪರಿಣಾಮ ಬೀರಲಿದೆ. ಇದೆಲ್ಲದಕ್ಕಿಂತ ಮುಖ್ಯವಾಗಿ ಕರ್ನಾಟಕದ 28 ಸ್ಥಾನಗಳ ಪೈಕಿ ಬಿಜೆಪಿ ಗಿಂತ ಹೆಚ್ಚು ಸ್ಥಾನಗಳನ್ನು ಗೆಲ್ಲಲೇ ಬೇಕಾದ ಅನಿವಾರ್ಯತೆಯೂ ರಾಷ್ಟ್ರೀಯ ಕಾಂಗ್ರೆಸ್ ಅಧ್ಯಕ್ಷರಿಗಿದೆ. ಹೀಗಾಗಿ ಮುಂಬರುವ ಲೋಕಸಭಾ ಚುನಾವಣೆ ಅವರಿಗೆ ಒಂದು ದೊಡ್ಡ ಸವಾಲೆ ಎಂಬುದರಲ್ಲಿ ಅನುಮಾನವೇ ಇಲ್ಲ. ಉತ್ತರ ರಾಜ್ಯಗಳ ಪೈಕಿ ಉತ್ತರ ಪ್ರದೇಶದಲ್ಲಿ ಬಹುಜನ ಸಮಾಜ ಪಕ್ಷದ ನಾಯಕಿ ಮಾಯಾವತಿಯವರಿಗೆ ಪರ್ಯಾಯವಾಗಿ ಖರ್ಗೆಯವರನ್ನು ದಲಿತ ಸಮುದಾಯದ ನಾಯಕರಾಗಿ ಬಿಂಬಿಸಲು ಪ್ರಯತ್ನಿಸುವ ಮೂಲಕ ಕಾಂಗ್ರೆಸ್ ಪಕ್ಷ ಉತ್ತರದ ರಾಜ್ಯಗಳಲ್ಲಿ ಹೆಚ್ಚಿನ ಸಂಖ್ಯೆಯ ಮತಗಳ ಮೇಲೆ ಕಣ್ಣಿಟ್ಟಿದೆ. ಮಾಯಾವತಿಯವರನ್ನು ದುರ್ಬಲಗೊಳಿಸಿದರೆ ಅದರ ಲಾಭ ಕಾಂಗ್ರೆಸ್ ಗೆ ಆಗಲಿದೆ ಎಂಬುದು ಒಂದು ಲೆಕ್ಕಾಚಾರ.

ಮಲ್ಲಿಕಾರ್ಜುನ ಖರ್ಗೆಯವರು ಸಂಸತ್ತಿನ ಉಭಯ ಸದನಗಳ ಪ್ರತಿಪಕ್ಷದ ನಾಯಕರಾಗಿ ಅತ್ಯಂತ ಜನಪ್ರಿಯತೆ ಪಡೆದಿದ್ದಾರೆ. ಹಲವು ಸಂದರ್ಭಗಳಲ್ಲಿ ಮೋದಿ ಸರ್ಕಾರ ಅವರಿಂದ ಇಕ್ಕಟ್ಟಿಗೆ ಸಿಕ್ಕಿ ಉತ್ತರ ಕೊಡಲಾಗದೇ ಸಂಸತ್ತಿನಲ್ಲಿ ಪರದಾಡಿದ್ದೂ ಇದೆ. ಇದಕ್ಕೆ ಇತ್ತೀಚಿನ ಉದಾಹರಣೆ ಎಂದರೆ ಲೋಕಸಭೆಯ ಅಧಿವೇಶನದ ಸಂದರ್ಭದಲ್ಲಿ ಸದನದ ಒಳಗೆ ಪ್ರೇಕ್ಷಕರ ಗ್ಯಾಲರಿಯಲ್ಲಿದ್ದ ಕೆಲವು ಯುವಕರು ನಡೆಸಿದ ದಾಳಿ ಪ್ರಕರಣ ಸರ್ಕಾರದ ಭದ್ರತಾ ವೈಫಲ್ಯಗಳನ್ನು ಪ್ರದರ್ಶಿಸಿದೆ. ಸಂಸತ್ತಿನ ಭದ್ರತೆ ಕಾಪಾಡಲು ಆಗದ ಚೌಕೀದಾರ ದೇಶವನ್ನು ರಕ್ಷಿಸಲು ಸಾಧ್ಯವೆ ಎಂಬ ಪ್ರಶ್ನೆಯನ್ನು ಎತ್ತುವ ಮೂಲಕ ಕಾಂಗ್ರೆಸ್ ಪಕ್ಷ ಮೋದಿ ಸರ್ಕಾರದ ಹೊಣೆಗೇಡಿತನವನ್ನು ಬಯಲಿಗೆಳೆದಿದೆ. ಸದನದ ಭದ್ರತಾ ವೈಫಲ್ಯ ಕುರಿತಂತೆ ಹೇಳೊಕೆ ನೀಡಿ ಜವಾಬ್ದಾರಿ ಮೆರೆಯಬೇಕಿದ್ದ ಕೇಂದ್ರದ ಗೃಹ ಸಚಿವರು, ಪ್ರಧಾನಿ ಹಾಗೆ ಮಾಡದೇ ಪ್ರತಿ ಪಕ್ಷಗಳನ್ನು ಸದನದಿಂದ ಹೊರ ಹಾಕುವ ಮೂಲಕ ಸರ್ವಾಧಿಕಾರಿ ದೋರಣೆ ಮೆರೆದಿರುವುದರ ಬಗ್ಗೆ ಇಡೀ ದೇಶದಲ್ಲಿ ಪ್ರಶ್ನೆಗಳು ಎದ್ದಿವೆ. ಸಹಜವಾಗೇ ಈ ವೈಫಲ್ಯಗಳನ್ನು ಮರೆಮಚಾಲು ಕೇಂದ್ರ ಸರ್ಕಾರ ಭಾವನಾತ್ಮಕ ವಿಚಾರಗಳನ್ನು ಮುನ್ನೆಲೆಗೆ ತಂದಿದೆ.

ಐದು ದಶಕಗಳ ರಾಜಕಾರಣದ ಅವಧಿಯಲ್ಲಿ ಇಂದಿರಾ ಕುಟುಂಬಕ್ಕೆ ನಿಷ್ಠರಾಗಿರುವ ಮಲ್ಲಿಕಾರ್ಜುನ ಖರ್ಗೆಯವರು ವಿವಾದಗಳಿಂದ ದೂರ. ತಮಗೆ ಅರ್ಹತೆ ಮತ್ತು ಹಿರಿತನದ ಆಧಾರದ ಮೇಲೆ ಸಿಕ್ಕಬೇಕಾಗಿದ್ದ ಮುಖ್ಯಮಂತ್ರಿ ಪದವಿ ಸ್ವಪಕ್ಷೀಯರ ರಾಜಕೀಯ ಪಿತೂರಿಗಳಿಂದ ತಪ್ಪಿ ಹೋದಾಗಲೂ ಅವರು ಸಿಟ್ಟಿಗೆದ್ದು ಬಂಡಾಯ ಎದ್ದವರಲ್ಲ. ರಾಜಕಾರಣದ ಹೊರತಾಗಿಯೂ ಅವರನ್ನು ರಾಜ್ಯದಲ್ಲಿ ಇಷ್ಟ ಪಡುವ ಮುಖಂಡರು, ಬೆಂಬಲಿಗರ ಸಂಖ್ಯೆ ದೊಡ್ಡದು. ಅದಕ್ಕೆ ಜಾತಿಗಳ ನಿರ್ಬಂಧ ಇಲ್ಲ. ಈ ಕಾರಣಕ್ಕಾಗೇ ಅವರು ತಮ್ಮನ್ನು ದಲಿತ ನಾಯಕ ಎಂದು ಬಿಂಬಿಸಿಕೊಳ್ಳಲು ತಯಾರಿಲ್ಲ. ಹಾಗೆ ಯಾರಾದರೂ ಹೇಳಿದರೆ ಸಿಟ್ಟಿಗೇಳುತ್ತಾರೆ. ಒಬ್ಬ ರಾಜಕೀಯ ನಾಯಕ ಎಲ್ಲ ವರ್ಗಗಳ ಪ್ರತಿನಿಧಿಯಾಗಿ ರೂಪುಗೊಳ್ಳಬೇಕೆಂಬ ಸಿದ್ಧಾಂತವೇ ಅವರನ್ನು ರಾಷ್ಟ್ರ ರಾಜಕಾರಣದ ಮುಂಚೂಣಿಗೆ ತಂದು ನಿಲ್ಲಿಸಿದೆ. 2024ರ ಲೋಕಸಭಾ ಚುನಾವಣೆ ನಿಶ್ಚಿತವಾಗಿ ಪ್ರಧಾನಿ ಮೋದಿ ಮತ್ತು ಕಾಂಗ್ರೆಸ್ ನ ಜನಪ್ರಿಯ ನಾಯಕ ಮಲ್ಲಿಕಾರ್ಜುನ ಖರ್ಗೆಯವರ ನಡುವಿನ ನೇರ ಸಮರವಾಗಿ ರೂಪುಗೊಳ್ಳಲಿದೆ. ಈ ಸಮರದಲ್ಲಿ ಇಂಡಿಯಾ ಮೈತ್ರಿಕೂಟ ಹೆಚ್ಚಿನ ಸ್ಥಾನಗಳನ್ನು ಗಳಿಸಿದ ನಂತರವೂ ಪಿತೂರಿಗಳು ನಡೆಯದಿದ್ದರೆ ಕನ್ನಡಿಗ ಮಲ್ಲಿಕಾರ್ಜುನ ಖರ್ಗೆ ಪ್ರಧಾನಿ ಆಗುವ ಸಾಧ್ಯತೆಗಳಿವೆ. ಆದರೆ ಆ ಹಾದಿ ಸುಲಭದ್ದೇನೂ ಅಲ್ಲ. ಮೈತ್ರಿಕೂಟದಲ್ಲೇ ವಿಭಿನ್ನ ಮನೋಸ್ಥಿತಿಯ ಮಹತ್ವಾಕಾಂಕ್ಷಿ ನಾಯಕರು ಇದ್ದಾರೆ. ಜತೆಗೇ ಮೂರನೇ ಬಾರಿಯೂ ಪ್ರಧಾನಿ ಆಗ ಬಯಸಿರುವ ನರೇಂದ್ರ ಮೋದಿಯವರನ್ನು ಎದುರಿಸಬೇಕಿದೆ.

## ಭಗವದ್ಗೀತೆ ಈಗ ಸಮಾಜದ ಅವಶ್ಯಕತೆ ಮತ್ತು ಅಪೇಕ್ಷೆ ಎರಡೂ ಆಗಿದೆ: ಸ್ವರ್ಣವಲ್ಲೀ ಶ್ರೀ

ಬೆಳಗಾವಿ: ಭಗವದ್ಗೀತೆಗೆ ಈಗ ಸಾರ್ವತ್ರಿಕವಾಗಿ ಒಪ್ಪಿಗೆ ಸಿಕ್ಕಿದೆ. ಅಭಿಯಾನ ಮುಗಿದರೂ ಶಾಲೆಗಳಲ್ಲಿ ಭಗವದ್ಗೀತೆ ಪಠಣ ಮುಂದುವರಿಯಬೇಕು ಎಂದು ಸೋಂದಾ ಸ್ವರ್ಣವಲ್ಲೀ ಮಹಾಸಂಸ್ಥಾನದ ಶ್ರೀಮದ್ ಗಂಗಾಧರೇಂದ್ರ ಸರಸ್ವತಿ ಸ್ವಾಮಿಗಳು ಆಶಿಸಿದ್ದಾರೆ.

ಬೆಳಗಾವಿಯಲ್ಲಿ ಭಾನುವಾರ ಭಗವದ್ಗೀತೆ ಅಭಿಯಾನದ ಕಾರ್ಯಕರ್ತರಿಗೆ ಧನ್ಯವಾದ ಸಮರ್ಪಣೆ ಕಾರ್ಯಕ್ರಮದಲ್ಲಿ ಅವರು ಆಶೀರ್ವಚನ ನೀಡುತ್ತಿದ್ದರು. ಸುಂದರವಾಗಿ, ಅಚ್ಚುಕಟ್ಟಾಗಿ ಭಗವದ್ಗೀತೆ ಅಭಿಯಾನ ಮಾಡಿಕೊಟ್ಟಿದ್ದೀರಿ. ಮಾತೆಯರು, ಕಾರ್ಯಕರ್ತರ ಶ್ರಮ ಮೆಚ್ಚುವಂತದ್ದು. ಅಭಿಯಾನ ಸಮಿತಿಯನ್ನು ವಿಸರ್ಜಿಸುವುದಿಲ್ಲ. ಇದು ಹಾಗೆಯೇ ಮುಂದುವರಿಯಲಿದೆ ಎಂದು ಅವರು ತಿಳಿಸಿದರು.

ದೇವರನ್ನು ನೋಡಲು ಸಾಧ್ಯವಿದೆ ಎನ್ನುವ ಸಂದೇಶ ಭಗವದ್ಗೀತೆಯಲ್ಲಿದೆ. ನಮ್ಮಲ್ಲಿ ಸ್ವಲ್ಪ ಸಂಸ್ಕಾರ ಇದ್ದರೆ ಭಗವದ್ಗೀತೆಯ ಅನುಭಾವ ರೋಮಾಂಚಕ. ಭಗವಂತನ ಕಾರ್ಯದಲ್ಲಿ ತೊಡಗಿಕೊಳ್ಳುವುದೇ ದೊಡ್ಡ ಪುಣ್ಯದ ಕಾರ್ಯ. ಭಗವದ್ಗೀತೆ ಈಗ ಸಮಾಜದ ಅವಶ್ಯಕತೆ ಮತ್ತು ಅಪೇಕ್ಷೆ ಎರಡೂ ಆಗಿದೆ. ಕೆಲವು ಅವಶ್ಯಕತೆ ಇದ್ದರೂ ಅಪೇಕ್ಷೆ ಇರುವುದಿಲ್ಲ. ಕೆಲವು ಅಪೇಕ್ಷೆ ಇದ್ದರೂ ಅವಶ್ಯಕತೆ ಇರುವುದಿಲ್ಲ. ಎರಡೂ ಇದ್ದಾಗ ಮಾತ್ರ



ಅದಕ್ಕೆ ಮಹತ್ವ ಬರುತ್ತದೆ. ಭಗವದ್ಗೀತೆಗೆ ಸಾರ್ವತ್ರಿಕ ಅಕ್ಸೆಪ್ಟನ್ಸ್ ಬಂದಿದೆ. ನಮ್ಮ ಕಾಲದಲ್ಲಿ ಬಂದಿದ್ದು ದೇವರ ಅನುಗ್ರಹ. ಶಾಲೆಗಳಲ್ಲಿ ಭಗವದ್ಗೀತೆ ಪಠಣದ ಪರಿಪಾಠ ಮುಂದುವರಿಯಬೇಕು ಎಂದು ಶ್ರೀಗಳು ಆಶಿಸಿದರು.

ಅಭಿಯಾನ ಸಮಿತಿಯ ಅಧ್ಯಕ್ಷ ಗೋಪಾಲ ಜಿನಗೌಡ, ಕಾರ್ಯಾಧ್ಯಕ್ಷ ಪರಮೇಶ್ವರ ಹೆಗಡೆ, ಕಾರ್ಯದರ್ಶಿ ಎಂ.ಕೆ.ಹೆಗಡೆ, ಸಂಚಾಲಕ ಸುಬ್ರಹ್ಮಣ್ಯ ಭಟ್, ಖಜಾಂಚಿ ಸೀತಾರಾಮ ಭಾಗ್ವತ, ಉದ್ಯಮಿಗಳಾದ ಸತೀಶ್ ನೇತಲ್ಕರ್, ದಯಾನಂದ ನೇತಲ್ಕರ್, ವಿದ್ವಾನ್ ಸೂರ್ಯನಾರಾಯಣ ಭಟ್, ವಿದ್ವಾನ್ ಅರುಣ ಹೆಗಡೆ, ಮಹಾನಗರ ಪಾಲಿಕೆ ಸದಸ್ಯರಾದ ಜಯತೀರ್ಥ ಸವದತ್ತಿ, ರಾಜಶೇಖರ ಡೋಣಿ, ಅಭಿಯಾನ ಸಮಿತಿಯ ಪದಾಧಿಕಾರಿಗಳು, ಪ್ರಶಿಕ್ಷಕಿಯರು, ಕಾರ್ಯಕರ್ತರು ಉಪಸ್ಥಿತರಿದ್ದರು.

## ಬಿಜೆಪಿಯನ್ನು ಅಧಿಕಾರಕ್ಕೆ ತರುವವರೆಗೂ ವಿಶ್ರಾಂತಿಸುವುದಿಲ್ಲ: ಬಿ.ವೈ ವಿಜಯೇಂದ್ರ



ದಾವಣಗೆರೆ: ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಗೆಲುವು ಸಾಧಿಸುವವರೆಗೂ ನಾವು ವಿಶ್ರಾಂತಿ ಪಡೆದುಕೊಳ್ಳುವುದಿಲ್ಲ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ ಅವರು ಶಪಥ ಮಾಡಿದರು.

ದಾವಣಗೆರೆಯಲ್ಲಿ ನಡೆಯುತ್ತಿರುವ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ 24ನೇ ಅಧಿವೇಶನದಲ್ಲಿ ಭಾಗಿಯಾಗುವ ಮುನ್ನ ಬಿಜೆಪಿ ಪದಾಧಿಕಾರಿಗಳ ಆಯ್ಕೆ ವಿಚಾರವಾಗಿ ಮಾತನಾಡಿದ ಅವರು, ನಿನ್ನೆ ಬಿಜೆಪಿ ಪದಾಧಿಕಾರಿಗಳ ಪಟ್ಟಿ ಬಿಡುಗಡೆಯಾಗಿದೆ. ಕರ್ನಾಟಕದ ಎಲ್ಲ ಭಾಗದ ಯುವಕರು ಹಾಗೂ ಹಿರಿಯರಿಗೆ ಪಕ್ಷ ಅವಕಾಶ ಮಾಡಿಕೊಟ್ಟಿದೆ.

ಈಗ ನಮ್ಮಮುಂದೆ ದೊಡ್ಡ ಸವಾಲು ಇದೆ. ಕಾಂಗ್ರೆಸ್ ಪಕ್ಷದ ವಿರುದ್ಧ ಹೋರಾಟ ನಡೆಸಲು ಬಲ ಬಂದಿದೆ. ರಾಜ್ಯದ 28 ಕ್ಷೇತ್ರಗಳಲ್ಲಿ ಬಿಜೆಪಿ ಮತ್ತು ಜೆಡಿಎಸ್ ಮೈತ್ರಿ ಮೂಲಕ ಲೋಕಸಭಾ ಚುನಾವಣೆ ಗೆಲುವು ನಿಶ್ಚಿತ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಬಳಿಕ ಕಾಂಗ್ರೆಸ್ ವಿರುದ್ಧ ವಾಗ್ದಾಳಿ ನಡೆಸಿದ ಅವರು, ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ಆರೇ ತಿಂಗಳಲ್ಲಿ ರಾಜ್ಯದ ರೈತರು ಹಿಡಿಶಾಪ ಹಾಕುತ್ತಿದ್ದಾರೆ.

ಮೂರನೇ ಬಾರಿಗೆ ನರೇಂದ್ರ ಮೋದಿ ಅವರನ್ನು ಪ್ರಧಾನಿಯನ್ನಾಗಿ ಮಾಡಬೇಕು ಎಂಬ ಇಚ್ಛೆ ರಾಜ್ಯದ ಜನರಲ್ಲಿದೆ ಎಂದು ಹೇಳಿದರು.

ಹಿಜಾಬ್ ವಿಚಾರದಲ್ಲಿ ಸಿಎಂ ಸಿದ್ದರಾಮಯ್ಯ ಹೇಳಿಕೆ ಕುರಿತು ಪ್ರತಿಕ್ರಿಯಿಸಿ, ರಾಜ್ಯದ ಸಿಎಂ ಯಾಕೆ ಮಕ್ಕಳ ಭವಿಷ್ಯದ ಬಗ್ಗೆ ಚೆಲ್ಲಾಟ ಆಡುತ್ತಿದ್ದಾರೆ. ಮಕ್ಕಳಲ್ಲಿ ಜಾತಿಯ ವಿಷಬೀಜ ಬಿತ್ತುವ ಕೆಲಸ ಮಾಡುತ್ತಿದ್ದಾರೆ. ಸಿಎಂ ಹೇಳಿಕೆಯನ್ನು ರಾಜ್ಯದ ಜನರೆಲ್ಲ ಗಮನಿಸಿದ್ದಾರೆ. ಈ ವಿಚಾರವನ್ನು ಬಿಜೆಪಿ ಹಗುರವಾಗಿ ತೆಗದುಕೊಳ್ಳಲ್ಲ. ಈ ವಿಚಾರದಲ್ಲಿ ಕಾಂಗ್ರೆಸ್ನವರಿಗೆ ಯಾಕೆ ಆತುರ, ಸಿಎಂ ಒಡೆದಾಳುವ ನೀತಿ ಅನುಸರಿಸುತ್ತಿದ್ದಾರೆ ಎಂದು ಕಿಡಿಕಾರಿದರು.

ಜಾತಿ ಜನಗಣತಿ ವರದಿ ವಿಚಾರವಾಗಿ ಮಾತನಾಡಿ, ಯಾವಾಗ ಸೋಲಿನ ಭೀತಿ ಎದುರಾಗುತ್ತೋ ಅಗ ಕಾಂಗ್ರೆಸ್ನವರಿಗೆ ಜಾತಿ ಜನಗಣತಿ, ಕಾಂತರಾಜು ವರದಿ ಬಗ್ಗೆ ನೆನಪಾಗುತ್ತದೆ.

ಹಿಂದುಳಿದ ಸಮಾಜ ಹಾಗೂ ಹಿಂದುಳಿದ ವರ್ಗಗಳಿಗೆ ಆರ್ಥಿಕ, ಸಾಮಾಜಿಕ, ಶೈಕ್ಷಣಿಕ ನ್ಯಾಯ ಒದಗಿಸಬೇಕು. ರಾಜಕೀಯ ಬೇಳೆ ಬೇಯಿಸಿಕೊಳ್ಳುವ ಉದ್ದೇಶದಿಂದ ಸಮಾಜಗಳ ನಡುವೆ ವಿಷ ಬೀಜ ಬಿತ್ತುವ ಕೆಲಸ ಮಾಡುತ್ತಿದ್ದಾರೆ. ಈ ನಡೆಯನ್ನ ಬಿಜೆಪಿ ಸಹಿಸಲ್ಲ ಎಂದು ಸರ್ಕಾರದ ವಿರುದ್ಧ ಹರಿಹಾಯ್ದರು.

## ಗಾಜಾ ನಿರಾಶ್ರಿತರ ಶಿಬಿರದ ಮೇಲೆ ಇಸ್ರೇಲ್ ವಾಯುದಾಳಿ: 70 ಜನರ ಸಾವು

ಗಾಜಾ: ಇಸ್ರೇಲ್ ಮತ್ತು ಹಮಾಸ್ ಬಂಡುಕೋರರ ನಡುವಿನ ಯುದ್ಧ ಮುಂದುವರೆದಿದ್ದು, ಭಾನುವಾರ ತಡರಾತ್ರಿ, ಕ್ರಿಸ್‌ಮಸ್ ದಿನದಂದು ಗಾಜಾದ ನಿರಾಶ್ರಿತರ ಶಿಬಿರದ ಮೇಲೆ ಇಸ್ರೇಲ್ ನಡೆಸಿದ ವಾಯು ದಾಳಿಯಲ್ಲಿ ಸುಮಾರು 70 ಜನರು ಪ್ಯಾಲೆಸ್ಟೇನಿಯನ್ನರು ಸಾವನ್ನಪ್ಪಿದ್ದಾರೆ. ಹಮಾಸ್ ನಡೆಸುತ್ತಿರುವ ಆರೋಗ್ಯ ಇಲಾಖೆ ಅಧಿಕಾರಿಗಳ ಹೇಳಿಕೆ ಉಲ್ಲೇಖಿಸಿ ಬಿಬಿಸಿ ವರದಿ ಮಾಡಿದೆ.



ಭಾನುವಾರ ತಡರಾತ್ರಿ ಆರಂಭವಾದ ವಾಯುದಾಳಿ, ಕ್ರಿಸ್ಮಸ್ ದಿನವಾದ ಸೋಮವಾರದವರೆಗೂ ನಡೆದಿದೆ. ನಿರಾಶ್ರಿತರ ಶಿಬಿರದಲ್ಲಿ ಉಳಿದುಕೊಂಡಿರುವ ಜನರ ಸಂಖ್ಯೆಯನ್ನು ಪರಿಗಣಿಸಿ ಸಾವಿನ ಸಂಖ್ಯೆ ಹೆಚ್ಚಾಗಬಹುದು ಎಂದು ವರದಿ ಹೇಳಿದೆ.

## ಥೈರಾಯ್ಡ್ ಸಮಸ್ಯೆ: ಲಕ್ಷಣ ಮತ್ತು ಚಿಕಿತ್ಸೆ

ಇಂದು ಥೈರಾಯ್ಡ್ ಸಮಸ್ಯೆ ಸಾಮಾನ್ಯವಾಗಿದೆ. ಹೆಚ್ಚಾಗಿ ಮಹಿಳೆಯರಲ್ಲಿ ಈ ಸಮಸ್ಯೆ ಕಂಡುಬರುತ್ತದೆ. ಥೈರಾಯ್ಡ್ ಸಮಸ್ಯೆ ಇದ್ದರೆ ಕೆಲವರು ದಪ್ಪವಾಗುತ್ತಾರೆ ಇನ್ನೂ ಕೆಲವರು ಸಣ್ಣ ಆಗುತ್ತಾ ಹೋಗುತ್ತಾರೆ. ಈಗಾಗಲೇ ಹಲವಾರು ಸಮಸ್ಯೆಗಳಿಗೆ ಕಾರಣವಾಗಿರುವ ಇಂದಿನ ಜಡ ಜೀವನ ಶೈಲಿ ಮತ್ತು ಆಹಾರ ಕ್ರಮದ ಬದಲಾವಣೆಗಳೇ ಈ ಸಮಸ್ಯೆಯ ಮೂಲವಾಗಿದೆ. ಇದಲ್ಲದೇ ಸಾಮಾನ್ಯವಾಗಿ ಮಾನಸಿಕ ಒತ್ತಡ, ವ್ಯಾಯಾಮ ಅಥವಾ ಯಾವುದೇ ಬಗೆಯ ದೈಹಿಕ ಚಟುವಟಿಕೆಗಳು ಇಲ್ಲದಿರುವುದು, ಅಯೋಡಿನ್ ಅಂಶದ ಕೊರತೆ ಹಾಗೂ ನಿಯಮಿತವಾಗಿ ದೇಹದ ಬೆಳವಣಿಗೆ ಮತ್ತು ಪೋಷಣೆಗೆ ಬೇಕಾದ ಪೌಷ್ಟಿಕ ಆಹಾರ ಸೇವಿಸದೇ ಇರುವುದು ಕೂಡ ಥೈರಾಯ್ಡ್ ಸಮಸ್ಯೆಗೆ ಕಾರಣವಾಗುತ್ತದೆ.

**ಥೈರಾಯ್ಡ್ ಎಂದರೇನು?**

ಥೈರಾಯ್ಡ್ ನಮ್ಮ ಕತ್ತಿನ ಮುಂಭಾಗದಲ್ಲಿರುವ ಚಿಟ್ಟೆಯಾಕಾರದ ಒಂದು ಗ್ರಂಥಿ. ಶರೀರದ ಅನೇಕ ಕಾರ್ಯ ಚಟುವಟಿಕೆಗಳಿಗೆ ಅತ್ಯವಶ್ಯಕವಾದ ಥೈರಾಕ್ಸಿನ್ ಎಂಬ ಹಾರ್ಮೋನನ್ನು ಉತ್ಪಾದಿಸುವುದೇ ಈ ಗ್ರಂಥಿಯ ಮುಖ್ಯ ಕಾರ್ಯ. ಮೂಲತ: ಥೈರಾಕ್ಸಿನ್ ಅಯೋಡಿನ್ನಿನಿಂದ ಕೂಡಿದ ಅಮೈನೋ ಆಮ್ಲ. ಇದು ದೇಹದಲ್ಲಿ ನಡೆಯುವ ಚಯಾಪಚಯ ಕ್ರಿಯೆಯ ವೇಗವನ್ನು ಹೆಚ್ಚಿಸುತ್ತದೆ ಮತ್ತು ಆಹಾರ ಉತ್ಕರ್ಷಣದ ಪ್ರಮಾಣವನ್ನು ನಿಯಂತ್ರಿಸುತ್ತದೆ.


**ಥೈರಾಯ್ಡ್ ಸಮಸ್ಯೆಯ ಲಕ್ಷಣಗಳು**

ಥೈರಾಯ್ಡ್ ಸಮಸ್ಯೆ ಇದ್ದರೆ ಪದೇ ಪದೇ ಆಯಾಸವಾಗುವುದು, ಮಹಿಳೆಯರಲ್ಲಿ ಅನಿಯಮಿತ ಮುಟ್ಟು ಸಮಸ್ಯೆ, ಕೂದಲು ಉದುರುವುದು, ಆಗಾಗ ನಡುಕ ಉಂಟಾಗುವುದು, ಬೆವರುವಿಕೆ ಜಾಸ್ತಿ ಇರುವುದು, ಅನಿರೀಕ್ಷಿತವಾಗಿ ತೂಕ ಏರಿಕೆ ಆಗುವುದು, ಸಣ್ಣಸಣ್ಣ ವಿಷಯಕ್ಕೂ ಕೋಪ ಬರುವುದು ಇಂತಹ ಲಕ್ಷಣಗಳು ಕಾಣಿಸಿಕೊಳ್ಳುತ್ತವೆ.

**ಥೈರಾಯ್ಡ್ ಸಮಸ್ಯೆಯಿಂದ ಉಂಟಾಗುವ ಕಾಯಿಲೆಗಳು**

**ಗಾಯಿಟರ್:** ಇದನ್ನು ಗಳಗಂಡ ರೋಗ ಎಂದೂ ಕರೆಯುತ್ತಾರೆ. ಥೈರಾಯ್ಡ್ ಗ್ರಂಥಿಯು ದೊಡ್ಡದಾಗಿ ಬೆಳೆದು ಊದಿಕೊಳ್ಳುವ ಸ್ಥಿತಿ.

**ಹೈಪೋಥೈರಾಯ್ಡಿಸಮ್:** ಥೈರಾಯ್ಡ್ ಗ್ರಂಥಿಯು ಅಗತ್ಯಕ್ಕಿಂತ



ಕಡಿಮೆ ಹಾರ್ಮೋನ್ ಉತ್ಪಾದನೆ ಮಾಡಿದಾಗ ಕಂಡುಬರುವ ಸಮಸ್ಯೆ ಇದರ ಲಕ್ಷಣಗಳು ಆಯಾಸ, ತೂಕ ಹೆಚ್ಚಾಗುವುದು, ಶೀತ ಅಸಹಿಷ್ಣುತೆ, ಒಣ ಚರ್ಮ, ಮಲಬದ್ಧತೆ ಮತ್ತು ಖಿನ್ನತೆ.

**ಹೈಪರ್ ಥೈರಾಯ್ಡಿಸಮ್:** ಥೈರಾಯ್ಡ್ ಗ್ರಂಥಿ ಅಗತ್ಯಕ್ಕಿಂತ ಹೆಚ್ಚು ಹಾರ್ಮೋನ್ ಉತ್ಪಾದನೆ ಮಾಡಿದರೆ ಕಂಡುಬರುವ ಸಮಸ್ಯೆ. ಇದರ ಲಕ್ಷಣಗಳು ತೂಕ ನಷ್ಟ, ತ್ವರಿತ ಹೃದಯ ಬಡಿತ, ಕಿರಿಕಿರಿ, ಶಾಖವನ್ನು ಸಹಿಸದಿರುವುದು ಮತ್ತು ಆತಂಕ.

**ಥೈರಾಯ್ಡೈಟಿಸ್:** ಥೈರಾಯ್ಡ್ ಗ್ರಂಥಿಯಲ್ಲಿ ಊತ ಉಂಟಾಗಿ ಥೈರಾಕ್ಸಿನ್ ಹಾರ್ಮೋನಿನ ಸಂಗ್ರಹವು ರಕ್ತಕ್ಕೆ ಸೋರಿಕೆಯಾಗುವ ಸಾಧ್ಯತೆಗಳಿವೆ. ಈ ರೀತಿ ಆದಾಗ ರಕ್ತದಲ್ಲಿನ ಹಾರ್ಮೋನ್ ಮಟ್ಟ ಹೆಚ್ಚಾಗಬಹುದು.

**ಥೈರಾಯ್ಡ್ ಗ್ರಂಥಿಯ ಗೆಡ್ಡೆಗಳು:** ಕೆಲವೊಮ್ಮೆ ಸಾಮಾನ್ಯ ಗೆಡ್ಡೆಗಳಾಗಿರುತ್ತವೆ. ಕೆಲವೊಮ್ಮೆ ಇದರಿಂದ ಕ್ಯಾನ್ಸರ್ ಕೂಡ ಆಗಿರಬಹುದು.

### ಉತ್ತಮ ಜೀವನ ಶೈಲಿ ಮತ್ತು ಆಹಾರ ಕ್ರಮ ಬಹಳ ಮುಖ್ಯ

ನಮ್ಮಲ್ಲಿ ಯಾವುದೇ ಆರೋಗ್ಯ ಸಮಸ್ಯೆ ಇದ್ದರೂ ಜೀವನ ಶೈಲಿಯನ್ನು ಬದಲಿಸಿಕೊಳ್ಳುವುದು ಬಹಳ ಮುಖ್ಯವಾಗಿದೆ. ದಿನವೂ ಬಿರುಸಾದ ನಡಿಗೆ ಮತ್ತು ವ್ಯಾಯಾಮದಂತ ದೈಹಿಕ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳುವುದು ಮತ್ತು ಸಮತೋಲನ ಆಹಾರ ಸೇವನೆ ಬಹಳ ಮುಖ್ಯ. ನಮ್ಮ ಒಟ್ಟಾರೆ ಆರೋಗ್ಯಕ್ಕೆ ವಿಟಮಿನ್ ಡಿ ಅತ್ಯಗತ್ಯ ಮತ್ತು ಇದು ಥೈರಾಯ್ಡ್ ಗ್ರಂಥಿಯ ಕಾರ್ಯದಲ್ಲಿ ಮುಖ್ಯ ಪಾತ್ರವನ್ನು ವಹಿಸುತ್ತದೆ. ಕೊಬ್ಬು ಇರುವ ಮೀನು, ಡೈರಿ ಉತ್ಪನ್ನಗಳು ಮತ್ತು ಸೂರ್ಯನ ಬೆಳಕಿನಲ್ಲಿ ವಿಟಮಿನ್ ಡಿ ಇದೆ. ಕಂದು ಅಕ್ಕಿ ಮತ್ತು ಗೋಧಿಯಂತಹ ಸಂಪೂರ್ಣ ಧಾನ್ಯಗಳು ಜೀರ್ಣಕಾರಿ. ಜೊತೆಗೆ ಆರೋಗ್ಯಕ್ಕೆ ಮುಖ್ಯವಾದ ಫೈಬರ್ ಸೇರಿದಂತೆ ಪೋಷಕಾಂಶಗಳ ಉತ್ತಮ ಮೂಲವನ್ನು ಒದಗಿಸುತ್ತವೆ. ಆದಷ್ಟೂ ಜಂಕ್ ಪದಾರ್ಥಗಳು ಮತ್ತು ಹೆಚ್ಚು ಸಕ್ಕರೆ ಇರುವ ಪಾನೀಯಗಳನ್ನು ಸೇವಿಸದೇ ಇರುವುದು ಒಳಿತು.

ಪ್ರತಿದಿನ ಸೇಬು, ದಾಳಿಂಬೆ, ಸೀಬೆ, ಬಾಳೆಹಣ್ಣು, ಕಿತ್ತಲೆ ಹೀಗೆ ವಿವಿಧ ಹಣ್ಣುಗಳು ಮತ್ತು ತರಕಾರಿಗಳನ್ನು ಸೇವಿಸಬೇಕು. ಹಾಲು ಮತ್ತು ಹಾಲಿನ ಉತ್ಪನ್ನಗಳನ್ನು ಅಂದರೆ ಮಜ್ಜಿಗೆ, ಮೊಸರು ಮತ್ತು ತುಪ್ಪವನ್ನು ನಿಯಮಿತವಾಗಿ ಹಿತಮಿತವಾಗಿ ಸೇವಿಸಬೇಕು. ಅಗಸೆ ಬೀಜ, ಸೂರ್ಯಕಾಂತಿ ಬೀಜ, ಒಣ ಹಣ್ಣುಗಳು, ಕಾಲಕಾಲಕ್ಕೆ ಸಿಗುವ ತಾಜಾ ಹಸಿರು ಸೊಪ್ಪುಗಳು, ಧಾನ್ಯಗಳು, ಕಾಳುಗಳು, ಸಾರ್ಡಿನ್,ಸಾಲ್ಮನ್ ಮೀನು, ಮೊಟ್ಟೆ ಮತ್ತು ಮಾಂಸಾಹಾರಿಗಳಾಗಿದ್ದರೆ ಕೋಳಿಯ ಮಾಂಸವನ್ನು ಸೇವಿಸಬೇಕು.

ಅಯೋಡಿನ್ ಇರುವ ಉಪ್ಪನ್ನು ದಿನನಿತ್ಯ ಬಳಸಬೇಕು. ಏಕೆಂದರೆ ಅಯೋಡಿನ್ ಥೈರಾಯ್ಡ್ ಗ್ರಂಥಿಗೆ ಅಗತ್ಯವಾದ ಮೂಲ ಖನಿಜವಾಗಿದೆ. ಹಾಗೆಯೇ ಸತುವಿನ ಸಮೃದ್ಧ ಮೂಲವಾಗಿರುವ ಕುಂಬಳಕಾಯಿ ಬೀಜಗಳು, ಕರಿಬೇವಿನ ಸೊಪ್ಪು, ಹೆಸರುಬೇಳೆ ಮತ್ತು ಮೊಳಕೆ ಬರಿಸಿದ ಹೆಸರುಕಾಳು, ಕಡಲೆಕಾಳು, ಹುರುಳಿಕಾಳಿನ ಸೇವನೆ ಹಿತಕಾರಿ. ಒಟ್ಟಾರೆಯಾಗಿ ಹೇಳುವುದಾದರೆ ಥೈರಾಯ್ಡ್ ಗ್ರಂಥಿಯ ಆರೋಗ್ಯವನ್ನು ಕಾಪಾಡಿಕೊಳ್ಳಲು ಸಮತೋಲಿತ ಮತ್ತು ಪೌಷ್ಟಿಕ ಆಹಾರವನ್ನು ಸೇರಿಸುವುದು ಬಹಳ ಮುಖ್ಯವಾಗಿದೆ.

ಈ ಪೌಷ್ಟಿಕ ಆಹಾರ ಸೇವನೆಯ ಪ್ರಮಾಣ ವ್ಯಕ್ತಿಯಿಂದ ವ್ಯಕ್ತಿಗೆ ಬದಲಾಗಬಹುದು. ಸರಿಯಾದ ರೋಗನಿರ್ಣಯ ಮತ್ತು ವೈಯಕ್ತಿಕ ಸಲಹೆಗಾಗಿ ವೈದ್ಯರನ್ನು ಕಂಡು ಅವರೊಡನೆ ಸಮಾಲೋಚಿಸುವುದು ಬಹಳ ಮುಖ್ಯ. ನಿರ್ದಿಷ್ಟ ಪರಿಸ್ಥಿತಿಯ ಆಧಾರದ ಮೇಲೆ ಉತ್ತಮ ಆಹಾರದ ಆಯ್ಕೆಗಳ ಕುರಿತು ಅವರು ನಿಮಗೆ ಮಾರ್ಗದರ್ಶನ ನೀಡಬಹುದು. ಆಯುರ್ವೇದದಲ್ಲಿಯೂ ಥೈರಾಯಿಡ್ ಸಮಸ್ಯೆ ಉತ್ತಮ ಪರಿಹಾರೋಪಾಯಗಳಿವೆ. ಆರಂಭಿಕ ಹಂತದಲ್ಲಿ ಪಂಚಕರ್ಮ ಮತ್ತು ಔಷಧಿಗಳು ಲಭ್ಯವಿವೆ.

## ಶಿವಾನಂದ ಪಾಟೀಲ ಬೇಷರತ್ ಕ್ಷಮೆ ಕೇಳಬೇಕು: ಹೆಚ್ ಡಿ ಕುಮಾರಸ್ವಾಮಿ ಒತ್ತಾಯ



ಬೆಂಗಳೂರು: ಬರಗಾಲ ಬಂದ್ರೆ ರೈತರು ಸಾಲಮನ್ನಾದ ನಿರೀಕ್ಷೆ ಇಟ್ಕೊಳ್ತಾರೆ ಎಂಬ ವಿವಾದಾತ್ಮಕ ಹೇಳಿಕೆ ನೀಡಿರುವ ಸಕ್ಕರೆ ಖಾತೆ ಸಚಿವ ಶಿವಾನಂದ ಪಾಟೀಲ ವಿರುದ್ಧ ಪ್ರತಿಪಕ್ಷಗಳು ತೀವ್ರ ವಾಗ್ದಾಳಿ ನಡೆಸುತ್ತಿವೆ. ಸಚಿವರು ಬೇಷರತ್ ಕ್ಷಮೆ ಕೇಳಬೇಕು ಎಂದು ಜೆಡಿಎಸ್ ಶಾಸಕಾಂಗ ಪಕ್ಷದ ನಾಯಕ ಹೆಚ್.ಡಿ. ಕುಮಾರಸ್ವಾಮಿ ಆಗ್ರಹಿಸಿದ್ದಾರೆ.

ಈ ಕುರಿತು ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ ಕುಮಾರಸ್ವಾಮಿ, ಶಿವಾನಂದ ಪಾಟೀಲ ಅವರು ರೈತರ ಬಗ್ಗೆ ನೀಡಿರುವ ಹೇಳಿಕೆ ಖಂಡನೀಯ.

ಅನ್ನದಾತನ ಕಷ್ಟ, ಸಂಕಷ್ಟಗಳ ಬಗ್ಗೆ ಅವಹೇಳನ ಮಾಡುವುದು ಖಂಡಿತಾ ಸರಿಯಲ್ಲ. ಸಚಿವರು ಇಂಥ ವಿಷಯಗಳ ಬಗ್ಗೆ ಬಹಳ ಎಚ್ಚರಿಕೆ, ಸೂಕ್ಷ್ಮತೆ, ಸಂಯಮದಿಂದ ಮಾತನಾಡಬೇಕು ಎಂದಿದ್ದಾರೆ.

ನಾನು ಕೃಷಿಸಾಲ ಮನ್ನಾ ಮಾಡುವ ಮುನ್ನ ರಾಜ್ಯದಲ್ಲಿ ನಡೆದ ರೈತರ ಸರಣಿ ಆತ್ಮಹತ್ಯಾಕಾಂಡ ನೆನಪು ಮಾಡಿಕೊಂಡರೆ ಈಗಲೂ ನನ್ನ ಮೈ ನಡುಗುತ್ತದೆ. ರೈತ ಕೇಳುತ್ತಿರುವುದು ತನ್ನ ಹಕ್ಕನ್ನಷ್ಟೇ, ಭಿಕ್ಷೆಯನ್ನಲ್ಲ. ಸಚಿವರು ಬೇಷರತ್ ಕ್ಷಮೆ ಕೇಳಬೇಕು, ತಮ್ಮ ಹೇಳಿಕೆಯನ್ನು ಕೂಡಲೇ ವಾಪಸ್ ಪಡೆಯಬೇಕು ಎಂದು ಅವರು ಆಗ್ರಹಿಸಿದ್ದಾರೆ.

## ಪರಿಷತ್ ವಿಪಕ್ಷ ನಾಯಕನಾಗಿ ಕೋಟ ಶ್ರೀನಿವಾಸ ಪೂಜಾರಿ, ವಿಧಾನಸಭೆ ವಿರೋಧ ಪಕ್ಷದ ಉಪನಾಯಕನಾಗಿ ಅರವಿಂದ್ ಬೆಲ್ಲದ್ ನೇಮಕ



ಬೆಂಗಳೂರು: ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ಅವರು ರಾಜ್ಯ ಘಟಕದಲ್ಲಿ ಎರಡನೇ ಹಂತದ ಅಧಿಕಾರ ಹಂಚಿಕೆ ಮಾಡಿದ್ದು, ವಿಧಾನಸಭೆ ಮತ್ತು ವಿಧಾನ ಪರಿಷತ್‌ನ ಪ್ರಮುಖ ಹುದ್ದೆಗಳಿಗೆ ನೇಮಕ ಮಾಡಿ ಆದೇಶ ಹೊರಡಿಸಿದ್ದಾರೆ.

ಮೇಲ್ಮನೆ ವಿಪಕ್ಷ ನಾಯಕನಾಗಿ ಕೋಟ ಶ್ರೀನಿವಾಸ್ ಪೂಜಾರಿ ಅವರನ್ನು ನೇಮಿಸಲಾಗಿದೆ. ಇದೇ ವೇಳೆ ಅವರನ್ನು ವಿಧಾನಸಭೆ ವಿರೋಧ ಪಕ್ಷದ ಉಪ ನಾಯಕನಾಗಿ ಅರವಿಂದ್ ಬೆಲ್ಲದ್ ಅವರನ್ನು ನೇಮಕ ಮಾಡಲಾಗಿದೆ.

ಕೆಲವು ದಿನಗಳ ಹಿಂದಷ್ಟೇ ಬಿ.ವೈ ವಿಜಯೇಂದ್ರ ಅವರು ರಾಜ್ಯ ಬಿಜೆಪಿ ಉಪಾಧ್ಯಕ್ಷರು, ಬಿಜೆಪಿ ಪ್ರಧಾನ ಕಾರ್ಯದರ್ಶಿಗಳು, ರಾಜ್ಯ ಕಾರ್ಯದರ್ಶಿಗಳು ಮತ್ತು ಕೆಲವು ಮೋರ್ಚಾಗಳಿಗೆ ನೇಮಕಾತಿಯನ್ನು ಪ್ರಕಟಿಸಿದ್ದರು. ಇದೀಗ ಎರಡನೇ ಹಂತದಲ್ಲಿ ವಿಧಾನ ಸಭೆ ಮತ್ತು ಪರಿಷತ್‌ನ ಪ್ರಮುಖ ಹುದ್ದೆಗಳಿಗೆ ನೇಮಕ ಮಾಡಲಾಗಿದೆ.

ಕೋಟ ಶ್ರೀನಿವಾಸ ಪೂಜಾರಿ: ಮೇಲ್ಮನೆ ವಿಪಕ್ಷ ನಾಯಕ, ಸುನೀಲ್ ವಲ್ಯಾಪುರೆ : ಪರಿಷತ್ ಉಪ ನಾಯಕ, ಅರವಿಂದ್ ಬೆಲ್ಲದ್: ವಿಧಾನಸಭೆಯಲ್ಲಿ ವಿರೋಧ ಪಕ್ಷದ ಉಪ ನಾಯಕ, ಎನ್. ರವಿಕುಮಾರ್ ಕುಮಾರ್ : ವಿಧಾನ ಪರಿಷತ್ ಮುಖ್ಯ ಸಚೇತಕ ದೊಡ್ಡನಗೌಡ ಪಾಟೀಲ್: ವಿಧಾನಸಭೆ ಮುಖ್ಯ ಸಚೇತಕರನ್ನಾಗಿ ನೇಮಕ ಮಾಡಲಾಗಿದೆ.

ಆರ್. ಅಶೋಕ್ ಅವರನ್ನು ವಿಧಾನಭೆಯ ವಿಪಕ್ಷ ನಾಯಕರಾಗಿ ಆಯ್ಕೆ ಮಾಡಿದ ಹಿನ್ನೆಲೆಯಲ್ಲಿ ವಿಧಾನ ಪರಿಷತ್ ವಿಪಕ್ಷ ನಾಯಕನ ಸ್ಥಾನವನ್ನು ಉತ್ತರ ಕರ್ನಾಟಕಕ್ಕೆ ಕೊಡಬೇಕು ಎಂಬ ಬೇಡಿಕೆ ಇತ್ತು.

ಆದರೆ, ಕಳೆದ ಬಾರಿ ವಿಧಾನ ಪರಿಷತ್ ವಿಪಕ್ಷ ಸ್ಥಾನವನ್ನು ಚೆನ್ನಾಗಿ ನಿಭಾಯಿಸಿದ ಕೋಟ ಶ್ರೀನಿವಾಸ ಪೂಜಾರಿ ಅವರಿಗೇ ಪಕ್ಷ ಮಣೆ ಹಾಕಿದೆ.

ಉತ್ತರ ಕರ್ನಾಟಕ ಭಾಗದಿಂದ ವಿಪಕ್ಷ ಸ್ಥಾನಕ್ಕೆ ಕೇಳಿ ಬಂದಿದ್ದ ರಘುನಾಥ್ ಮಲ್ಕಾಪುರೆ ಅವರಿಗೆ ಉಪ ನಾಯಕನ ಸ್ಥಾನ ನೀಡಲಾಗಿದೆ.

# ಮೂರು ಕ್ರಿಮಿನಲ್ ಜಸ್ಟೀಸ್ ಬಿಲ್‌ಗಳು ಭಾರತದಲ್ಲಿ ಹೊಸ 'ನ್ಯಾಯ' ಯುಗವನ್ನು ಪ್ರಾರಂಭಿಸಲಿವೆ: ಶಾ

ಕೇಂದ್ರ ಗೃಹ ಮತ್ತು ಸಹಕಾರ ಸಚಿವ ಶ್ರೀ ಅಮಿತ್ ಶಾ ಅವರು ಗುರುವಾರ ಲೋಕಸಭೆಯಲ್ಲಿ ಮೂರು ಹೊಸ ಕ್ರಿಮಿನಲ್ ಮಸೂದೆಗಳನ್ನು ಮಂಡಿಸಿದರು. ಎಲ್ಲಾ ಮೂರು ಕ್ರಿಮಿನಲ್ ಮಸೂದೆಗಳನ್ನು ಲೋಕಸಭೆಯಲ್ಲಿ ಅಂಗೀಕರಿಸಲಾಗಿದೆ. ಈಗ ರಾಜ್ಯಸಭೆಯಲ್ಲಿ ಮಂಡನೆಯಾಗಲಿದೆ. ಇಲ್ಲಿ ಅಂಗೀಕಾರವಾದ ನಂತರ ರಾಷ್ಟ್ರಪತಿಗಳ ಅನುಮೋದನೆಗೆ ಕಳುಹಿಸಲಾಗುವುದು.

ನ್ಯಾಯ, ಪಾರದರ್ಶಕತೆ ಮತ್ತು ನ್ಯಾಯಸಮ್ಮತತೆಯ ಆಧಾರದ ಮೇಲೆ ನವ ಭಾರತದ ನವೀನ ಕಾನೂನುಗಳು ನಮ್ಮನ್ನು ಗುಲಾಮಗಿರಿಯ ಮನಸ್ಥಿತಿ ಮತ್ತು ಬ್ರಿಟಿಷ್ ಆಳ್ವಿಕೆಯ ಕುರುಹುಗಳಿಂದ ಮುಕ್ತಿ ಕೊಡಿಸಲಿದೆ ಎಂಬುದು ಖಚಿತ. ನವ ಭಾರತದ ಹೊಸ ಕಾನೂನು ಶಿಕ್ಷೆಯ ಬದಲು ನ್ಯಾಯವನ್ನು ಒದಗಿಸಲಿದೆ ಎಂಬುದು ಶಾರವರ ಪ್ರತಿಪಾದನೆ.

ಅಮೃತ ಕಾಲದ ಈ ಬದಲಾವಣೆಗಳೊಂದಿಗೆ, ನವ ಭಾರತದ ಹೊಸ ಕಾನೂನು ಅಂದರೆ ಕ್ರಿಮಿನಲ್ ಜಸ್ಟಿಸ್ ಸಿಸ್ಟಮ್ ಹೊಸ ಯುಗವನ್ನು ಪ್ರವೇಶಿಸಲಿದೆ, ಅಲ್ಲಿ ಕಾನೂನಿನ ಉದ್ದೇಶವು ಶಿಕ್ಷೆಯನ್ನು ನೀಡುವುದಲ್ಲ, 'ನ್ಯಾಯ'ವನ್ನು ನೀಡುವುದು ಆಗಿರುತ್ತದೆ. ನರೇಂದ್ರ ಮೋದಿ ಸರ್ಕಾರವು ನುಡಿದಂತೆ ನಡೆದುಕೊಳ್ಳುತ್ತದೆ ಎಂಬುದಕ್ಕೆ ಇದು ಸಾಕ್ಷಿ.

ಪ್ರಧಾನಿ ನರೇಂದ್ರ ಮೋದಿಯವರ ನೇತೃತ್ವದಲ್ಲಿ ಕೇಂದ್ರ ಗೃಹ ಮತ್ತು ಸಹಕಾರ ಸಚಿವ ಅಮಿತ್ ಶಾ ಅವರು ಈ ಅಮೃತ ಗಳಿಗೆಯಲ್ಲಿ ಗುಲಾಮಗಿರಿಯ ಚಿಹ್ನೆಗಳನ್ನು ಕಿತ್ತುಹಾಕಲು ಮತ್ತು ಶಿಕ್ಷೆಯ ಬದಲು ಜನರಿಗೆ ನ್ಯಾಯ ಒದಗಿಸಲು ಸಂಪೂರ್ಣ ಸಿದ್ಧತೆ ಮಾಡಿಕೊಂಡಿದ್ದಾರೆ.

ಆ ಸಮಯದಲ್ಲಿ ಬ್ರಿಟಿಷರು ವಿಧಿಸಿದ್ದ ಭಾರತೀಯ ದಂಡ ಸಂಹಿತೆ, ಕ್ರಿಮಿನಲ್ ಪ್ರೊಸೀಜರ್ ಕೋಡ್ ಮತ್ತು ಭಾರತೀಯ ಸಾಕ್ಷ್ಯ ಸಂಹಿತೆಗಳು ನ್ಯಾಯ ನಿರ್ಣಯಕ್ಕಲ್ಲದೇ, ಶಿಕ್ಷೆಗಾಗಿ ಮಾಡಲ್ಪಟ್ಟಿದ್ದವು



ಎಂಬುದು ಶಾ ರವರ ವಾದ.

ಅವರ ಈ ದಿಟ್ಟ ಹೆಜ್ಜೆಯೊಂದಿಗೆ, ಈಗ ಭಾರತೀಯ ದಂಡ ಸಂಹಿತೆ, 1860 ಅನ್ನು ಭಾರತೀಯ ನ್ಯಾಯಾಂಗ ಸಂಹಿತೆ, 2023 ಎಂದು ಮರುನಾಮಕರಣ ಮಾಡಲಾಗುವುದು, ಕ್ರಿಮಿನಲ್ ಪ್ರೊಸೀಜರ್ ಕೋಡ್, 1898 ಅನ್ನು ಭಾರತೀಯ ನಾಗರಿಕ ರಕ್ಷಣಾ ಸಂಹಿತೆ, 2023 ಮತ್ತು ಇಂಡಿಯನ್ ಎವಿಡೆನ್ಸ್ ಆಕ್ಟ್, 1872 ಅನ್ನು ಭಾರತೀಯ ಸಾಕ್ಷ್ಯ ಕಾಯ್ದೆ, 2023 ಎಂದು ಮರುನಾಮಕರಣ ಮಾಡಲಾಗಿದೆ.

ಕಳೆದ 9 ವರ್ಷಗಳಲ್ಲಿ, ಮೋದಿಯವರ ನಾಯಕತ್ವ ಮತ್ತು ಅಮಿತ್ ಶಾರ ಸಮರ್ಥ ಮಾರ್ಗದರ್ಶನದಲ್ಲಿ, ಭಾರತೀಯ ಜನತಾ ಪಕ್ಷವು ತನ್ನ ಪ್ರಣಾಳಿಕೆ ಮತ್ತು ಭರವಸೆಗಳನ್ನು ಉತ್ತಮವಾಗಿ ಈಡೇರಿಸುತ್ತಾ ಬರುತ್ತಿದೆ. ಸರ್ಕಾರ ರಚನೆಯಾದ ಕೂಡಲೇ 370 ಮತ್ತು 35ಎ ವಿಧಿಗಳನ್ನು ತೆಗೆದುಹಾಕಲಾಗುವುದು ಎಂದು ಮೋದಿ ಸರ್ಕಾರ ಭರವಸೆ ನೀಡಿತ್ತು.

ರಾಜಕೀಯದ ಚಾಣಕ್ಯ, ರಾಷ್ಟ್ರೀಯವಾದಿ ಮೌಲ್ಯಗಳ ಪ್ರಬಲ ಬೆಂಬಲಿಗ ಶಾ ಅವರ ಕಟ್ಟುನಿಟ್ಟಿನ ನೀತಿಗಳಿಂದಾಗಿ 370 ಮತ್ತು 35೦ ವಿಧಿಗಳನ್ನು ತೆಗೆದುಹಾಕಲಾಗಿದೆ. ಪರಿಣಾಮವಾಗಿ, ಎ&ವಿ ಭಾರತದ ಅವಿಭಾಜ್ಯ ಅಂಗವಾಗಿದೆ.

ಒಂದೆಡೆ, ಮುಸ್ಲಿಂ ಮಹಿಳೆಯರಿಗೆ ಸಂಬಂಧಿಸಿದಂತೆ ತ್ರಿವಳಿ ತಲಾಖ್ ಅನ್ನು ತೆಗೆದುಹಾಕುವ ಭರವಸೆಯನ್ನು ಈಡೇರಿಸಿದ ಮೋದಿ-ಶಾ ಜೋಡಿ, ಇನ್ನೊಂದೆಡೆ ಲೋಕಸಭೆಯಲ್ಲಿ ಮಹಿಳೆಯರಿಗೆ 33% ಮೀಸಲಾತಿ ನೀಡುವ ಮೂಲಕ ದೇಶದ ಮಾತೃಶಕ್ತಿಯನ್ನು ಗೌರವಿಸುವ ಕೆಲಸ ಮಾಡಿದ್ದಾರೆ.

ಭಯೋತ್ಪಾದನೆ ಮತ್ತು ಉಗ್ರವಾದದ ವಿರುದ್ಧ ಶೂನ್ಯ ಸಹಿಷ್ಣುತೆಯ ನೀತಿಯನ್ನು ಪಾಲಿಸುವ ಭರವಸೆಯನ್ನು ಬಿಜೆಪಿ ಈಡೇರಿಸಿದೆ, ಇದು ಭಯೋತ್ಪಾದಕ ಘಟನೆಗಳಲ್ಲಿ 65% ಕಡಿತ ಮತ್ತು ಮೂರು ಭಯೋತ್ಪಾದಕ ಹಾಟ್ ಸ್ಪಾಟ್‌ಗಳಾದ ಜಮ್ಮು ಮತ್ತು ಕಾಶ್ಮೀರ, ಎಡಪಂಥೀಯ ಉಗ್ರಗಾಮಿ ಪ್ರದೇಶಗಳು, ಮತ್ತು ಈಶಾನ್ಯ ರಾಜ್ಯಗಳಲ್ಲಿನ ಸಾವುಗಳಲ್ಲಿ 73% ಕಡಿತಕ್ಕೆ ಕಾರಣವಾಯಿತು. 70% ಕ್ಕಿಂತ ಹೆಚ್ಚು ಈಶಾನ್ಯ ಪ್ರದೇಶಗಳನ್ನು ಂಈಖಂ ದಿಂದ ಸಹ ತೆಗೆದುಹಾಕಲಾಗಿದೆ. ಅಯೋಧ್ಯೆಯಲ್ಲಿ ರಾಮಮಂದಿರ ನಿರ್ಮಿಸುವುದಾಗಿ ಮೋದಿ ಸರ್ಕಾರ ಭರವಸೆ ನೀಡಿತ್ತು ಮತ್ತು ಈಗ ಶ್ರೀರಾಮನು ಜನವರಿ 22 ರಿಂದ ಅಲ್ಲಿ ನೆಲೆಸಲಿದ್ದಾನೆ.

ನಾವು ನ್ಯಾಯ ಪಡೆಯುವ ವೇಗವನ್ನು ಹೆಚ್ಚಿಸುತ್ತಿದ್ದೇವೆ, ಇನ್ನು ಮುಂದೆ ಕಾನೂನುಗಳು ಶಿಕ್ಷೆಯನ್ನು ಆಧರಿಸಿರುವುದಿಲ್ಲ ಆದರೆ ನ್ಯಾಯವನ್ನು ಆಧರಿಸಲಿವೆ ಎಂದು ಕೇಂದ್ರ ಗೃಹ ಸಚಿವ ಮತ್ತು ಭಾರತೀಯ ಜನತಾ ಪಕ್ಷದ ವರಿಷ್ಠ ನಾಯಕ ಶಾ ಹೇಳಿದರು.

ನವ ಭಾರತದ ನಿರ್ಮಾಣಕ್ಕಾಗಿ ಹೊಸ ಕಾನೂನನ್ನು ತರಲು ಮತ್ತು ನೀಡಿದ ಭರವಸೆಗಳನ್ನು ಈಡೇರಿಸಲು ಶಾ ಅವರು ಮಾಡಿದ ಪ್ರಯತ್ನಗಳಿಗೆ ದೇಶದ ಜನರು ಸಾಕ್ಷಿಯಾಗಲಿದ್ದಾರೆ. ಕಳೆದ 9 ವರ್ಷಗಳ ಸಾಧನೆಯನ್ನು ನೋಡಿದರೆ, ಈ ಭರವಸೆಯನ್ನು ಮೋದಿ-ಶಾ ಜೋಡಿ ಈಡೇರಿಸಲಿದೆ ಎನ್ನಬಹುದು.

# ಸೆಬಿಗೆ ಡಿಆರ್‌ಎಚ್‌ಪಿ ಸಲ್ಲಿಸಿದ ಆವ್‌ಫಿಸ್ ಸ್ಪೇಸ್ ಸೊಲ್ಯೂಷನ್ಸ್ ಲಿಮಿಟೆಡ್'

ಹುಬ್ಬಳ್ಳಿ: ಆವ್‌ಫಿಸ್ ಸ್ಪೇಸ್ ಸೊಲ್ಯೂಷನ್ಸ್ ಲಿಮಿಟೆಡ್' ತನ್ನ ಕರಡು ನೋಂದಣಿ ಹೇಳಿಕೆಯನ್ನು (ಡಿಆರ್‌ಎಚ್‌ಪಿ) ಮಾರುಕಟ್ಟೆ ನಿಯಂತ್ರಕ ಸಂಸ್ಥೆಯಾದ ಭಾರತೀಯ ಷೇರು ಮತ್ತು ವಿನಿಮಯ ಮಂಡಳಿ' (ಸೆಬಿ) ಗೆ ಸಲ್ಲಿಸಿದೆ. ಸಿಬಿಆರ್‌ಇ ವರದಿ ಪ್ರಕಾರ, ಜೂನ್ 30, 2023ರ ಹೊತ್ತಿಗೆ, ಒಟ್ಟು ಕೇಂದ್ರಗಳ ಸಂಖ್ಯೆಯ ಆಧಾರದ ಮೇಲೆ ಆವ್‌ಫಿಸ್' ಭಾಅರತದ ಅತಿದೊಡ್ಡ ಹೊಂದಿಕೊಳ್ಳುವ ಕಚೇರಿ ಸ್ಥಳಗಳ ಪರಿಹಾರಗಳ ಕಂಪನಿ ಎನಿಸಿದೆ.

ಕಂಪನಿಯ ಆರಂಭಿಕ ಷೇರು ಬಿಡುಗಡೆ ಅಥವಾ ಆರಂಭಿಕ ಷೇರು ಮಾರಾಟವು 1600 ದಶಲಕ್ಷ ರೂ. ವರೆಗೆ ಹೊಸ ವಿತರಣೆ ಮತ್ತು 10,023,172 ಈಕ್ವಿಟಿ ಷೇರುಗಳ ಮಾರಾಟದ ಪ್ರಸ್ತಾಪ ಒಳಗೊಂಡಿದೆ.

ಮಾರಾಟಕ್ಕಾಗಿ ಈಕ್ವಿಟಿ ಷೇರುಗಳ ಕೊಡುಗೆಯು ?ಪೀಕ್ ಎಕ್ಸ್ ವಿ ಪಾರ್ಟನರ್ಸ್ ಇನ್‌ವೆಸ್ಟ್‌ಮೆಂಟ್ಸ್ ವಿ' (ಈ ಹಿಂದೆ ಎಸ್‌ಸಿಐ ಇನ್‌ವೆಸ್ಟ್‌ಮೆಂಟ್ಸ್ ವಿ ಎಂದು ಕರೆಯಲಾಗುತ್ತಿತ್ತು) ("ಪೀಕ್ ಎಕ್ಸ್ ವಿ" ಅಥವಾ "ಪ್ರವರ್ತಕ ಮಾರಾಟ ಷೇರುದಾರ") ವತಿಯಿಂದ 5,011,586 ವರೆಗಿನ ಈಕ್ವಿಟಿ ಷೇರುಗಳು,

ಬಿಸ್ಕ್ ಲಿಮಿಟೆಡ್'ನಿಂದ ಒಟ್ಟು 4,936,412 ವರೆಗಿನ ಈಕ್ವಿಟಿ ಷೇರುಗಳು ಹಾಗೂ ಲಿಂಕ್ ಇನ್‌ವೆಸ್ಟ್‌ಮೆಂಟ್ ಟ್ರಸ್ಟ್'ನಿಂದ 75,174 ವರೆಗಿನ ಈಕ್ವಿಟಿ ಷೇರುಗಳನ್ನು ಒಳಗೊಂಡಿದೆ.

ಈ ಪ್ರಸ್ತಾಪದಿಂದ ಬರುವ ನಿವ್ವಳ ಆದಾಯವನ್ನು ಹೊಸ ಕೇಂದ್ರಗಳ ಸ್ಥಾಪನೆ, ಕಾರ್ಯಾಚರಣೆ ಬಂಡವಾಳದ ಅವಶ್ಯಕತೆಗಳಿಗೆ ಧನಸಹಾಯ ಮತ್ತು ಸಾಮಾನ್ಯ ಸಾಂಸ್ಥಿಕ ಉದ್ದೇಶಗಳಿಗಾಗಿನ ಬಂಡವಾಳ ವೆಚ್ಚಕ್ಕೆ ಬಳಸಲು ಕಂಪನಿಯು ಪ್ರಸ್ತಾಪಿಸಿದೆ.

ಐಸಿಐಸಿಐ ಸೆಕ್ಯುರಿಟೀಸ್ ಲಿಮಿಟೆಡ್', ಆಕ್ಸಿಸ್ ಕ್ಯಾಪಿಟಲ್ ಲಿಮಿಟೆಡ್', ಐಐಎಫ್‌ಎಲ್ ಸೆಕ್ಯುರಿಟೀಸ್', ಎಂಕೆ ಗ್ಲೋಬಲ್ ಫೈನಾನ್ಷಿಯಲ್ ಸರ್ವೀಸಸ್ ಲಿಮಿಟೆಡ್' ಸಂಸ್ಥೆಗಳು ಈ ಸಂಚಿಕೆಯ ಲೀಡ್ ಮ್ಯಾನೇಜರ್'ಗಳಾಗಿ ಕಾರ್ಯನಿರ್ವಹಿಸಲಿವೆ.

ಸಹ-ಕೆಲಸದ ಸ್ಥಳದಿಂದ ಆರಂಭಗೊಂಡ ಆವ್‌ಸ್ಪಿಸ್', ಪ್ರಸ್ತುತ ಸಮಗ್ರ ಕಚೇರಿ ಸ್ಥಳ ಪರಿಹಾರಗಳ ವೇದಿಕೆಯಾಗಿ ರೂಪಾಂತರಗೊಂಡಿದೆ. ಸಂಸ್ಥೆಯು ಒದಗಿಸುವ ಪ್ರಮುಖ ಸೇವೆಗಳಲ್ಲಿ ಹೊಂದಿಕೊಳ್ಳುವ ಕೆಲಸದ ಸ್ಥಳಗಳು, ವೈಯಕ್ತೀಕರಿಸಿದ ಕಚೇರಿ ಸ್ಥಳಗಳು' ಮತ್ತು ಚಲನಶೀಲತೆ ಪರಿಹಾರಗಳು' ಸೇರಿವೆ.

ಅವ್‌ಫಿಸ್' ಸಂಸ್ಥೆಯು ಸಹ-ಕೆಲಸದ ಪರಿಹಾರಗಳ ಜೊತೆಗೆ, ವಿನ್ಯಾಸ, ನಿರ್ಮಾಣ, ನಿರ್ವಹಣೆ ಮತ್ತು ಹೊಂದಿಕೊಳ್ಳುವ ಕಚೇರಿ ಸ್ಥಳದ ಅವಶ್ಯಕತೆಗಳ ನಿರ್ವಹಣೆಯಲ್ಲಿ ಸಾಮರ್ಥ್ಯಗಳನ್ನು ಅಭಿವೃದ್ಧಿಪಡಿಸಿದೆ. ಆವ್‌ಫಿಸ್ ಟ್ರಾನ್ಸ್‌ಫಾರ್ಮ್' ಮತ್ತು ಆವ್‌ಫಿಸ್ ಕೇರ್' ಇದಕ್ಕೆ ಉದಾಹರಣೆಯಾಗಿವೆ.

ಕಂಪನಿಯು ಆಹಾರ ಮತ್ತು ಪಾನೀಯಗಳು, ಐಟಿ ಬೆಂಬಲ ಹಾಗೂ ಸಂಗ್ರಹಣೆ ಮತ್ತು ಸ್ಥಳದ ವೈಯಕ್ತೀಕರಣದಂತಹ ಮೂಲಸೌಕರ್ಯ ಸೇವೆಗಳನ್ನು ಒದಗಿಸುತ್ತದೆ. ಜೊತೆಗೆ ಕಾರ್ಯಕ್ರಮಗಳ ಆತಿಥ್ಯ, ಮತ್ತು ಸಭೆ-ಸಮಾರಂಭದ ವ್ಯವಸ್ಥೆಗಳಿಗೆ ಸಂಬಂಧಿಸಿದ ಸೇವೆಗಳನ್ನು ಸಹ ಒದಗಿಸುತ್ತದೆ.

ಅಗತ್ಯಕ್ಕೆ ತಕ್ಕಂತೆ ಹೊಂದಿಕೊಳ್ಳುವ ಕೆಲಸದ ಡೆಸ್ಕ್‌ನ ಅಗತ್ಯಗಳಿಂದ ಹಿಡಿದು ನವೋದ್ಯಮಗಳು, ಸಣ್ಣ ಕೈಗಾರಿಕೆಗಳು ಮತ್ತು ದೊಡ್ಡ ಸಂಸ್ಥೆಗಳಿಗೆ ವೈಯಕ್ತೀಕರಿಸಿದ ಕಚೇರಿ ಸ್ಥಳಗಳವರೆಗೆ ವೈವಿಧ್ಯಮಯ ಅಗತ್ಯಗಳನ್ನು ಪೂರೈಸುವ ಸಮಗ್ರ ಶ್ರೇಣಿಯ ಹೊಂದಿಕೊಳ್ಳುವ ಕಾರ್ಯಸ್ಥಳ ಪರಿಹಾರಗಳನ್ನು ಆವ್‌ಫಿಸ್' ಒದಗಿಸುತ್ತದೆ. ಒಂದೇ ಕುರ್ಚಿ ಅಥವಾ ಒಂದು ಆಸನದಿಂದ ಹಿಡಿದು ಬಹು ಕುರ್ಚಿ ಅಥವಾ ಬಹು ಸಂಖ್ಯೆಯ ಆಸನಗಳವರೆಗಿನ ಅಗತ್ಯಕ್ಕನುಗುಣವಾದ ಸೀಟಿಂಗ್ ವ್ಯವಸ್ಥೆಗಳು ಕಂಪನಿಯ ಕೆಲಸದ ಸ್ಥಳದ ಪರಿಹಾರಗಳಲ್ಲಿ ಸೇರಿವೆ. ಇವುಗಳನ್ನು ಬಳಸಲು ಗ್ರಾಹಕರಿಗೆ ಒಂದು ಗಂಟೆಯಿಂದ ಹಲವಾರು ವರ್ಷಗಳವರೆಗೆ ಒಪ್ಪಂದ ಮಾಡಿಕೊಳ್ಳಲು ಲಭ್ಯವಿದೆ.

ಹೊಂದಿಕೊಳ್ಳುವ ಕೆಲಸದ ಸ್ಥಳದ ಕ್ಷೇತ್ರದ ಅಗ್ರ 5 ಕಂಪನಿಗಳ ಪೈಕಿ ಆವ್‌ಫಿಸ್' ನಂ. 1 ಸ್ಥಾನದಲ್ಲಿದೆ ಮತ್ತು ಭಾರತದಾದ್ಯಂತ 16 ನಗರಗಳಲ್ಲಿ ಸೇವೆಗಳನ್ನು ಒದಗಿಸುತ್ತಿದೆ. ಅಲ್ಲದೆ, ?ಆವ್‌ಫಿಸ್' ಭಾರತದಲ್ಲಿ ಗರಿಷ್ಠ ಸಂಖ್ಯೆಯ ಸೂಕ್ಷ್ಮ ಮಾರುಕಟ್ಟೆಗಳಲ್ಲಿ ಅಸ್ತಿತ್ವ ಕಾಯ್ದುಕೊಂಡಿದೆ.

## ಛತ್ತೀಸ್‌ಗಢದಲ್ಲಿ ಪೊಲೀಸ್ ಎನ್‌ಕೌಂಟರ್; 3 ಮಾವೋವಾದಿಗಳು ಹತ



ರಾಯ್ಪುರ: ಛತ್ತೀಸ್‌ಗಢದಲ್ಲಿ ಮತ್ತೊಂದು ನಕ್ಸಲ್ ಎನ್ಕೌಂಟರ್ ನಡೆದಿದ್ದು, ಪೊಲೀಸ್ ಎನ್ಕೌಂಟರ್ ನಲ್ಲಿ ಮೂವರು ಮಾವೋವಾದಿಗಳು ಹತರಾಗಿದ್ದಾರೆ ಎಂದು ತಿಳಿದುಬಂದಿದೆ. ಛತ್ತೀಸ್‌ಗಢದ ದಾಂತೇವಾಡ ಜಿಲ್ಲೆಯಲ್ಲಿ ಭಾನುವಾರ ಭದ್ರತಾ ಸಿಬ್ಬಂದಿಯೊಂದಿಗೆ ನಡೆದ ಗುಂಡಿನ ಕಾಳಗದಲ್ಲಿ ಕನಿಷ್ಠ ಮೂವರು ಮಾವೋವಾದಿಗಳು ಹತರಾಗಿದ್ದಾರೆ ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಮೂಲಗಳ ಪ್ರಕಾರ ಭಾನುವಾರ ಸಂಜೆ 5:30 ರ ಸುಮಾರಿಗೆ ಮಾವೋವಾದಿ ವಿರೋಧಿ ಕಾರ್ಯಾಚರಣೆಯಲ್ಲಿ ಭದ್ರತಾ ಸಿಬ್ಬಂದಿಯ ಜಂಟಿ ತಂಡವು ಕಾಟೇಕಲ್ಯಾಣ ಪೊಲೀಸ್ ಠಾಣಾ ವ್ಯಾಪ್ತಿಯ ದಬ್ಬಕುನ್ನ ಗ್ರಾಮದ ಬಳಿಯ ಬೆಟ್ಟದ ಮೇಲೆ ಮಾವೋವಾದಿಗಳ ಇರುವಿಕೆ ಪತ್ತೆ ಮಾಡಿದ್ದು, ಈ ವೇಳೆ ಪೊಲೀಸರು ಮತ್ತು ಮಾವೋವಾದಿಗಳ ನಡುವೆ ಗುಂಡಿನ ಚಕಮಕಿ ಏರ್ಪಟ್ಟಿದೆ ಎಂದು ಪೊಲೀಸ್ ಮಹಾನಿರೀಕ್ಷಕ (ಬಸ್ತರ್ ರೇಂಜ್) ಸುಂದರರಾಜ್ ಪಿ ತಿಳಿಸಿದ್ದಾರೆ.

ತುಮಕ್‌ಪಾಲ್ ಮತ್ತು ದಬ್ಬಕುನ್ನಾ ನಡುವಿನ ಅರಣ್ಯದ ಬೆಟ್ಟದಲ್ಲಿ ಗುಂಡಿನ ಚಕಮಕಿ ನಡೆದಿದೆ. ಗುಂಡಿನ ದಾಳಿ ನಿಲ್ಲಿಸಿದ ನಂತರ, ಸಮವಸ್ತ್ರ ಧರಿಸಿದ್ದ ಮೂವರು ಪುರುಷ ಮಾವೋವಾದಿಗಳ ಶವಗಳನ್ನು ಸ್ಥಳದಿಂದ ವಶಪಡಿಸಿಕೊಳ್ಳಲಾಗಿದೆ. ಎನ್‌ಕೌಂಟರ್ ಸ್ಥಳದಿಂದ ಸ್ಫೋಟಕಗಳು ಮತ್ತು ಶಸ್ತ್ರಾಸ್ತ್ರಗಳ ಸಂಗ್ರಹವನ್ನು ಸಹ ವಶಪಡಿಸಿಕೊಳ್ಳಲಾಗಿದೆ ಎಂದು ಐಜಿ ತಿಳಿಸಿದ್ದಾರೆ.

# ನಾನು ರೈತ ವಿರೋಧಿಯಲ್ಲ, ಹೇಳಿಕೆಯನ್ನು ತಿರುಚಲಾಗಿದೆ: ಸಚಿವ ಶಿವಾನಂದ ಪಾಟೀಲ್

ಬೆಂಗಳೂರು: ನಾನು ರೈತ ವಿರೋಧಿಯಲ್ಲ. ಚುನಾವಣೆ ಹಿನ್ನೆಲೆಯಲ್ಲಿ ವಿರೋಧ ಪಕ್ಷಗಳು ರಾಜಕೀಯ ಮಾಡುತ್ತಿವೆ. ನನ್ನ ಹೇಳಿಕೆಯನ್ನು ತಿರುಚಲಾಗಿದೆ ಎಂದು ಸಚಿವ ಶಿವಾನಂದ ಪಾಟೀಲ್ ಅವರು ಹೇಳಿದ್ದಾರೆ.

ರೈತರ ಕುರಿತು ತಾವು ನೀಡಿದ್ದ ವಿವಾದಾತ್ಮಕ ಹೇಳಿಕೆ ಕುರಿತು ಸ್ಪಷ್ಟನೆ ನೀಡಿರುವ ಅವರು, ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ವಿರೋಧ ಪಕ್ಷಗಳು ರಾಜಕೀಯ ಮಾಡುತ್ತಿವೆ. ನಾನು ರೈತರ ವಿರೋಧಿ ಅಲ್ಲ, ರೈತರ ವಿರೋಧವಾಗಿ ಯಾವುದೇ ಹೇಳಿಕೆ ನೀಡಿಲ್ಲ. ಮೂರು ವರ್ಷಕ್ಕೊಮ್ಮೆ



ರೈತರ ಬೆಳೆಗಳಿಗೆ ಬೆಲೆ ಬರುತ್ತದೆ. ಉಳಿದ ಎರಡು ಬೆಲೆ ಇಲ್ಲದೆ ಕಂಗಾಲಾಗಿರುತ್ತಾರೆ. ಹಾಗಾಗಿ ರೈತರು ಸಾಲಮನ್ನಾ ಆಗಲಿ ಎಂದು ಆಶಯ ವ್ಯಕ್ತಪಡಿಸುತ್ತಾರೆಂದು ಹೇಳಿದ್ದೆ ಎಂದು ಹೇಳಿದ್ದಾರೆ.

ಇತ್ತೀಚೆಗೆ ಕೇಂದ್ರದ ಯೋಜನೆಗಳು ರೈತರಿಗೆ ಮುಳುವಾಗಿವೆ. ನನಗೆ ಮದ ಏರಿದೆ ಎಂದು ವಿರೋಧ ಪಕ್ಷದವರು ಹೇಳುತ್ತಾರೆ. ಆದರೆ, ಇದೆಲ್ಲ ರಾಜಕೀಯ ತಂತ್ರವಷ್ಟೇ.

ಬಿಜೆಪಿ ನಾಯಕರಿಗೆ ರೈತರ ಮೇಲೆ ಕರುಣೆ ಇದ್ದರೆ ಕೇಂದ್ರ ಸರ್ಕಾರದ ನೀತಿಗಳನ್ನು ಬದಲಾಯಿಸಲಿ. ವಿರೋಧ ಪಕ್ಷದ ನಾಯಕರು ರೈತರ ಸಮಸ್ಯೆ ಬಗ್ಗೆ ಪ್ರಧಾನಿ ಮೋದಿ ಗಮನಕ್ಕೆ ತರಲಿ ಎಂದು ಒತ್ತಾಯಿಸಿದರು.

ಬೆಳಗಾವಿ ಜಿಲ್ಲೆಯ ಅಥಣಿ ತಾಲೂಕಿನ ಸುಟ್ಟಟ್ಟಿ ಗ್ರಾಮದಲ್ಲಿ ಗ್ರಾಮೀಣ ಕೃಷಿ ಸ್ವ ಸಹಾಯ ಸಂಘದ ಉದ್ಘಾಟನಾ ಕಾರ್ಯಕ್ರಮದಲ್ಲಿ ಮಾತಾನಾಡಿದ್ದ ಸಚಿವರು, ಸಾಲ ಮನ್ನಾದ ಆಸೆಗಾಗಿ ಬರಗಾಲ ಬರಲೆಂದು ರೈತರು ಕಾಯುತ್ತಾರೆ ಎಂದು ಹೇಳಿದ್ದಾರೆ.

ಕೃಷ್ಣಾ ನದಿ ನೀರು ಪುಕ್ಕಟೆ ಆಗಿದೆ. ಕರೆಂಟ್ ಪುಕ್ಕಟೆ ಸಿಗುತ್ತಿದೆ.

ಬಹಳಷ್ಟು ಮುಖ್ಯಮಂತ್ರಿಗಳು ಬೆಳೆ ಬೆಳೆಯಲು ಬೀಜನೂ ಕೊಟ್ಟರು, ಗೊಬ್ಬರನೂ ಕೊಟ್ಟರು. ಇನ್ನೂ ರೈತರಿಗೆ ಒಂದು ಆಸೆ ಇದೆ, ಮೇಲೆ ಮೇಲೆ ಬರಗಾಲ ಬರಲಿ ಎಂಬುದು. ಕಾರಣ ಸಾಲ ಮನ್ನಾ ಆಗುತ್ತೆ ಎಂದು. ಈ ರೀತಿಯಾಗಿ ಬಯಸಬಾರದು ಎಂದು ಹೇಳಿದ್ದರು. ಈ ಕುರಿತ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದ್ದು, ಬಿಜೆಪಿ ನಾಯಕರು ಸಚಿವರ ವಿರುದ್ಧ ತೀವ್ರವಾಗಿ ಕಿಡಿಕಾರುತ್ತಿದ್ದಾರೆ.

## ವಿವಾಹಕ್ಕೆ ಒಪ್ಪದ ಬಾಲ್ಯದ ಗೆಳತಿಯನ್ನು ಬರ್ಬರವಾಗಿ ಹತ್ಯೆ ಮಾಡಿದ ಟ್ರಾನ್ಸ್‌ಜೆಂಡರ್

ಚೆನ್ನೈ: ಸ್ನೇಹಿತೆಗಾಗಿ ಗಂಡಾಗಿ ಬದಲಾಗಿದ್ದ ವ್ಯಕ್ತಿಯೊಬ್ಬ ತನ್ನ 25 ವರ್ಷದ ಬಾಲ್ಯದ ಗೆಳತಿಯನ್ನ ಬರ್ಬರವಾಗಿ ಹತ್ಯೆ ಮಾಡಿರುವ ಘಟನೆ ತಮಿಳುನಾಡಿನಲ್ಲಿ ನಡೆದಿದೆ.

ಸಾಫ್ಟ್ ವೇರ್ ಉದ್ಯೋಗಿ ನಂದಿನಿಯನ್ನ (25) ವೆಟ್ರಿಮಾರನ್ (26) ಪ್ರೀತಿಸುತ್ತಿದ್ದ. ಇಬ್ಬರೂ ಮಧುರೈನಲ್ಲಿ ಒಂದೇ ಪ್ರೌಢಶಾಲೆಯಲ್ಲಿ ತಮ್ಮ ಶಾಲಾ ಶಿಕ್ಷಣವನ್ನು ಪೂರ್ಣಗೊಳಿಸಿದ್ದರು. ಎಂಟು ತಿಂಗಳ ಹಿಂದೆಯಷ್ಟೇ ಇಬ್ಬರೂ ಒಂದೇ ಸಾಫ್ಟ್ವೇರ್ ಕಂಪನಿಗೆ ಸೇರಿದ್ದರು. ಇಬ್ಬರು ಒಟ್ಟಿಗೆ ವಾಸಿಸುತ್ತಿದ್ದರಿಂದ ನಂದಿನಿಯನ್ನ ಮದುವೆಯಾಗುವುದಾಗಿ ವೆಟ್ರಿ ಮಾರನ್ ಕೇಳಿಕೊಂಡಿದ್ದಾನೆ, ಆದರೆ ನಂದಿನಿ ಒಪ್ಪಿರಲಿಲ್ಲ. ಹಾಗಾಗಿ ಆಕೆಯನ್ನ ಕೊಲೆ ಮಾಡುವ ನಿರ್ಧಾರ ಕೈಗೊಂಡಿದ್ದಾನೆ. ನಂದಿನಿ ಮದುವೆಗೆ ಒಪ್ಪದಿರಲು ಪ್ರಮುಖ ಕಾರಣ ವೇಟ್ರಿಮಾರನ್ ಒಬ್ಬ ಟ್ರಾನ್ಸ್ಜೆಂಡರ್. ಆತನ ಮೊದಲ ಹೆಸರು ಪಾಂಡಿ ಮಹೇಶ್ವರಿ. ಈ ಇಬ್ಬರು ಚಿಕ್ಕಂದಿನಿಂದಲೂ ಒಟ್ಟಿಗೆ ಓದಿದ್ದರು. ಮಹೇಶ್ವರಿ ವೇಟ್ರಿ ಮಾರನ್ ಅಗಿ ಬದಲಾದ ನಂತರ ನಂದಿನಿಯನ್ನು ವಿವಾಹವಾಗಲು ಬಯಸಿದ್ದಾನೆ. ಆದರೆ ನಂದಿನಿ ಅದಕ್ಕೆ ಒಪ್ಪಿಗೆ ಸೂಚಿಸಿರಲಿಲ್ಲ. ಕಳೆದ 6 ತಿಂಗಳಿನಿಂದ ಬೇರೆ ಯುವಕನ ಜೊತೆಗೆ ಸಲುಗೆಯಿಂದ ವರ್ತಿಸಲು ಶುರು ಮಾಡಿದ್ದಳು. ಹಾಗಾಗಿ ಆಕೆಯನ್ನು ಕೊಲೆ ಮಾಡಿದ್ದಾನೆಂದು ಪೊಲೀಸರು ತಿಳಿಸಿದ್ದಾರೆ.

## ಹೊಸಕೋಟೆ: ದೇವಸ್ಥಾನದ ಪ್ರಸಾದ ಸೇವಿಸಿ 70 ಮಂದಿ ಅಸ್ವಸ್ಥ; ಓರ್ವ ಮಹಿಳೆ ಸಾವು

ಬೆಂಗಳೂರು: ಬೆಂಗಳೂರು ಗ್ರಾಮಾಂತರ ವ್ಯಾಪ್ತಿಯ ಹೊಸಕೋಟೆಯಲ್ಲಿ ಆಹಾರ ವಿಷ ಸೇವಿಸಿದ ಪ್ರಕರಣದಲ್ಲಿ ಮಹಿಳೆಯೊಬ್ಬರು ಸಾವನ್ನಪ್ಪಿದ್ದು, 70 ಮಂದಿ ಆಸ್ಪತ್ರೆಗೆ ದಾಖಲಾಗಿದ್ದಾರೆ ಎಂದು ಪೊಲೀಸರು ಸೋಮವಾರ ತಿಳಿಸಿದ್ದಾರೆ.

ದೇವಸ್ಥಾನದ ಪ್ರಸಾದ ಸೇವಿಸಿ ಅಸ್ವಸ್ಥರಾಗಿ ಹೊಸಕೋಟೆಯ ಸಿಲಿಕಾನ್ ಸಿಟಿ ಆಸ್ಪತ್ರೆಗೆ ದಾಖಲಾಗಿದ್ದ ಮಹಿಳೆಯೊಬ್ಬರು ಮೃತಪಟ್ಟಿರುವ ದಾರುಣ ಘಟನೆ ನಡೆದಿದೆ.

ವಿವಿಧ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆಯುತ್ತಿರುವ ಇನ್ನೂ 15 ಮಂದಿ ಆರೋಗ್ಯ ಗಂಭೀರವಾಗಿದೆ ಎಂದು ಹೇಳಲಾಗಿದೆ. ಹೊಸಕೋಟೆಯ ಕಾವೇರಿನಗರದ ನಿವಾಸಿ 60 ವರ್ಷದ ಸಿದ್ದಗಂಗಮ್ಮ ಮೃತದುರ್ದೈವಿ.

ಆಸ್ಪತ್ರೆಗೆ ದಾಖಲಾದವರಲ್ಲಿ ಕೆಲವರು ಡಿಸ್ಚಾರ್ಜ್ ಆಗಿದ್ದು, ಇನ್ನು ಕೆಲವರು ಚಿಕಿತ್ಸೆ ಪಡೆಯುತ್ತಿದ್ದಾರೆ. ಆರೋಗ್ಯ ಇಲಾಖೆ ಪರಿಸ್ಥಿತಿಯನ್ನು ಸೂಕ್ಷ್ಮವಾಗಿ ಗಮನಿಸುತ್ತಿದೆ.

ಪ್ರಕರಣದ ತನಿಖೆ ಆರಂಭಿಕ ಹಂತದಲ್ಲಿರುವುದರಿಂದ, ಸದ್ಯಕ್ಕೆ ನಿಖರವಾದ ಕಾರಣವನ್ನು ಕಂಡುಹಿಡಿಯಲಾಗುವುದಿಲ್ಲ, ಶನಿವಾರ ಬಹುತೇಕರು ಹೊಸಕೋಟೆ ಪಟ್ಟಣದ ದೇವಸ್ಥಾನಕ್ಕೆ ತೆರಳಿ ಪ್ರಸಾದ ಸೇವಿಸಿದ್ದರು ಎಂದು ಪ್ರಾಥಮಿಕ ತನಿಖೆಯಿಂದ ತಿಳಿದುಬಂದಿದೆ.

ಒಂದು ದಿನದ ನಂತರ, ಕೆಲವರು ಭೇದಿ ಮತ್ತು ವಾಂತಿ ಎಂದು ದೂರಿದರು ಮತ್ತು ನಂತರ ಅವರು ಚಿಕಿತ್ಸೆಗಾಗಿ ಆಸ್ಪತ್ರೆಗಳಿಗೆ ಧಾವಿಸಿದರು. ಅದೇ ರೋಗಲಕ್ಷಣಗಳಿದ್ದ ಮಹಿಳೆಯನ್ನು ಭಾನುವಾರ ಮಧ್ಯಾಹ್ನ ಆಸ್ಪತ್ರೆಗೆ ದಾಖಲಿಸಲಾಗಿದ್ದು, ಇಂದು ಬೆಳಿಗ್ಗೆ ಸಾವನ್ನಪ್ಪಿದ್ದಾರೆ ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಸುಮಾರು 70 ಮಂದಿಯನ್ನು ವಿವಿಧ ಆಸ್ಪತ್ರೆಗಳಿಗೆ ದಾಖಲಿಸಲಾಗಿದೆ ಎಂಬ ಮಾಹಿತಿ ನಮಗಿದೆ. ಗರಿಷ್ಠ ರೋಗಿಗಳು ದಾಖಲಾಗಿರುವ ಐದು ಆಸ್ಪತ್ರೆಗಳನ್ನು ಆರೋಗ್ಯ ಇಲಾಖೆ ಗುರುತಿಸಿದೆ. ಪರಿಸ್ಥಿತಿ ನೋಡಿದರೆ ಆಸ್ಪತ್ರೆಯೊಂದರಲ್ಲಿ ಐಸಿಯು ಚಿಕಿತ್ಸೆಗೆ ಸಂಪೂರ್ಣ ಮಹಡಿಯನ್ನು ಮೀಸಲಿಟ್ಟಿದ್ದಾರೆ.

# ಮೋದಿಯಿಂದಾಗಿ ಮುಸ್ಲಿಂ ಹೆಣ್ಣು ಮಕ್ಕಳಿಗೆ ಪರ್ಮನೆಂಟ್ ಗಂಡ ಸಿಕ್ಕಿದ್ದು: ಪ್ರಭಾಕರ್ ಭಟ್

ಮಂಡ್ಯ: ಮುಸ್ಲಿಂ ಮಹಿಳೆಯರಿಗೆ ಪರ್ಮನೆಂಟ್ ಗಂಡನನ್ನು ಕೊಟ್ಟಿದ್ದು ಪ್ರಧಾನಿ ನರೇಂದ್ರ ಮೋದಿ ಸರ್ಕಾರ ಎಂದು ಹಿಂದೂ ಮುಖಂಡ ಕಲ್ಲಡ್ಕ ಪ್ರಭಾಕರ್ ಭಟ್ ಹೇಳಿದ್ದಾರೆ.

ಮಂಡ್ಯ ಜಿಲ್ಲೆಯ ಶ್ರೀರಂಗಪಟ್ಟಣದಲ್ಲಿ ಮಾತನಾಡಿರುವ ಅವರು, ನಿಮಗೆ ತಲಾಕ್ ಹೇಳುವ ಅವಕಾಶ ಇತ್ತು. ಪ್ರಧಾನಿ ಮೋದಿಯವರ ಸರ್ಕಾರದಿಂದ ತ್ರಿವಳಿ ತಲಾಕ್ ರದ್ದಾಗಿದೆ ಎಂದು ತಿಳಿಸಿದರು. ತ್ರಿವಳಿ ತಲಾಕ್ ರದ್ದುಪಡಿಸುವ ಮೂಲಕ ಅವರಿಗೆ ಪರ್ಮನೆಂಟ್ ಗಂಡ ಕೊಟ್ಟಿದ್ದು ಪ್ರಧಾನಿ ನರೇಂದ್ರ ಮೋದಿ ಸರ್ಕಾರವ ಎಂದು ಆರ್‌ಎಸ್‌ಎಸ್ ಮುಖಂಡ ಕಲ್ಲಡ್ಕ ಪ್ರಭಾಕರ್ ಭಟ್ ಹೇಳಿದ್ದಾರೆ.

ನಿಮ್ಮಲ್ಲಿ ಯುವತಿ ಯುವಕರು ಇಲ್ಲವೇ. ನಮ್ಮನ್ನ ಯಾಕೆ ಟಾರ್ಗೆಟ್ ಮಾಡುತ್ತಿರಾ? ಮೋದಿ ಸರ್ಕಾರ ಬಂದ ಮೇಲೆ ತಲಾಖ್ ಬಂತು. ಅವರಿಗೆ ದಿನಕ್ಕೆ ಒಬ್ಬ ಗಂಡ. ಅವರಿಗೆ ಪರ್ಮನೆಂಟ್ ಗಂಡ ಇರಲಿಲ್ಲ. ಪರ್ಮನೆಂಟ್ ಗಂಡನನ್ನ ಕೊಟ್ಟಿದ್ದು ಮೋದಿ ಸರ್ಕಾರ ಎಂದರು.



ದೇಶದಲ್ಲಿ ನಾವು ಹಿಂದೂಗಳು ಉಳಿಯುವುದು ಹೇಗೆ? ಹಿಂದೂಗಳು ಕಡಿಮೆ ಆದರೇ ಪಾಕಿಸ್ತಾನ ಜಿಂದಾಬಾದ್ ಅನ್ನುತ್ತಾರೆ. ನಮ್ಮ ಕೋರ್ಟ್ ವ್ಯವಸ್ಥೆ ಹೇಗಿದೆ? ಕಸಾಬ್ ಗಾಗಿ ರಾತ್ರಿ ಕೋರ್ಟ್ ತೆರೆಯಿತು. ದೇವರ ಧಯೆ ಅವನಿಗೆ ಶಿಕ್ಷೆ ಆಯಿತು. ಅವನಿಗೂ ಬೆಂಬಲ ವ್ಯಕ್ತಪಡಿಸಿದ್ರು. ಆದರೂ ನಾವು ಸುಮ್ಮನೇ ಇರಬೇಕಾ ಎಂದು ಪ್ರಶ್ನಿಸಿದರು.

ಬಹು ಪತ್ನಿತ್ವ ಪಿಡುಗು ಹಾಗೂ ತಲಾಕ್ ಕಾಟದಿಂದಾಗಿ ಈ ಹಿಂದೆ ಮುಸಲ್ಮಾನ ಹೆಣ್ಣು ಮಕ್ಕಳಿಗೆ ಶಾಶ್ವತ ಪತಿ ಇರಲಿಲ್ಲ. ದಿ ಕೇಳರ ಸ್ಟೋರಿ, ಕಾಶ್ಮೀರ ಫೈಲ್ಸ್ ಸಿನೆಮಾ ನೋಡಿ. ಮತಾಂತರ, ಹಿಂದೂಗಳ ಮೇಲಿನ ದೌರ್ಜನ್ಯ ತೋರಿಸಿದ್ದಾರೆ. ಮುಸ್ಲಿಂ ಹುಡುಗರಲ್ಲ, ಯುವತಿಯರು ಮೋಸ ಮಾಡುತ್ತಿದ್ದಾರೆ. ದಿ ಕೇರಳ ಸ್ಟೋರಿ ಮೂವಿಯಲ್ಲಿ ಈ ಬಗ್ಗೆ ತೋರಿಸಿದ್ದಾರೆ. ಮತಾಂತರ ಮಾಡಲು ಲವ್ ಜಿಹಾದ್ ಪ್ರಯತ್ನಗಳಾಗುತ್ತಿವೆ ಎಂದು ಗುಡುಗಿದರು.

ಅಂಬೇಡ್ಕರ್ ದೇಶ ವಿಭಜನೆ ಮಾಡಬೇಡಿ ಅಂದಿದ್ದರು. ದೇಶವನ್ನ ಉಳಿಸಿಕೊಳ್ಳುವ ಮಹತ್ ಕಾರ್ಯ ಹಿಂದೂಗಳಿಂದ ಮಾತ್ರ ಸಾಧ್ಯ. ಮುಸ್ಲಿಂಮರಿಗೆ ಹಲವು ದೇಶಗಳು ಇವೆ. ಆದರೆ, ಹಿಂದೂಗಳಿಗೆ ಭಾರತ ಮಾತ್ರ ಇರೋದು. ಹಿಂದೂಗಳಿಗೆ ಬೇರೆ ಕಡೆ ಜಾಗ ಇಲ್ಲ. ಅದಕ್ಕಾಗಿ ನಾವು ಹೋರಾಟ ಮಾಡಬೇಕು ಎಂದು ಕಿಡಿ ಕಾರಿದ್ದಾರೆ.

# 5 ಲಕ್ಷ ರೂ. ವಂಚಿಸಿದ್ದ ಅಂಚೆ ಪಾಲಕ ಬಂಧನ

ತುಮಕೂರು: ಅಂಚೆ ಕಚೇರಿಯಲ್ಲಿ 5.28 ಲಕ್ಷ ರೂ. ವಂಚಿಸಿದ್ದ ಅಂಚೆ ಪಾಲಕನನ್ನು ಪೊಲೀಸರು ಈಚೆಗೆ ಬಂಧಿಸಿದ್ದಾರೆ. ಪಾವಗಡ ತಾಲ್ಲೂಕಿನ ನ್ಯಾಯದ ಗುಂಟೆ ಉಪ ಅಂಚೆ ಕಚೇರಿಯಲ್ಲಿ ಅಂಚೆ ಪಾಲಕರಾಗಿ ಕೆಲಸ ನಿರ್ವಹಿಸುತ್ತಿದ್ದ ಆಂಧ್ರಪ್ರದೇಶ ಕಡಪ ಜಿಲ್ಲೆಯ ಮುಂಗಾರ ವಂಸಿ ಕೃಷ್ಣ (28) 2019ರ ಜುಲೈ 11ರಿಂದ ಆಗಸ್ಟ್ 26ರ ವರೆಗೆ ರೂ 5.28 ಲಕ್ಷ ವಂಚಿಸಿದ್ದರು.



ಅಂಚೆ ಕಚೇರಿಯಲ್ಲಿ ತಮಗೆ ನೀಡಿದ್ದ ಅಧಿಕಾರ ಮತ್ತು ಒಟಿಪಿ ದುರ್ಬಳಕೆ ಮಾಡಿಕೊಂಡು ಇಂಡಿಯಾ ಪೋಸ್ಟ್ ಪೇಮೆಂಟ್ಸ್ ಬ್ಯಾಂಕ್‌ನಿಂದ (ಐಪಿಪಿಬಿ) ರೂ 5.28 ಲಕ್ಷ ಹಣವನ್ನು ಕಾಲ್ಪನಿಕ ರೀತಿಯಲ್ಲಿ ಗ್ರಾಹಕರ ಖಾತೆಗಳಿಗೆ ಹಾಕಿ ಮತ್ತೆ ತಮ್ಮ ಖಾತೆಗೆ ವರ್ಗಾವಣೆ ಮಾಡಿಕೊಂಡಿದ್ದರು. 2019ರ ಆ.27ರಿಂದ ಅನಧಿಕೃತವಾಗಿ ಕಚೇರಿಗೆ ಗೈರಾಗಿದ್ದರು. ಈ ಕುರಿತು ಶಿರಾ ಅಂಚೆ ಉಪ ವಿಭಾಗದ ಅಧೀಕ್ಷಕರು 2021ರ ಜುಲೈ 27ರಂದು ಅರಸೀಕೆರೆ ಠಾಣೆಗೆ ದೂರು ನೀಡಿದ್ದರು. ಸೈಬರ್ ಪೊಲೀಸರು ತನಿಖೆ ಕೈಗೊಂಡಿದ್ದರು. ಪ್ರಕರಣ ದಾಖಲಾದ ನಂತರ ಆರೋಪಿ ದುಬೈಗೆ ಹೋಗಿ ನೆಲೆಸಿದ್ದರು. ಈಚೆಗೆ ಪಾವಗಡಕ್ಕೆ ಭೇಟಿ ನೀಡಿದ್ದರು. ಖಚಿತ ಮಾಹಿತಿ ಮೇರೆಗೆ ದಾಳಿ ನಡೆಸಿದ ಪೊಲೀಸರು ಡಿ.22 ರಂದು ಆರೋಪಿ ವಂಸಿಕೃಷ್ಣರನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ. ಈ ಕಾರ್ಯಾಚರಣೆಯಲ್ಲಿ ಸೈಬರ್ ಠಾಣೆಯ ಇನ್‌ಸ್ಪೆಕ್ಟರ್ ಸಿ.ಎಚ್.ರಾಮಕೃಷ್ಣ, ಸಿಬ್ಬಂದಿಯಾದ ಶಾಂತಕುಮಾರ್, ಮಾರುತೀಶ್, ಹರೀಶ್, ಚಾಲಕ ಚಿಕ್ಕಣ್ಣ ಅವರ ತಂಡ ಭಾಗವಹಿಸಿತ್ತು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ವಿ.ಅಶೋಕ್ ತಿಳಿಸಿದ್ದಾರೆ.

## ಕಲ್ಪತರು ನಾಡಿನಲ್ಲಿ ಸಂಭ್ರಮದ ಕ್ರಿಸ್ಮಸ್: ಚರ್ಚಗಳಲ್ಲಿ ಸಾಮೂಹಿಕ ಪ್ರಾರ್ಥನೆ

ತುಮಕೂರು: ಕ್ರೈಸ್ತರ ಪ್ರಮುಖ ಹಬ್ಬವಾದ ಕ್ರಿಸ್ಮಸ್ ಹಬ್ಬವನ್ನು ನಗರ ಸೇರಿದತೆ ಜಿಲ್ಲೆಯಾದ್ಯಂತ ಸಡಗರ ಸಂಭ್ರಮದಿಂದ ಆಚರಿಸಲಾಯಿತು.

ನಗರದ ಚರ್ಚ್ ಸರ್ಕಲ್ನಲ್ಲಿರುವ ಸಿಎಸ್‌ಐ ವೆಸ್ಲಿ ದೇವಾಲಯ, ಹೊರಪೇಟೆಯ ಸಂತ ಲೂರ್ದು ಮಾತೆ ದೇವಾಲಯ, ಸಿಎಸ್‌ಐ ಲೇಔಟ್ನ ಚರ್ಚ, ರೈಲ್ವೆ ನಿಲ್ದಾಣ ರಸ್ತೆಯಲ್ಲಿರುವ ಚರ್ಚ, ದೇವನೂರು ಚರ್ಚ, ಸಿರಾಗೇಟ್ನಲ್ಲಿರುವ ಚರ್ಚ್ ಸೇರಿದಂತೆ ನಗರದ ವಿವಿಧ ಬಡಾವಣೆಗಳಲ್ಲಿರುವ ಚರ್ಚ್ ಗಳಲ್ಲಿ ಕ್ರೈಸ್ತರು ಬೆಳಿಗ್ಗೆ 8 ಗಂಟೆಯಿಂದ 11



ಗಂಟೆಯವರೆಗೆ ಸಾಮೂಹಿಕ ಪ್ರಾರ್ಥನೆ ಸಲ್ಲಿಸಿದರು.

ಹಬ್ಬದ ಪ್ರಯುಕ್ತ ನಗರದಲ್ಲಿರುವ 7 ಸಿಎಸ್‌ಐ ಚರ್ಚ, ಎರಡು ರೋಮನ್ ಕ್ಯಾಥೋಲಿಕ್ ಚರ್ಚ, ಒಂದು ಮಾರ್ಥಾಂಬ ಚರ್ಚ್ ಒಂದು ಫೆದರಲ್ ಚರ್ಚ, 15 ಇಂಡಿಪೆಂಡೆಂಟ್ ಚರ್ಚ್‌ಗಳು ಸೇರಿದಂತೆ ಎಲ್ಲ ಚರ್ಚ್‌ಗಳಲ್ಲಿ ವಿಶೇಷವಾಗಿ ವಿದ್ಯುದ್ದೀಪಾಲಂಕಾರ ಮಾಡಲಾಗಿದ್ದು, ಬಣ್ಣ ಬಣ್ಣದ ಚಿತ್ತಾರಗಳಿಂದ ಕಂಗೊಳಿಸುತ್ತಿದ್ದವು.

ಜನರು ಚರ್ಚ್‌ಗಳಲ್ಲಿ ಸಾಮೂಹಿಕ ಪ್ರಾರ್ಥನೆಯಲ್ಲಿ ಪಾಲ್ಗೊಂಡ ನಂತರ ಒಬ್ಬರಿಗೊಬ್ಬರ ಪರಸ್ಪರ ಹಬ್ಬದ ಶುಭಾಶಯ ವಿನಿಮಯ ಮಾಡಿಕೊಂಡರು.

ಹಬ್ಬದ ವಿಶೇಷವಾಗಿ ತಯಾರಿಸಿದ್ದ ಸಿಹಿ ತಿಂಡಿಗಳನ್ನು ಸಹ ಪರಸ್ಪರ ಹಂಚಿ ತಿನ್ನುವ ಮೂಲಕ ಈ ಹಬ್ಬ ಶಾಂತಿ ಸೌಹಾರ್ದತೆ ಸಂಕೇತ ಎಂಬ ಸಂದೇಶವನ್ನು ಸಾರಿದರು.

# ಕರ್ನಾಟಕ ಹೆಸರಿನ ಕಲ್ಪನೆ ಧಾರವಾಡದಿಂದ: ಲಿಂಗನಗೌಡ

ಕೆಂಭಾವಿ: ಮೈಸೂರು ರಾಜ್ಯವೆಂದು ಕರೆಸಿಕೊಳ್ಳುವ ನಮ್ಮ ನಾಡಿಗೆ ಕರ್ನಾಟಕ ಎಂಬ ಹೆಸರಿನ ಕಲ್ಪನೆ ಮೂಡಿದ್ದೇ ಧಾರವಾಡದಿಂದ ಎಂದು ಹಿರಿಯ ಸಾಹಿತಿ ಲಿಂಗನಗೌಡ ಮಾಲಿ ಪಾಟೀಲ್ ಹೇಳಿದರು.

ಹೆಸರಾಯಿತು ಕರ್ನಾಟಕ ಉಸಿರಾಗಲಿ ಕನ್ನಡ ಎಂಬ ಧ್ಯೇಯ ವಾಕ್ಯದೊಂದಿಗೆ ಕರ್ನಾಟಕ ಸಂಭ್ರಮ 50 ರಥಯಾತ್ರೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು

1973 ನವೆಂಬರ 1 ರಂದು ದೇವರಾಜ್ ಅರಸರು ಕರುನಾಡಿಗೆ ಕರ್ನಾಟಕ ರಾಜ್ಯ ಎಂದು ಘೋಷಣೆ ಮಾಡಿದರು. ಈ ಕಾರ್ಯಕ್ಕೆ ಕಲ್ಯಾಣ ಕರ್ನಾಟಕ ಭಾಗದ ವೀರೇಂದ್ರ ಪಾಟೀಲರ ಪರಿಶ್ರಮ ಹಾಗೂ ನಿಜಲಿಂಗಪ್ಪನವರ ಪ್ರಯತ್ನವು ಕೂಡ ಇಲ್ಲಿ ಸ್ಮರಣೀಯ ಎಂದ ಅವರು ಈ ಐತಿಹಾಸಿಕ ದಿನವನ್ನು ವರ್ಷವಿಡಿ ಕನ್ನಡ ನಾಡಿನ ಮೂಲೆ ಮೂಲೆಗು ಕನ್ನಡ ರಥಯಾತ್ರೆಯನ್ನು ಕೊಂಡೊಯ್ಯುವ ಮೂಲಕ 50 ರ ಸಂಭ್ರವನ್ನು ಎಲ್ಲಾ ಕನ್ನಡದ ಮನಸುಗಳು ಸೇರಿ ಆಚರಿಸುತ್ತಿರವುದು ನಾಡು ನುಡಿಗೆ ಕಳಸ ಪ್ರಾಯವಾದಂತಾಗಿದೆ ಎಂದರು.

ಕರ್ನಾಟಕ ಸಂಭ್ರಮ 50 ರ ರಥ ಯಾತ್ರೆ ಪಟ್ಟಣ ಪ್ರವೇಶ ಮಾಡುತ್ತಿದ್ದಂತೆ ತಾಲೂಕು ಆಡಳಿತ, ಸ್ಥಳಿಯ ಆಡಳಿತ, ಕೆಂಭಾವಿ ವಲಯದ ಸಾಹಿತಿಗಳು, ಕನ್ನಡಪರ ಸಂಘಟನೆಗಳ ಪದಾಧಿಕಾರಿಗಳು, ಶಿಕ್ಷಕರ ಸಿಬ್ಬಂದಿ ವಿವಿಧ ಶಾಲಾ ಮಕ್ಕಳು ಸೇರಿದಂತೆ ಎಲ್ಲಾ ಕನ್ನಡಾಭಿಮಾನಿಗಳಿಂದ ಅದ್ದೂರಿಯಾಗಿ ಸ್ವಾಗತಿಸಲಾಯಿತು.

ಇದೇ ಸಂದರ್ಭದಲ್ಲಿ ಭುವನೇಶ್ವರಿ ಭಾವ ಚಿತ್ರ ಹೊತ್ತು ತಂದ ರಥ ಯಾತ್ರೆಗೆ ಹೀರೇಮಠದ ಪೀಠಾಧಿಪತಿ ಚನ್ನಬಸವ ಶಿವಾಚಾರ್ಯರು ಪೂಜೆ



ಸಲ್ಲಿಸಿದರು, ತಹಸೀಲ್ದಾರ ಕೆ. ವಿಜಯ ಕುಮಾರ ಮೆರವಣಿಗೆಗೆ ಚಾಲನೆ ನೀಡಿದರು. ಪಟ್ಟಣದ ನಾಡ ಕಛೇರಿಯಿಂದ ಆರಂಭವಾದ ಮೆರವಣಿಗೆ ನಿಜ ಶರಣ ಅಂಬಿಗೇರ ಚೌಡಯ್ಯ ವೃತ್ತ, ಕಿತ್ತೂರು ರಾಣಿ ಚನ್ನಮ್ಮ ವೃತ್ತದ ಮೂಲಕ ಹಾದು ಸುರಪುರ ಹುನಗುಂದ ರಾಜ್ಯ ಹೆದ್ದಾರಿ ಮುಖೇನ ಜರುಗಿದ ಅದ್ದೂರಿ ಮೆರವಣಿಗೆಗೆ ಬಸವೇಶ್ವರ ವೃತ್ತದಿಂದ ರಥಯಾತ್ರೆಗೆ ಬಿಳ್ಕೊಡಲಾಯಿತು.

ಸಂಭ್ರಮದಲ್ಲಿ ತಾಲೂಕು ಪಂಚಾಯತ್ ಇ.ಓ ಬಸವರಾಜ್ ಸಜ್ಜನ, ಪುರಸಭೆ ಮುಖ್ಯಾಧಿಕಾರಿ ಮಹ್ಮದ್ ಯೂಸೂಪ್, ಬಿ.ಇ.ಓ ಯಲ್ಲಪ್ಪ ಕಾಡ್ಲೂರ್, ಸಂಜೀವರಾವ್ ಕುಲ್ಕರ್ಣಿ, ರವಿ ಸೊನ್ನದ, ಉಪ ತಹಸೀಲ್ದಾರ್ ಮಲ್ಲಿಕಾರ್ಜುನ ಪಾಟೀಲ್, ಕಂದಾಯ ನಿರೀಕ್ಷಕ ರಾಜೆಸಾಬ್, ಕಸಾಪ ತಾಲೂಕು ಅಧ್ಯಕ್ಷ ಶರಣಬಸಪ್ಪ ಯಾಳವಾರ್, ಕನ್ನಡ ಸಾಹಿತ್ಯ ಸಂಘದ ಅಧ್ಯಕ್ಷ ಮಡಿವಾಳಪ್ಪ ಹೆಗ್ಗಣದೊಡ್ಡಿ, ವಲಯ ಸಾಹಿತಿ ಬಳಗ, ಪುರಸಭೆ ಸದಸ್ಯರು, ಹಾಗೂ ಸಿಬ್ಬಂದಿ, ವಿವಿಧ ಶಾಲಾ ಶಿಕ್ಷಕರು, ಗ್ರಾಮ ಆಡಳಿತಾಧಿಕಾರಿಗಳು, ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು, ಅಂಗನವಾಡಿ, ಆಶಾ ಕಾರ್ಯ ಕರ್ತೆಯರು, ಕನ್ನಡಪರ ಹಾಗೂ ವಿವಿಧ ಸಂಘಟನೆಯ ಪದಾಧಿಕಾರಿಗಳು, ಸೇರಿದಂತೆ ಅನೇಕ ವಲಯದ ಕನ್ನಡದ ಮನಸುಗಳು ರಥಯಾತ್ರೆ ಸಂಭ್ರಮದಲ್ಲಿ ಭಾಗವಹಿಸಿದ್ದರು. ಪೊಲೀಸ್ ಇಲಾಖೆ ಸೂಕ್ತ ಬಂದೋಬಸ್ತ್ ಕೈಗೊಂಡಿತ್ತು.

### ರಥಯಾತ್ರೆಗೆ ಮೆರಗು ತಂದ ಸರಕಾರಿ ಶಾಲೆ ಮಕ್ಕಳು

ಮೆರವಣಿಗೆಯುದ್ದಕ್ಕೂ ಉತ್ತರ ಕರ್ನಾಟಕ ಗಂಡು ಕಲೆ ಡೊಳ್ಳು ಕುಣಿತ, ಕರಡಿ ಮಜಲು ಕಲಾ ಪ್ರದರ್ಶನದಲ್ಲಿ ಕನ್ನಡದ ಮನಸುಗಳು ಹೆಜ್ಜೆಹಾಕಿ ಸಂಭ್ರಮಿಸದರು, ಪಟ್ಟಣದ ವಿವಿಧ ಸರಕಾರಿ ಶಾಲಾ ಮಕ್ಕಳು ಕುಂಬ ಕಳಸದೊಂದಿಗೆ ಮೆರವಣಿಗೆಯುದ್ದಕ್ಕೂ ಲೇಜಿಮ್, ಡಂಬಲ್ಸ ಜತೆ ನೃತ್ಯ ಮಾಡುವುದರ ಮೂಲಕ ಮೆರವಣಿಗೆಗೆ ಹೆಚ್ಚಿನ ಮೆರಗು ತಂದಂದ್ದು ವಿಶೇಷವಾಗಿತ್ತು.

# ಮೂರು ತಿಂಗಳಲ್ಲೇ ಸಮಸ್ಯೆಗೆ ಸ್ಪಂದಿಸಿ ರಾಷ್ಟ್ರೀಯ ಹೆದ್ದಾರಿಗಳ ನಿರ್ಮಾಣಕ್ಕೆ ಅನುವು: ಸಚಿವ ಸತೀಶ್ ಜಾರಕಿಹೊಳಿ

ಬೆಳಗಾವಿ: ಕೇಂದ್ರ ಸಾರಿಗೆ ಸಚಿವ ನಿತೀನ್ ಗಟ್ಕರಿ ನೇತೃತ್ವದಲ್ಲಿ ಡಿ. 24 ರಂದು ಪಣಜಿಯಲ್ಲಿ ಸಭೆ ನಡೆಸಿ ರಾಜ್ಯಕ್ಕೆ ಸಂಬಂಧಿಸಿದ ರಾಷ್ಟ್ರೀಯ ಹೆದ್ದಾರಿ ಕಾಮಗಾರಿಗಳ ಕುರಿತು ಚರ್ಚೆ ನಡೆಸಲಾಯಿತು ಎಂದು ಲೋಕೋಪಯೋಗಿ ಇಲಾಖೆ ಸಚಿವ ಸತೀಶ್ ಜಾರಕಿಹೊಳಿ ಅವರು ತಿಳಿಸಿದರು.

ನಗರದ ಕಾಂಗ್ರೆಸ್ ಭವನದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿ ಸುಮಾರು 10 ಸಾವಿರ ಕೋಟಿ ವೆಚ್ಚದ 15 ರಾಷ್ಟ್ರೀಯ ಹೆದ್ದಾರಿ ಕಾಮಗಾರಿಗಳು ವಿವಿಧ ಕಾರಣದಿಂದ ವಿಳಂಬವಾಗಿವೆ.

ಇದುವರೆಗೆ ಎರಡು ಸಾವಿರ ಕೋಟಿ ವೆಚ್ಚಮಾಡಲಾಗಿದೆ. ಅರಣ್ಯ ಇಲಾಖೆ ಒಪ್ಪಿಗೆ ಸೇರಿದಂತೆ ಅನೇಕ ಕಾರಣಗಳಿಂದ ಅನೇಕ ರಾಷ್ಟ್ರೀಯ ಹೆದ್ದಾರಿಗಳ ನಿರ್ಮಾಣ ಕಾಮಗಾರಿಗೆ ತೊಡಕಾಗಿದ್ದು, ಕಳೆದ 12 ವರ್ಷಗಳಿಂದ ಸಣ್ಣ ಪುಟ್ಟ ತೊಂದರೆಯಿಂದ ಕೆಲವು ಹೆದ್ದಾರಿಗಳ ನಿರ್ಮಾಣ ಸ್ಥಗಿತವಾಗಿವೆ.

ಕೇಂದ್ರ ಸಚಿವರು ಈ ಬಗ್ಗೆ ರಾಜ್ಯ ಸರ್ಕಾರ ಮುತುರ್ವಜಿ ವಹಿಸಬೇಕೆಂದು ತಿಳಿಸಿದ್ದು, ಮೂರು ತಿಂಗಳ ಕಾಲಾವಕಾಶ ತೆಗೆದುಕೊಂಡಿದ್ದು, ಈ ಕುರಿತು ಸಿಎಂ ಸಿದ್ದರಾಮಯ್ಯ ಅವರೊಂದಿಗೆ ಸಭೆ ನಡೆಸಿ ಶೀಘ್ರವೇ ರಾಷ್ಟ್ರೀಯ ಹೆದ್ದಾರಿಗಳ ನಿರ್ಮಾಣಕ್ಕೆ ಅನುವು ಮಾಡಿಕೊಡಲಾಗುವುದು ಎಂದು ತಿಳಿಸಿದರು.

ರಾಜ್ಯದಲ್ಲಿ ರಾಷ್ಟ್ರೀಯ ಹೆದ್ದಾರಿಗಳ ನಿರ್ಮಾಣಕ್ಕೆ ಅಡೆತಡೆಯಾದ ವಿಷಯಗಳ ಬಗ್ಗೆ ಚರ್ಚಿಸಲು ಸಂಬಂಧಿಸಿದ ಜಿಲ್ಲಾಧಿಕಾರಿಗಳು, ಅರಣ್ಯ ಇಲಾಖೆ ಸೇರಿದಂತೆ ಬೇರೆ ಬೇರೆ ಇಲಾಖೆ ಅಧಿಕಾರಗಳೊಂದಿಗೆ ನಾನು ಸಭೆ ನಡೆಸಿದ್ದು, ಅಧಿಕಾರಿಗಳು ಸಕಾರಾತ್ಮಕವಾಗಿ ಸ್ಪಂದನೆ ನೀಡಿದ್ದಾರೆ.

ಇನ್ನು ವಿಜಯಪುರ–ಹುಬ್ಬಳ್ಳಿ ಹೆದ್ದಾರಿ ನಿರ್ಮಾಣ ಶೇ.99% ರಷ್ಟು ಕಾಮಗಾರಿ ಪೂರ್ಣಗೊಂಡಿದ್ದು, ಶೇ. 1% ರಷ್ಟು ಕಾಮಗಾರಿ ಉಳಿದಿದ್ದು, ಇಂತಹ ಅನೇಕ ಹೆದ್ದಾರಿಗಳನ್ನು ಶೀಘ್ರವೇ ಪೂರ್ಣಗೊಳಿಸಲಾಗುವುದು ಎಂದು ಭರವಸೆ ನೀಡಿದರು.



ಚೋರ್ಲಾ ಘಾಟ್ ಮೂಲಕ ಬೆಳಗಾವಿ ಮತ್ತು ಗೋವಾಗೆ ಸಂಪರ್ಕಿಸುವ ರಸ್ತೆಯನ್ನು ಕರ್ನಾಟಕದ ಗಡಿವರೆಗೆ ಅಭಿವೃದ್ಧಿ ಪಡಿಸಲು ಸೂಮಾರು 58 ಕೋಟಿ ರೂ. ಮಂಜೂರಾಗಿದ್ದು, ಒಂದು ವಾರದೊಳಗೆ ಟೆಂಡರ್ ಕರೆದು 2024 ಎಪ್ರಿಲ್ ತಿಂಗಳೊಳಗೆ ಕಾಮಗಾರಿ ಪೂರ್ಣಗೊಳಿಸಲಾಗುವುದು ಎಂದು ತಿಳಿಸಿದರು.

ಸಚಿವ ಶಿವಾನಂದ್ ಪಾಟೀಲ್ ಹೇಳಿಕೆಗೆ ಪ್ರತಿಕ್ರಿಯೆ ನೀಡಿದ ಸಚಿವ ಸತೀಶ್ ಜಾರಕಿಹೊಳಿ, ರೈತರು ಯಾವುದೇ ಕಾರಣಕ್ಕೂ ಬರಗಾಲ ಬರಲಿ ಅಂತ ಅಪೇಕ್ಷಿಸಲ್ಲ. ಬರಗಾಲ ಬಂದರೆ ರೈತರಿಗೆ ಮಾತ್ರ ತೊಂದರೆ ಆಗಲ್ಲ. ಬರಗಾಲ ಬಂದರೆ ಎಲ್ಲರಿಗೂ ತೊಂದರೆ ಆಗುತ್ತದೆ. ಎಲ್ಲೋ ಏನೋ ಮಿಸ್ಟೇಕ್ ಆಗಿ ಶಿವಾನಂದ್ ಪಾಟೀಲ್ ಹೇಳಿರುತ್ತಾರೆ ಎಂದು ಪ್ರತಿಕ್ರಿಯಿಸಿದರು.

ಸಿಎಂ ಸಿದ್ದರಾಮಯ್ಯ ಹಿಜಾಬ್ ನಿಷೇಧ ಆದೇಶ ವಾಪಸ್ ಪಡೆಯುತ್ತೇವೆ ಎಂದು ಹೇಳಿಕೆಗೆ ಬಗ್ಗೆ ಮಾತನಾಡಿದ ಸಚಿವರು, ನಮ್ಮ ಸರಕಾರ ಬಂದ ಮೇಲೆ ಹಿಜಾಬ್ ನಿಷೇಧ ಆದೇಶ ವಾಪಸ್ ಪಡೆಯುತ್ತೇವೆ ಎಂದು ಹೇಳಿದ್ದೆವು. ಅದರಂತೆ ವಾಪಸ್ ಪಡೆಯುತ್ತೇವೆ.

ಇದನ್ನು ಚುನಾವಣಾ ಪ್ರಣಾಳಿಕೆಯಲ್ಲೇ ಹೇಳಿದ್ದೆವು. ಈ ವಿಷಯ ನ್ಯಾಯಾಲಯದಲ್ಲಿ ಇರುವುದರಿಂದ ನ್ಯಾಯಾಲಯಕ್ಕೆ ಸರ್ಕಾರದ ನಿಲುವು ತಿಳಿಸುತ್ತೇವೆ ಎಂದಿದ್ದಾರೆ. ವಿರೋಧ ಪಕ್ಷಗಳ ಮೈತ್ರಿಕೂಟ 'ಇಂಡಿಯಾ'ದ ಸದಸ್ಯರು ಖರ್ಗೆ ಅವರನ್ನು ಪ್ರಧಾನಿ ಅಭ್ಯರ್ಥಿಯನ್ನಾಗಿ ಘೋಷಿಸಿರುವ ಕುರಿತು ಮಾತನಾಡಿದ ಸಚಿವ ಸತೀಶ್, ಇಲ್ಲಿಯವರೆಗೆ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಪರ್ಯಾಯ ನಾಯಕ ಸಿಕ್ಕಿರಲಿಲ್ಲ.

ಮೈತ್ರಿಕೂಟ 'ಇಂಡಿಯಾ'ದ ಸದಸ್ಯರು ಖರ್ಗೆ ಅವರನ್ನು ಪ್ರಧಾನಿ ಅಭ್ಯರ್ಥಿ ಆಗಿ ಘೋಷಣೆ ಮಾಡಿರುವು ದರಿಂದ ಮುಂಬರುವ ಲೋಕಸಭೆ ಚುನಾವಣೆ ಯಲ್ಲಿ ಮಲ್ಲಿಕಾರ್ಜುನ ಖರ್ಗೆ ಸರಿಸಮ ನಾಯಕರಾಗಿ ಬಿಂಬಿತರಾಗಲಿದ್ದು, ಪ್ರಧಾನಿ ಮೋದಿ ವರ್ಸಸ್ ಖರ್ಗೆ ಎಂಬುದು ಖಂಡಿತ ಪರಿಣಾಮ ಬೀರಲಿದೆ ಎಂದರು ತಿಳಿಸಿದರು.

**ವಾರದೊಳಗೆ ಹೈಕಮಾಂಡ್ ಗೆ ಅಭ್ಯರ್ಥಿಗಳ ಲಿಸ್ಟ್:** ಲೋಕಸಭೆ ಚುನಾವಣೆಗೆ ಸಂಬಂಧಿಸಿದಂತೆ ಬೆಳಗಾವಿ ಮತ್ತು ಚಿಕ್ಕೋಡಿ ಲೋಕಸಭಾ ಕ್ಷೇತ್ರಕ್ಕೆ ಸಂಬಂಧಿಸಿದಂತೆ ಎರಡು ಕ್ಷೇತ್ರಗಳಲ್ಲಿ ಚುನಾವಣೆಗೆ ಸ್ಪರ್ಧಿಸಲು ಬಯಸುವಂತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಪಡೆದು ಹೈಕಮಾಂಡ್ ಗೆ ಸಲ್ಲಿಸಲಾಗುವುದು. ಇನ್ನು ವಿಜಯಪುರಕ್ಕೂ ಹೋಗಿ ನಾಳೆ ಸಭೆ ನಡೆಸುತ್ತಿದ್ದು, ಎಲ್ಲ ಅರ್ಜಿಗಳನ್ನು ಒಟ್ಟಾರೆ ಸಲ್ಲಿಸಲಾಗುವುದು ಎಂದರು.

ಈ ಸಂದರ್ಭದಲ್ಲಿ ವಿಧಾನ ಪರಿಷತ್ ಸದಸ್ಯ ನಾಗರಾಜ ಯಾದವ್, ಬೆಳಗಾವಿ ಜಿಲ್ಲಾ ಗ್ರಾಮೀಣ ಕಾಂಗ್ರೆಸ್ ಅಧ್ಯಕ್ಷ ವಿನಯ ನಾವಲಗಟ್ಟಿ, ಚಿಕ್ಕೋಡಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಲಕ್ಷ್ಮಣರಾವ್ ಚಿಗಂಳೆ, ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಸುನೀಲ್ ಹಣಮನ್ನವರ್, ಕೆಪಿಸಿಸಿ ಸದಸ್ಯ ಕಿರಣ ಸಾಧುನ್ನವರ್ ಸೇರಿದಂತೆ ಅನೇಕ ಹಿರಿಯ ಮುಖಂಡರು ಇದ್ದರು.

## 'ಆಳ್ವಾಸ್ ಶಿಕ್ಷಣ ಸಂಸ್ಥೆ'ಯ ಹಾಸ್ಟೆಲ್ ನಲ್ಲಿ ದ್ವಿತೀಯ ಪಿಯುಸಿ ವಿದ್ಯಾರ್ಥಿ ನೇಣಿಗೆ ಶರಣು



ದಕ್ಷಿಣ ಕನ್ನಡ: ಜಿಲ್ಲೆಯ ಮೂಡಬಿದ್ರಿಯಲ್ಲಿ ಆಳ್ವಾಸ್ ಶಿಕ್ಷಣ ಸಂಸ್ಥೆಯ ಹಾಸ್ಟೆಲ್ ನಲ್ಲಿ ದ್ವಿತೀಯ ಪಿಯುಸಿ ವ್ಯಾಸಂಗ ಮಾಡುತ್ತಿದ್ದಂತ ವಿದ್ಯಾರ್ಥಿಯೊಬ್ಬ ನೇಣುಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿರೋದಾಗಿ ತಿಳಿದು ಬಂದಿದೆ.

ದಕ್ಷಿಣ ಕನ್ನಡ ಜಿಲ್ಲೆಯ ಮೂಡಬಿದ್ರಿಯ ಆಳ್ವಾಸ್ ಶಿಕ್ಷಣ ಸಂಸ್ಥೆಯ ಹಾಸ್ಟೆಲ್ ನಲ್ಲಿ ಇಂದು ದ್ವಿತೀಯ ಪಿಯುಸಿ ವ್ಯಾಸಂಗ ಮಾಡುತ್ತಿದ್ದ ಮನೋಜ್(18) ಎಂಬ ವಿದ್ಯಾರ್ಥಿ ನೇಣುಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿರೋ ಘಟನೆ ನಡೆದಿದೆ.

ಮೃತ ಮನೋಜ್ ಗದಗ ಜಿಲ್ಲೆಯ ಮುಂಡರಗಿ ತಾಲೂಕಿನ ತರ್ಚಿಹಾಳ ಗ್ರಾಮದ ಮಲ್ಲಪ್ಪ ಎಂಬುವರ ಪುತ್ರ ಎಂಬುದಾಗಿ ತಿಳಿದು ಬಂದಿದೆ. ಈ ವಿಷಯ ತಿಳಿದು ಪೋಷಕರು ನಾವು ಸ್ಥಳಕ್ಕೆ ಆಗಮಿಸೋವರೆಗೆ ಪುತ್ರನ ಶವವನ್ನು ಇಳಿಸದಂತೆ ಆಗ್ರಹಿಸಿದ್ದಾರೆ.

ಈ ವಿಷಯ ತಿಳಿದು ಮೂಡಬಿದ್ರಿ ಠಾಣೆಯ ಪೊಲೀಸರು ಸ್ಥಳಕ್ಕೆ ಆಗಮಿಸಿ ಪರಿಶೀಲಿಸಿ ದೂರು ದಾಖಲಿಸಿಕೊಂಡಿದ್ದಾರೆ. ಮನೋಜ್ ಸಾವಿನ ಬಗ್ಗೆ ಪೋಷಕರು ಅನುಮಾನವನ್ನು ವ್ಯಕ್ತಪಡಿಸಿದ್ದಾರೆ.

## ಯುವತಿ ಸಾವು



ಹಾಸನ: ಹೇಮಾವತಿ ನದಿ ಹಿನ್ನೀರಿನಲ್ಲಿ ಮುಳುಗಿ ಯುವತಿಯೊಬ್ಬಳು ಸಾವನ್ನಪ್ಪಿದ ಘಟನೆ ಇಲ್ಲಿನ ಗೊರೂರಿನಲ್ಲಿ ನಡೆದಿದೆ.

ಮೃತ ಯುವತಿಯನ್ನು ಗೊರೂರು ಅರಳಿಕಟ್ಟೆ ಗ್ರಾಮದ ಗಿರೀಶ್ ಎಂಬುವರ ಪುತ್ರಿ ನಿತ್ಯ (19) ಎಂದು ಗುರುತಿಸಲಾಗಿದೆ. ಹನುಮ ಜಯಂತಿ ಪೂಜೆಗಾಗಿ ಸಂಬಂಧಿಕರೊಂದಿಗೆ ಗ್ರಾಮದ ಆಂಜನೇಯಸ್ವಾಮಿ ದೇವಸ್ಥಾನಕ್ಕೆ ಯುವತಿ ತೆರಳಿದ್ದಳು. ಈ ವೇಳೆ ಪೂಜೆ ಸಲ್ಲಿಸಿ ಹೇಮಾವತಿ ಹಿನ್ನೀರಿನಲ್ಲಿ ಆಟವಾಡುತ್ತಿದ್ದಾಗ ಆಕಸ್ಮಿಕವಾಗಿ ನೀರಿನಲ್ಲಿ ಮುಳುಗಿ ಸಾವನ್ನಪ್ಪಿದ್ದಾಳೆ.

ಯುವತಿಯ ಮೃತದೇಹಕ್ಕಾಗಿ ಅಗ್ನಿಶಾಮಕದಳದಿಂದ ಶೋಧಕಾರ್ಯ ನಡೆಯುತ್ತಿದೆ. ಸ್ಥಳಕ್ಕೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಗೊರೂರು ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಈ ಘಟನೆ ನಡೆದಿದೆ.

## ನವಜಾತ ಶಿಶುವಿನ ಶವ ಪತ್ತೆ



ಘಟಪ್ರಭಾ: ಸ್ಥಳೀಯ ಕಲಾಲ ಓಣಿಯಲ್ಲಿರುವ ಚರಂಡಿಯಲ್ಲಿ ನವಜಾತ ಶಿಶುವಿನ ಶವ ಭಾನುವಾರ ಪತ್ತೆಯಾಗಿದೆ. ಮಗುವಿನ ಸ್ಥಿತಿ ಕಂಡು ನಿವಾಸಿಗಳು ದಂಗಾಗಿದ್ದಾರೆ.

ಪ್ರಪಂಚ ನೋಡದ ಶಿಶುವನ್ನು ಚರಂಡಿಯಲ್ಲಿ ಬೀಸಾಡಿದ ಕ್ರೂರ ತಾಯಿ ನಿವಾಸಿಗಳು ಶಾಪಹಾಕಿದ್ದಾರೆ. ಪ್ಲಾಸ್ಟಿಕ್ ಬ್ಯಾಗಿನಲ್ಲಿ ಹಾಕಿ ಎಸೆಯಲಾಗಿದೆ. ಅಲ್ಲಿನ ಜನರು ಗಮನಿಸಿ ಪ್ಲಾಸ್ಟಿಕ್ ಬ್ಯಾಗ್ ತೆರೆದು ನೋಡಿದಾಗ ಅದರಲ್ಲಿ ನವಜಾತ ಗಂಡು ಶಿಶುವಿನ ಶವ ಸಿಕ್ಕಿದೆ.

ಈ ಬಗ್ಗೆ ಮಾಹಿತಿ ಪಡೆದುಕೊಂಡ ಘಟಪ್ರಭಾ ಪೋಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಪುರಸಭೆ, ಆರೋಗ್ಯ ಇಲಾಖೆ ಸಿಬ್ಬಂದಿಗಳು ಭೇಟಿ ನೀಡಿ ಮಾಹಿತಿ ಪಡೆದುಕೊಂಡಿದ್ದಾರೆ ಎನ್ನಲಾಗಿದೆ.

ನಿವಾಸಿ ರಹಮಾನ್ ಮುಖಾಶಿ ಮಾತನಾಡಿ, ಘಟಪ್ರಭಾದಲ್ಲಿ ನವಜಾತ ಶಿಶುವಿನ ಶವ ಪತ್ತೆ ಯಾಗಿರುವುದ ಸಮಾಜಕ್ಕೆ ಕಳಂಕಿತ, ನಗರದಲ್ಲಿ ನಡೆಯುತ್ತಿರುವ ಅನಧಿಕೃತ ಗರ್ಭಪಾತ (ಭ್ರೂಣ ಹತ್ಯೆಯ) ಕರಾಳ ದಂಧೆಯ ಭಾಗವಾಗಿದೆ ಎಂದು ಜನರು ಆರೋಪಿಸುತ್ತಿದ್ದಾರೆ. ಪೋಲಿಸ್ ಇಲಾಖೆ ಹಾಗೂ ಆರೋಗ್ಯ ಇಲಾಖೆಯವರು ಈ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿ ತಪ್ಪಿತಸ್ಥರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲು ಆಗ್ರಹಿಸಿದ್ದಾರೆ.

## ಹೋಟೆಲ್‌ನೊಳಗೆ ರೌಡಿ ಶೀಟರ್ ಹತ್ಯೆ

ಬೆಂಗಳೂರು: ರೌಡಿ ಶೀಟರ್ ಹಾಗೂ ಕೊಲೆ ಆರೋಪಿಯೊಬ್ಬನನ್ನು ಹೋಟೆಲ್‌ನೊಳಗಡೆಯೇ ಬರ್ಬರವಾಗಿ ಮಾರಕಾಸ್ತ್ರಗಳಿಂದ ಕೊಚ್ಚಿ ಹತ್ಯೆ ಮಾಡಲಾಗಿದೆ. ಆಡುಗೋಡಿ ಠಾಣೆ ವ್ಯಾಪ್ತಿಯ ಲಕ್ಕಸಂದ್ರದಲ್ಲಿ ಘಟನೆ ನಡೆದಿದೆ.

ಜೈಪ್ರಕಾಶ್ ಅಲಿಯಾಸ್ ಅಪ್ಪಿ ಕೊಲೆಯಾದ ರೌಡಿಶೀಟರ್. ಈತ ಆಟೋ ಚಾಲಕನಾಗಿ ಜೀವನ ನಡೆಸುತ್ತಿದ್ದ. ಜೈಪ್ರಕಾಶ್ 2006ರಲ್ಲಿ ಕೊಲೆ ಪ್ರಕರಣವೊಂದರಲ್ಲಿ ಜೈಲಿಗೆ ಹೋಗಿ ಬಂದಿದ್ದ. ಹಳೆ ದ್ವೇಷದ ಹಿನ್ನೆಲೆಯಲ್ಲಿ ಈ ಕೊಲೆ ನಡೆದಿರುವ ಶಂಕೆ ಇದೆ.

ಸಂಜೆ ಏಳು ಗಂಟೆ ಸುಮಾರಿಗೆ ಘಟನೆ ನಡೆದಿದೆ. ಲಕ್ಕಸಂದ್ರ ಬಸ್ ನಿಲ್ದಾಣ ಬಳಿಯ ಆಂಜನೇಯ ದೇವಸ್ಥಾನದ ಬಳಿ ಇದ್ದ ಜೈಪ್ರಕಾಶ್ ಹನುಮಜಯಂತಿ ಹಿನ್ನೆಲೆಯಲ್ಲಿ ಅನ್ನದಾನ ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದ.



ಈ ವೇಳೆ ಕೆಲ ಹೊತ್ತು ಜೈಪ್ರಕಾಶ್‌ನನ್ನು ಗಮನಿಸಿದ್ದ ನಾಲ್ಕೈದು ಜನ ಆರೋಪಿಗಳು ಏಳು ಗಂಟೆ ಸುಮಾರಿಗೆ ಏಕಾಏಕಿ ಮಾರಕಾಸ್ತ್ರಗಳಿಂದ ಅಟ್ಯಾಕ್ ಮಾಡಿದ್ದಾರೆ.

ಇವರಿಂದ ತಪ್ಪಿಸಿಕೊಳ್ಳಲು ಕೆಲ ದೂರ ಓಡಿದ್ದ ಜೈಪ್ರಕಾಶ್ ವಿಜಯ ಸಾಗರ ಹೋಟೆಲ್‌ಗೆ ನುಗ್ಗಿದ್ದಾನೆ. ಆರೋಪಿಗಳೂ ಹೋಟೆಲ್‌ಗೆ ನುಗ್ಗಿ ಅಲ್ಲಿಯೇ ಮಾರಕಾಸ್ತ್ರಗಳಿಂದ ಕೊಚ್ಚಿ ಕೊಲೆ ಮಾಡಿ ಎಸ್ಕೇಪ್ ಆಗಿದ್ದಾರೆ.

ಹತ್ಯೆ ನಡೆದ ಸ್ಥಳದಲ್ಲಿ ಬಿಗುವಿನ ವಾತಾವರಣ ಇದೆ. ಸ್ಥಳದಲ್ಲಿ ಕೆ.ಎಸ್.ಆರ್ಪಿ ತುಕಡಿ ನಿಯೋಜನೆ ಮಾಡಲಾಗಿದೆ.

ಸ್ಥಳಕ್ಕೆ ಎಫ್.ಎಸ್.ಎಲ್ ಹಾಗು ಡಾಗ್ ಸ್ಕ್ವಾಡ್ ಆಗಮಿಸಿದ್ದು, ಆಗ್ನೇಯ ವಿಭಾಗ ಡಿಸಿಪಿ ಸಿ.ಕೆ.ಬಾಬಾ ಆಗಮಿಸಿ ಪರಿಶೀಲಿಸಿದ್ದಾರೆ. ಆಡುಗೋಡಿ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದಾರೆ.

"ಜಯಪ್ರಕಾಶ್ ಹತ್ಯೆ ಆರೋಪಿಗಳ ಪತ್ತೆಗೆ ಆಡುಗೋಡಿ, ಕೋರಮಂಗಲ ಠಾಣಾಧಿಕಾರಿ ಸೇರಿ 5 ತಂಡ ರಚನೆ ಮಾಡಲಾಗಿದೆ" ಎಂದು ಡಿಸಿಪಿ ಸಿ.ಕೆ.ಬಾಬಾ ತಿಳಿಸಿದ್ದಾರೆ.

## ಗ್ಯಾಸ್ ಗೀಸರ್ ಸೋರಿಕೆ ಪ್ರಜ್ಞೆ ತಪ್ಪಿ ಬಿದ್ದ ಯುವತಿ ಸಾವು



ಬೆಂಗಳೂರು: ಸಿಲಿಕಾನ್ ಸಿಟಿಯಲ್ಲಿ ಗ್ಯಾಸ್ ಗೀಸರ್ ಸೋರಿಕೆಯಾಗಿ ಮತ್ತೊಂದು ಅನಾಹುತ ಸಂಭವಿಸಿದೆ. ಗ್ಯಾಸ್ ಗೀಸರ್ನಿಂದ ಸೋರಿಕೆಯಾದ ವಿಷ ಅನಿಲದಿಂದ ಪ್ರಜ್ಞೆ ತಪ್ಪಿ ಬಿದ್ದಿದ್ದ ಯುವತಿ ಸಾವನ್ನಪ್ಪಿದ್ದಾರೆ. 23 ವರ್ಷದ ರಾಜೇಶ್ವರ ಮೃತ ಯುವತಿ.

ಕಾಮಾಕ್ಷಿಪಾಳ್ಯದ ಮೀನಾಕ್ಷಿ ನಗರದಲ್ಲಿ ಈ ದುರ್ಘಟನೆ ಸಂಭವಿಸಿದೆ.

ಖಾಸಗಿ ಕಂಪನಿಯಲ್ಲಿ ಕೆಲಸ ಮಾಡ್ತಿದ್ದ ರಾಜೇಶ್ವರಿ ತನ್ನ ಅಣ್ಣನ ಮದುವೆ ಸಮಾರಂಭದ ಹಿನ್ನೆಲೆಯಲ್ಲಿ ರಜೆ ಹಾಕಿದ್ದಳು. ಸ್ನಾನ ಮಾಡಲು ಹೋಗಿದ್ದ ವೇಳೆ ಈ ಅವಘಡ ಸಂಭವಿಸಿದೆ.

ಮೃತ ರಾಜೇಶ್ವರಿ ಗ್ಯಾಸ್ ಗೀಸರ್ನಿಂದ ಸೋರಿಕೆಯಾದ ವಿಷ ಅನಿಲದಿಂದ ಪ್ರಜ್ಞೆತಪ್ಪಿದ್ದಾಳೆ ಎನ್ನಲಾಗಿದೆ. ವಿಷಯ ತಿಳಿದ ಕುಟುಂಬಸ್ಥರು ಕೂಡಲೇ ಆಸ್ಪತ್ರೆಗೆ ದಾಖಲಿಸಿದ್ದರು ಏನು ಪ್ರಯೋಜನವಾಗಿಲ್ಲ. ಕಾಮಾಕ್ಷಿಪಾಳ್ಯ ಪೊಲೀಸ್ ಠಾಣೆಯಲ್ಲಿ ಈ ಕುರಿತ ಪ್ರಕರಣ ದಾಖಲಾಗಿದೆ.

## ಚಾರಣಕ್ಕೆ ತೆರಳಿದ್ದ ಯುವಕ ಬೆಟ್ಟದಲ್ಲೇ ಸಾವು



ಮಡಿಕೇರಿ: ಚಾರಣಕ್ಕೆ ತೆರಳಿದ್ದ ಯುವಕನೋರ್ವ ಹೃದಯಾಘಾತದಿಂದ ನಿಧನ ಹೊಂದಿದ ಘಟನೆ ಮಡಿಕೇರಿಯಲ್ಲಿ ನಡೆದಿದೆ.


ಮೃತ ದುರ್ದೈವಿಯನ್ನು ಜತಿನ್ ಕುಮಾರ್ (25) ಎಂದು ಗುರುತಿಸಲಾಗಿದ್ದು, ಈತ ಹರಿಯಾಣ ಮೂಲದ ನಿವಾಸಿಯಾಗಿದ್ದಾನೆ. ಕೊಡಗು ಜಿಲ್ಲೆಯ ಮಡಿಕೇರಿ ತಾ. ತಡಿಯಂಡಮೋಳು ಬೆಟ್ಟ ವೀಕ್ಷಣೆ ವೇಳೆ ಈ ಅವಘಡ ಸಂಭವಿಸಿದೆ.

ಬೆಂಗಳೂರಿನ ಖಾಸಗಿ ಕಂಪನಿ ಒಂದರಲ್ಲಿ ಕಾರ್ಯನಿರ್ವಹಿಸುತ್ತಿದ್ದ ಜತಿನ್ ಕುಮಾರ್, ತನ್ನ ಸ್ನೇಹಿತರೊಂದಿಗೆ ಮಡಿಕೇರಿಗೆ ಆಗಮಿಸಿದ್ದನು. ಅಂತೆಯೇ ಭಾನುವಾರ ಬೆಟ್ಟದ ಮೇಲೆ ತಲುಪಿದಾಗ ಎದೆನೋವು ಕಾಣಿಸಿಕೊಂಡಿದೆ. ಕೆಲಹೊತ್ತಿನಲ್ಲೇ ಎದೆ ನೋವು ಜಾಸ್ತಿ ಆಗಿ ಜತಿನ್ ಸ್ಥಳದಲ್ಲೇ ಕುಸಿದು ಬಿದ್ದು ಮೃತಪಟ್ಟಿದ್ದಾನೆ.

ಯುವಕ ಪ್ರಾಣಬಿಟ್ಟ ವಿಚಾರವನ್ನು ಸ್ನೇಹಿತರು ಕೂಡಲೇ ಸ್ಥಳೀಯರ ಸಹಾಯದಿಂದ ಪೊಲೀಸರಿಗೆ ತಿಳಿಸಿದ್ದು, ಅವರು ಸ್ಥಳಕ್ಕೆ ದೌಡಾಯಿಸಿದರು.

ನಂತರ ಬೆಟ್ಟದ ತುದಿಯಿಂದ ಕಚ್ಚಾರಸ್ತೆಯಲ್ಲಿ ಹರಸಾಹಸಪಟ್ಟು ಮೃತದೇಹವನ್ನು ಪೊಲೀಸರು ತಂದಿದ್ದಾರೆ. ಈ ಸಂಬಂಧ ನಾಪೋಕ್ಲು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ನಿರ್ಮಾಣ ಹಂತದ ಕಟ್ಟಡ ಕುಸಿತ: ಓರ್ವ ಕಾರ್ಮಿಕ ಸಾವು



ಬೆಂಗಳೂರು: ಕಟ್ಟಡ ನಿರ್ಮಾಣ ಕಾಮಗಾರಿ ವೇಳೆ ಪಕ್ಕದ ಕಟ್ಟಡ ಕುಸಿದು ಬಿದ್ದಿರುವ ಘಟನೆ ಸದ್ದುಗುಂಟೆಪಾಳ್ಯ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ. ಮಣ್ಣಿನ ಅಡಿ ಇಬ್ಬರು ಕಾರ್ಮಿಕರು ಸಿಲುಕಿದ್ದು, ಓರ್ವನನ್ನು ರಕ್ಷಣೆ ಮಾಡಲಾಗಿದೆ. ಮತ್ತೋರ್ವ ಕಾರ್ಮಿಕ ಸಾವನ್ನಪ್ಪಿದ್ದಾನೆ ಎನ್ನಲಾಗಿದೆ.

ಕಟ್ಟಡ ನಿರ್ಮಾಣ ಕಾಮಗಾರಿ ನಡೆಸುವಾಗ ಪಕ್ಕದಲ್ಲೇ ಇದ್ದ ಬೇರೆ ಕಟ್ಟಡ ಕುಸಿದು ಬಿದ್ದಿದೆ. ಘಟನಾ ಸ್ಥಳಕ್ಕೆ ಸದ್ದುಗುಂಟೆಪಾಳ್ಯ ಪೊಲೀಸರು ಹಾಗೂ ಅಗ್ನಿಶಾಮಕ ಸಿಬ್ಬಂದಿ ದೌಡಾಯಿಸಿದ್ದರು.

ಸ್ಥಳಕ್ಕಾಗಮಿಸಿದ ಅಗ್ನಿಶಾಮಕ ಸಿಬ್ಬಂದಿ ಮಣ್ಣಿನ ಅಡಿ ಸಿಲುಕಿದ್ದ ಓರ್ವ ಕಾರ್ಮಿಕನನ್ನು ರಕ್ಷಿಸಿದ್ದು, ಮತ್ತೋರ್ವನ ಮೃತದೇಹವನ್ನು ಹೊರಗಡೆ ತೆಗೆದಿದ್ದಾರೆ.

ಮಣ್ಣಿನಡಿ ಸಿಲುಕಿ ಸಾವನ್ನಪ್ಪಿದ ಕಾರ್ಮಿಕನನ್ನು ಬಿಹಾರದ ಸೋಮ್ ಪುರ್ ಮೂಲದ ರಂಜನ್ ಎಂದು ಗುರುತಿಸಲಾಗಿದೆ.

ಅವಶೇಷಗಳ ಅಡಿ ಸಿಲುಕಿದ್ದ ಮತ್ತೋರ್ವ ಕಾರ್ಮಿಕನನ್ನು ರಕ್ಷಣೆ ಮಾಡಿ ಸೆಂಟ್ ಜಾನ್ ಆಸ್ಪತ್ರೆಗೆ ಶಿಫ್ಟ್ ಮಾಡಲಾಗಿದೆ.

## ಡಿ. 31 ರಂದು ಡಾ. ಡಿ.ಎಸ್.ಕರ್ಕಿ ಪ್ರಶಸ್ತಿ ಪ್ರದಾನ



ಬೆಳಗಾವಿ: ಇಲ್ಲಿನ ಡಾ. ಡಿ.ಎಸ್.ಕರ್ಕಿ ಪ್ರತಿಷ್ಠಾನ ಟ್ರಸ್ಟ್ ಪ್ರತಿ ವರ್ಷ ನೀಡುವ ಡಾ.ಡಿ.ಎಸ್. ಕರ್ಕಿ ಕಾವ್ಯ ಪ್ರಶಸ್ತಿ–2023 ಪುರಸ್ಕೃತ ಮೂರು ಕೃತಿಗಳು ಆಯ್ಕೆಯಾಗಿವೆ.

ಇಂದಿರಾ ಮೋಟೆಬೆನ್ನೂರ್ ಬೆಳಗಾವಿ ಇವರ ' ಭಾವ ಬೆಳಗು', ಶ್ರೀದೇವಿ ಕೆಮನೆ ಕಾರವಾರ ,ಇವರ 'ಆಸೆಯೆಂಬ ಶೂಲದ ಮೇಲೆ' ಹಾಗೂ ಆಶಾ ಕಡಪಟ್ಟಿ ಬೆಳಗಾವಿ ಇವರ , 'ಹರಕು ಕೌದಿಯ ಕಿಂಡಿ ' ಕೃತಿಗಳು ಆಯ್ಕೆಯಾಗಿವೆ.

ಪ್ರಶಸ್ತಿ ಪ್ರದಾನ ಸಮಾರಂಭವು ಭಾನುವಾರ ಡಿ. 31 ರಂದು ಬೆಳಗಾವಿ ಕನ್ನಡ ಸಾಹಿತ್ಯ ಭವನದಲ್ಲಿ ಜರುಗಲಿದೆ. ಇವರೊಡನೆ ತಮ್ಮ ಕೃತಿಗಳನ್ನು ಕಳಿಸಿದ ಎಲ್ಲ ಕವಿಗಳನ್ನು ಹಾರ್ದಿಕವಾಗಿ ಅಭಿನಂದಿಸುತ್ತೇವೆ ಎಂದು ಪ್ರತಿಷ್ಠಾನದ ಕಾರ್ಯದರ್ಶಿ ಪ್ರೊ. ಗಿರೀಶ್ ಕರ್ಕಿ ಇವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜನರ ಒಗ್ಗಟ್ಟಿನ ಪ್ರತೀಕವಾಗಿ ಜಾತ್ರೆ ಹಾಗೂ ಉತ್ಸವಗಳು ನಡೆಯುತ್ತವೆ: ಚನ್ನರಾಜ ಹಟ್ಟಿಹೊಳಿ

ಬೆಳಗಾವಿ: ಗ್ರಾಮೀಣ ಪ್ರದೇಶದಲ್ಲಿ ನಡೆಯುವ ಜಾತ್ರೆ, ಉತ್ಸವಗಳನ್ನು ನೋಡುವುದೇ ಚಂದ. ಇಡೀ ಗ್ರಾಮದ ಜನರು ತಮ್ಮನ್ನು ಸಂಪೂರ್ಣವಾಗಿ ತೊಡಗಿಸಿಕೊಂಡು ಶ್ರದ್ಧೆ, ಭಕ್ತಿಯಿಂದ ಪಾಲ್ಗೊಳ್ಳುತ್ತಾರೆ. ಗ್ರಾಮೀಣ ಜನರ ಒಗ್ಗಟ್ಟಿನ ಪ್ರತೀಕವಾಗಿ ಜಾತ್ರೆ ಹಾಗೂ ಉತ್ಸವಗಳು ನಡೆಯುತ್ತವೆ ಎಂದು ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ ಹೇಳಿದ್ದಾರೆ.

ಸುಕ್ಷೇತ್ರ ಬಡಾಲ ಅಂಕಲಗಿ ಗ್ರಾಮದ ಸದ್ಗುರು ಶ್ರೀ ಸಿದ್ಧಾರೂಢರ ಮೂರನೇಯ




ಜಾತ್ರಾ ಮಹೋತ್ಸವದಲ್ಲಿ ಸೋಮವಾರ ಭಾಗವಹಿಸಿ ಅವರು ಮಾತನಾಡಿದರು. ಜನರು ಯಾಲವುದೇ ಭೇದ, ಭಾವವಿಲ್ಲದೆ ದೇವರ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುತ್ತಾರೆ. ತನು, ಮನ, ಧನದಿಂದ ತೊಡಗಿಸಿಕೊಳ್ಳುತ್ತಾರೆ. ಇಂತಹ ಸಾಂಪ್ರದಾಯಿಕ ಆಚರಣೆಗಳು ನಮ್ಮನ್ನು ಒಂದುಗೂಡಿಸುತ್ತವೆ ಎಂದು ಅವರು ತಿಳಿಸಿದರು.

ಈ ಸಮಯದಲ್ಲಿ ಹುಬ್ಬಳ್ಳಿಯ ರಾಜವಿದ್ಯಾಶ್ರಮದ ಶೋ.ಬ್ರ.ನಿಷ್ಠ ಭಾರತ ಭೂಷಣ ನವಚೇತನ ಶ್ರೀ ಷಡಕ್ಷರಿ ಮಹಾಸ್ವಾಮಿಗಳು, ಬಡಾಲ ಅಂಕಲಗಿ ಶ್ರೀರಾಮ ಮಂದಿರದ ಪರಮಪೂಜ್ಯ ಮೌನಯೋಗಿ ಶ್ರೀ ರಾಚಯ್ಯ ಮಹಸ್ವಾಮಿಗಳು, ಬಾಬು ಮಾಸಣ್ಣವರ, ಸಿದ್ದು ಚಾಪಗಾಂವಿ, ವಿಠ್ಠಲ ಅರ್ಜುನವಾಡಿ, ಬಸವಂತ ನಾಯ್ಕ, ಪಡೆಪ್ಪ, ರಾಮನಗೌಡ ಪಾಟೀಲ, ಮುಶೆಪ್ಪ ಉಪ್ಪಾರ, ಯಲಗೌಡ ಪಾಟೀಲ, ಮಲ್ಲಿಕಾರ್ಜುನ ಹಳಮನಿ ಉಪಸ್ಥಿತರಿದ್ದರು.

## ಸಾಹಿತ್ಯಕ್ಕಿರುವ ಶಕ್ತಿಯನ್ನು ರಾಜಕಾರಣಿಗಳಿಗೆ ತೋರಿಸಬೇಕು: ಯ. ರು. ಪಾಟೀಲ

ಬೆಳಗಾವಿ: ರಾಜಕೀಯ ಪುಢಾರಿಗಳು ಕಲಿತುಕೊಳ್ಳಬೇಕಾದಂತಹ ಹಲವಾರು ವಿಷಯಗಳನ್ನೊಳಗೊಂಡಿರುವ 'ಮರಣ ಮೃದಂಗ' ನಾಟಕವನ್ನು ಮೊದಲು ರಾಜಕಾರಣಿಗಳಿಗೆ ತೋರಿಸಬೇಕು. ರಾಜಕಾರಣಿಗಳಿಗಾಗಿಯೇ ಈ ನಾಟಕ ಪ್ರದರ್ಶನವೊಂದನ್ನು ರಂಗಸಂಪದದವರು ಆಯೋಜಿಸಬೇಕು.

ಸಾಹಿತ್ಯಕ್ಕಿರುವ ಶಕ್ತಿಯನ್ನು ರಾಜಕಾರಣಿಗಳಿಗೆ ತೋರಿಸಬೇಕು ಎಂದು ಹಿರಿಯ ಸಾಹಿತಿ ಯ.ರು. ಪಾಟೀಲ ಇಂದಿಲ್ಲಿ ಹೇಳಿದರು.

ಶೇಖ ಆಸ್ಪತ್ರೆಯ ಎದುರಿಗಿರವ ಕನ್ನಡ ಭವನದಲ್ಲಿ ಕನ್ನಡ ಭವನದಲ್ಲಿ ರಂಗಸಂಪದದವರು 'ಕಾರಂತ ನಾಟಕೋತ್ಸವದ ಎರಡನೇ ದಿನವಾದ ಡಾ. ಅರವಿಂದ ಕುಲಕರ್ಣಿ ನಿರ್ದೇಶನದ ರಾಜೇಂದ್ರ ಕಾರಂತ ರಚನೆಯ 'ಮರಣ ಮೃದಂಗ' ನಾಟಕ ಪ್ರದರ್ಶನವನ್ನು ಹಮ್ಮಿಕೊಂಡಿದ್ದರು. ಈ ಸಂದರ್ಭದಲ್ಲಿ ಯ. ರು. ಪಾಟೀಲ ಅವರು ಮಾತನಾಡುತ್ತ ಮೇಲಿನಂತೆ ಹೇಳಿದರು.

ಮುಂದೆ ಮಾತನಾಡುತ್ತ ಯ. ರು. ಪಾಟೀಲ ಅವರು ಗಟ್ಟಿ ಕಥೆ, ಉತ್ತಮ ನಿರ್ದೇಶನ, ಅತ್ಯುತ್ತಮ ಅಭಿನಯ,



ಸುಮಧುರ ಸಂಗೀತ ಇವುಗಳ ಸಮ್ಮಿಲನವೇ ಇಂದಿನ ರಾಜೇಂದ್ರ ಕಾರಂತ ರಚನೆಯ ಮರಣ ಮೃದಂಗ ನಾಟಕ. ಇದೊಂದು ಶ್ರೇಷ್ಠ ನಾಟಕ ಎಂದು ಮೆಚ್ಚುಗೆ ವ್ಯಕ್ತ ಪಡಿಸಿದರು.

ಕಾರಂಜಿ ಮಠದ ಸ್ವಾಮೀಜಿಯವರು ತಮ್ಮ ಆಶೀರ್ವಚನದಲ್ಲಿ ರಾಜಕಾರಣ ವಿಡಂಬನೆಗಳ ನಾಟಕ, ದೂರದರ್ಶನ ದಾರಾವಾಹಿಗಳಲ್ಲಿ ನೋಡಿ, ಪತ್ರಿಕೆಗಳಲ್ಲಿಯ ಲೇಖನಗಳನ್ನು ನೋಡಿದರೂ ಸಹ ರಾಜಕೀಯ ದಾಹವೇಕೆ ಕಡಿಮೆಯಾಗುತ್ತಿಲ್ಲ.

ಇಂದಿನ ನಾಟಕ ಮರಣ ಮೃದಂಗ ಹೇಳುವಂತೆ ಮನುಷ್ಯನ ಅಂತ್ಯಕಾಲದಲ್ಲಿ ಸಿಗುವ ಸುಖ ಶಾಂತಿಯೇ ನಿಜವಾದ ಆಸ್ತಿ. ಡಾ. ಅರವಿಂದ ಕುಲಕರ್ಣಿಯವರ ನಿರ್ದೇಶನದಲ್ಲಿ ನಾಟಕ ಚೆನ್ನಾಗಿ ಮೂಡಿ ಬಂದಿದೆ ಎಂದು ಹೇಳಿದರು.

ನಿರ್ದೇಶಕ ಡಾ. ಅರವಿಂದ ಕುಲಕರ್ಣಿಯವರು ಮಾತನಾಡಿ ಮುದ್ದಣ್ಣನ ಪ್ರಮೋಷನ್ ಪ್ರಸಂಗ ಹಾಸ್ಯನಾಟಕದಲ್ಲಿ ತಮ್ಮ ಅಭಿನಯದಿಂದ ಹೊಟ್ಟೆ ಹುಣ್ಣಾಗುವಂತೆ ನಗೆಸಿದ ಕಲಾವಿದರೇ ಇಂದು ರಾಜಕೀಯ ವಿಡಂಬನೆಯ ಮರಣ ಮೃದಂಗ ಗಂಭೀರ ನಾಟಕದಲ್ಲಿ ಅಷ್ಟೇ ಸಮರ್ಥವಾಗಿ ಅಭಿನಯಿಸಿದ್ದಾರೆ ಇದುವೇ ಕಲಾವಿದನ ನಿಜವಾದ ಕೌಶಲ್ಯವೆಂದು ಹೇಳಿದರು

ಕಲಾವಿದರಾದ ಡಾ. ಅರವಿಂದ ಕುಲಕರ್ಣಿ, ಅರವಿಂದ ಪಾಟೀಲ, ಪ್ರಸಾದ ಕಾರಜೋಳ, ರುದ್ರೇಶ ಹಿರೇಮಠ, ಪೂರ್ವಿ ರಾಜಪುರೋಹಿತ, ಪೂಜಾ ಕಾರಜೋಳ, ಪದ್ಮಾ ಕುಲಕರ್ಣಿ, ಪ್ರತಿಭಾ ಕಳ್ಳಿಮಠ, ವಿನೋದ ಸಪ್ಪಣ್ಣವರ, ಯೋಗೇಶ ದೇಶಪಾಂಡೆ, ಪ್ರೀತಿ ಕುಲಕರ್ಣ, ಆರ್ವಿ. ಭಟ್, ಎ. ಎಂ. ಕುಲಕರ್ಣಿ, ಶರಣಯ್ಯ ಮಠಪತಿ, ಪ್ರಶಾಂತ ಪಾಂಡವ ಅಭಿನಯಿಸಿದ್ದು ಸಂಗೀತ ಶ್ರೀಪತಿ ಮಂಜನಬೈಲು, ಅಂತರಾ ಕುಲಕರ್ಣಿ ಅವರದಾಗಿತ್ತು.

ಗುರುನಾಥ ಕುಲಕರ್ಣಿ, ರಾಮಚಂದ್ರ ಕಟ್ಟಿ, ನರರೋಗ ತಜ್ಞ ಡಾ. ಜಿ.ಎಂ. ವಾಲಿ, ಚಿದಾನಂದ ವಾಳಕೆ, ವಿಜಯಲಕ್ಷ್ಮೀ ಕುಲಕರ್ಣಿ, ಪತ್ರಕರ್ತ ಮುರುಗೇಶ ಶಿವಪೂಜಿ, ಯುವ ನಿರ್ದೇಶಕ ಉಮೇಶ ಬಡಿಗೇರ ಮುಂತಾದವರು ಉಪಸ್ಥಿತರಿದ್ದರು.

## ಕ್ರಿಸ್ ಮಸ್ ಟ್ರೀ ಇಡದಂತೆ ಬೆದರಿಕೆ; ಪುನೀತ್ ಕೆರೆಹಳ್ಳಿ ವಿರುದ್ಧ ಎಫ್ಐಆರ್



ಬೆಂಗಳೂರು: ಬ್ಯಾಟರಾಯನ ಪುರದ ಮಾಲ್ ಆಫ್ ಏಷ್ಯಾದಲ್ಲಿ ಕ್ರಿಸ್ ಮಸ್ ಹಬ್ಬದ ಪ್ರಯುಕ್ತ ಕ್ರಿಸ್ ಮಸ್ ಟ್ರೀ ಅಲಂಕಾರ ಏರ್ಪಡಿಸಿರುವುದರ ವಿರುದ್ಧ ತಗಾದೆ ಎಬ್ಬಿಸಿ ದಾಂಧಲೆ ನಡೆಸಿದ ಆರೋಪದ ಮೇಲೆ ಹಿಂದೂಪರ ಹೋರಾಟಗಾರ ಪುನೀತ್ ಕೆರೆಹಳ್ಳಿ ವಿರುದ್ಧ ಎಫ್ಐಆರ್ ದಾಖಲಾಗಿದೆ. ಪುನೀತ್ ಕೆರೆಹಳ್ಳಿ ಮತ್ತು ಅವರ ನಾಲ್ವರು ಬೆಂಬಲಿಗರ ವಿರುದ್ಧ ಬ್ಯಾಟರಾಯನಪುರದ ಮಾಲ್ ಆಫ್ ಏಷ್ಯಾದ ಸೆಕ್ಯೂರಿಟಿ ಅಸಿಸ್ಟೆಂಟ್ ಮ್ಯಾನೇಜರ್ ಸ್ಟೀಫನ್ ವಿಕ್ಟರ್ ನೀಡಿರುವ ದೂರಿನ ಅನ್ವಯ ಕೊಡಿಗೆಹಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಡಿ. 23 ರಂದು ಬ್ಯಾಟರಾಯನಪುರದ ಮಾಲ್ ಆಫ್ ಏಷ್ಯಾ ಬಳಿ ತೆರಳಿದ್ದ ಪುನೀತ್ ಕೆರೆಹಳ್ಳಿ ಮತ್ತವರ ಬೆಂಬಲಿಗರು, ಮಾಲ್ ಒಳಗೆ ಕ್ರಿಸ್ಮಸ್ ಟ್ರೀ ಪ್ರದರ್ಶನ ಹಾಗೂ ಅದಕ್ಕೆ 200 ರೂ. ಟಿಕೆಟ್ ನಿಗದಿಪಡಿಸಿರುವುದನ್ನು ವಿರೋಧಿಸಿದ್ದಲ್ಲದೇ , ಸೆಕ್ಯೂರಿಟಿ ಅಸಿಸ್ಟೆಂಟ್ ಮ್ಯಾನೇಜರ್ ಸ್ಟೀಫನ್ ವಿಕ್ಟರ್ ಬಳಿ ವಾಗ್ವಾದ ನಡೆಸಿದ್ದರು. ಡಿ. 25 ರಂದು ಹಾಗೂ ಜ . 1 ರಂದು ಕೂಡ ಇದೇ ರೀತಿ ಗಲಾಟೆ ಮಾಡುವುದಾಗಿ ಬೆದರಿಕೆ ಒಡ್ಡಿದ್ದರು ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ.

ಸಂಪುಟ: 4 ಸಂಚಿಕೆ: 274 ಪುಟ: 4 RNI: KARKAN/2020/79084 Regn,No:G-2/PMG/KA/NK/BM/139/2021-23

BELAGAVI VARADI KANNADA DAILY MORNING : Editor, Printer, Publisher & Owned By : **Satish Basavani Gudagenatti,** Basavani House No.53, Ashray Colony, Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089